**ಸಂಪುಟ:** 05 **ಸಂಚಿಕೆ:** 125 **ಪುಟಗಳು:** 08 **ಶುಕ್ರವಾರ** 18 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿಮಗೆ ಸಹಾಯ ಮಾಡಿಕೊಳ್ಳದೆ ಇನ್ನೊಬ್ಬರಿಗೆ ಸಹಾಯ ಮಾಡಲು ಪ್ರಾಮಾಣಿಕವಾಗಿ ಪ್ರಯತ್ನಿಸಲು ಸಾಧ್ಯವಿಲ್ಲ ಎಂಬುದು ಈ ಜೀವನದ ಅತ್ಯಂತ ಸುಂದರವಾದ ಪರಿಹಾರಗಳಲ್ಲಿ ಒಂದಾಗಿದೆ.

# ಸ್ಥಗಿತಗೊಂಡ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಸೃಜನ ಕಾರ್ಯಕ್ರಮ

## ಹೊಸ ವ್ಯವಹಾರಗಳನ್ನು ಸ್ಥಾಪಿಸುವ ವ್ಯಕ್ತಿಗಳಿಗೆ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಗೆ ಸಹಾಯಧನ

• **ಬಾಣಾವರ ಉಮೇಶ್ ಉದಯವಾಹಿನಿ ಬೆಂಗಳೂರು**

ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮ ಪಿಎಂಇಜಿಪಿ ಎಂಬುದು ಕೇಂದ್ರ ಸರ್ಕಾರದ ಯೋಜನೆ ಆಗಿದ್ದು ಹೊಸ ವ್ಯವಹಾರಗಳನ್ನು ಸ್ಥಾಪಿಸುವ ವ್ಯಕ್ತಿಗಳಿಗೆ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಗೆ ಸಹಾಯಧನವನ್ನು ಒದಗಿಸುತ್ತದೆ

ಈ ಯೋಜನೆ ಅಡಿಯಲ್ಲಿ ಸಾಮಾನ್ಯ ವರ್ಗಕ್ಕೆ ಶೇಕಡ 25 ರಷ್ಟು ಮತ್ತು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಮಹಿಳೆಯರು ಮತ್ತು ದೈಹಿಕವಾಗಿ ಅಶಕ್ತ ವ್ಯಕ್ತಿಗಳಿಗೆ ಮತ್ತು ವಿಶೇಷ ವರ್ಗಗಳಿಗೆ ಶೇಕಡ 35 ರಷ್ಟು ಸಹಾಯಧನದ ಯೋಜನೆಯಾಗಿರುತ್ತದೆ ಇದರಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ



ಅವಕಾಶಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿದ್ದು ಹಣಕಾಸು ನೆರವು ಈ ಯೋಜನೆ ಹೊಸ ವ್ಯವಹಾರಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ರಾಷ್ಟ್ರೀಕೃತ ಬ್ಯಾಂಕ್‌ಗಳ ಮುಖಾಂತರ ಹಣಕಾಸಿನ ನೆರವು ನೀಡುತ್ತದೆ ಇದಲ್ಲದೆ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮವು ವ್ಯಕ್ತಿಗಳು ವ್ಯವಹಾರ ನಡೆಸಲು ಅಗತ್ಯವಾದ ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸಲು ಸಹಾಯ ಮಾಡುತ್ತದೆ


ಇಂತಹ ಕೇಂದ್ರ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯು ಕಳೆದ ಹಲವಾರು ತಿಂಗಳಿಂದ ರಾಜ್ಯದ ಹಲವಾರು ಜಿಲ್ಲೆಗಳಿಂದ ನಿರುದ್ಯೋಗಿ ಯುವಕ ಯುವತಿಯರು ಅರ್ಜಿಯ ಸಲ್ಲಿಸಲು ಸಹ ಆಗಿರುವುದಿಲ್ಲ ಅಲ್ಲದೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಅವರ ಅರ್ಜಿಯು ಸಹ ಬ್ಯಾಂಕಿಗೆ ಬಂದಿರುವುದಿಲ್ಲ.

ಇದರಿಂದಾಗಿ ಸಾಲ ಪಡೆಯುವುದಕ್ಕಾಗಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳು ಸ್ಪಷ್ಟ ಮಾಹಿತಿ ಇಲ್ಲದೆ ಗೊಂದಲಕ್ಕೀಡಾಗಿದ್ದಾರೆ. ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ಕೈಗಾರಿಕೆ ಇಲಾಖೆಗೆ ಸಂಬಂಧಪಟ್ಟ ಕಚೇರಿಗಳಲ್ಲಿ ಕೆವಿಐಸಿ ಮತ್ತು ಕೆವಿಐಬಿ ಇದಕ್ಕೆ ಸಂಬಂಧಪಟ್ಟ ಕಚೇರಿಗಳು ಇದ್ದು ಇಲ್ಲಿಯ ಸಿಬ್ಬಂದಿಗಳಿಗೂ

**ಉದಯವಾಹಿನಿ ಪತ್ರಿಕೆಯ ಮುಖಾಂತರ ಮನವಿ**

ಸಹ ಕೇಂದ್ರ ಸರ್ಕಾರದಿಂದ ಸ್ಪಷ್ಟ ಮಾಹಿತಿ ಇಲ್ಲದೆ ಕಚೇರಿಗೆ ಬರುವ ಅರ್ಜಿ ಸಲ್ಲಿಸಿರುವ ಫಲಾನುಭವಿಗಳಿಗೆ ಸರಿಯಾದ ಮಾಹಿತಿಯನ್ನು ಸಹ ನೀಡದೆ ಇಲಾಖೆ ಸಿಬ್ಬಂದಿಗಳು ಸಹ ಗೊಂದಲದಲ್ಲಿದ್ದಾರೆ.

ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಅವರು ಮತ್ತು ಕೇಂದ್ರ ಸರ್ಕಾರದ ಹಣಕಾಸು ಸಚಿವರಾದ ನಿರ್ಮಲ ಸೀತಾರಾಮನ್ ರವರು ಈ ಸಂಬಂಧಪಟ್ಟ ಇಲಾಖೆಗೆ ಸೂಕ್ತ ಸೂಚನೆ ನೀಡಿ



ರಾಜ್ಯದಲ್ಲಿ ಸಂಬಂಧಪಟ್ಟ ಇಲಾಖೆ ಮುಖಾಂತರ ಗೊಂದಲದಲ್ಲಿರುವ ನಿರುದ್ಯೋಗಿ ಯುವಕ ಯುವತಿ ಫಲಾನುಭವಿಗಳಿಗೆ ಸಲ್ಲಿಸಿರುವ ಅರ್ಜಿಗಳನ್ನು ಕೂಡಲೇ ಬ್ಯಾಂಕಿಗೆ ಕಳುಹಿಸಲು ಕ್ರಮ ಕೈಗೊಳ್ಳಬೇಕಾಗಿದೆ

ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸರಳಿಕೃತವಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿ ಅನುವು ಮಾಡಕೊಡಬೇಕಾಗಿ ಹಲವಾರು ಫಲಾನುಭವಿಗಳು ಕೇಂದ್ರ ಸರ್ಕಾರಕ್ಕೆ ತಮ್ಮ ಅಹವಾಲನ್ನು ಉದಯವಾಹಿನಿ ಪತ್ರಿಕೆಯ ಮುಖಾಂತರ ಮನವಿ ಮಾಡಿದ್ದಾರೆ.

## ಹೊಸದಾದ ನೈರುತ್ಯ ವಿಭಾಗದ ಡಿಸಿಪಿ ಕಚೇರಿ ಕಾರ್ಯಾರಂಭ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಹೊಸದಾಗಿ ಆರಂಭಿಸಿರುವ ನೈರುತ್ಯ ವಿಭಾಗದ ಡಿಸಿಪಿ ಕಚೇರಿಯನ್ನು ಜ್ಞಾನಭಾರತಿ ಪೊಲೀಸ್ ಠಾಣೆಯ ಕಟ್ಟಡದಲ್ಲಿ ತೆರೆಯಲಾಗಿದೆ. ಈ ಹೊಸ ವಿಭಾಗಕ್ಕೆ ಸಂಚಾರ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿದ್ದ ಡಿಸಿಪಿ ಅನಿತಾ ಬಿ.ಹದ್ದಣ್ಣವರ್ ಅವರನ್ನು ಸರ್ಕಾರ ವರ್ಗಾವಣೆ ಮಾಡಿದೆ. ಇವರು ನಿನ್ನೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಈ ವಿಭಾಗಕ್ಕೆ ಏಳು ಪೊಲೀಸ್ ಠಾಣೆಗಳು ಸೇರ್ಪಡೆಗೊಂಡಿವೆ. ಪಶ್ಚಿಮ ವಿಭಾಗದಿಂದ ಕೆಂಗೇರಿ, ಜ್ಞಾನಭಾರತಿ, ಕುಂಬಳಗೋಡು ಹಾಗೂ ದಕ್ಷಿಣ ವಿಭಾಗದಿಂದ ಸುಬ್ರಮಣ್ಯಪುರ, ತಲಘಟ್ಟಪುರ, ಕೋಣನಕುಂಟೆ, ಕುಮಾರ್‌ಸ್ವಾಮಿ ಲೇಔಟ್ ಸೇರಿವೆ. ಈ ಠಾಣೆಗಳ ವ್ಯಾಪ್ತಿಗಳ ಸಾರ್ವಜನಿಕರು ತಮ ಸಮಸ್ಯೆಗಳಿಗೆ ಜ್ಞಾನಭಾರತಿ ಪೊಲೀಸ್ ಠಾಣೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿಸಿಪಿ ಅವರನ್ನು ಸಂಪರ್ಕಿಸಿ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಸರ್ಕಾರ ನಗರದಲ್ಲಿ ವಾಯವ್ಯ ವಿಭಾಗ ಮತ್ತು ಎಲೆಕ್ಟ್ರಾನಿಕ್ ಸಿಟಿ ಎರಡು ಹೊಸ ವಿಭಾಗಗಳನ್ನು ಸಹ ಆರಂಭಿಸಲಾಗಿದೆ. ನಗರದಲ್ಲಿ ಇದೀಗ ಒಟ್ಟು 11 ಕಾನೂನು ಮತ್ತು ಸುವ್ಯವಸ್ಥೆ ವಿಭಾಗಗಳಿವೆ. ಟೆಂಡರ್‌ನಲ್ಲಿದ್ದವು.

## ಕುಂಟುತ್ತ ಸಾಗಿದೆ ಸರ್ಕಾರ ಭರವಸೆ ನೀಡಿದ್ದ ಇ- ಖಾತಾ ಹಂಚಿಕೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರದ ಎಲ್ಲಾ ನಿವೇಶನದಾರರಿಗೂ ಇ ಖಾತೆ ಹಂಚಿಕೆ ಮಾಡುವ ಭರವಸೆ ನೀಡಿದ್ದ ಸರ್ಕಾರದ ಯೋಜನೆ ಕುಂಟುತ್ತಾ ಸಾಗತೊಡಗಿದೆ. ಈ ಯೋಜನೆ ಸಾಕಾರಕ್ಕೆ ಬಿಬಿಎಂಪಿ ಕಂದಾಯ ಅಧಿಕಾರಿಗಳು ಸಹಕಾರ ನೀಡುತ್ತಿಲ್ಲ. ಹೀಗಾಗಿ ಪ್ರತಿನಿತ್ಯ ಬೆರಳೆಣಿಕಯ ಖಾತಾ ಹಂಚಿಕೆಯಾಗುತ್ತಿದೆ. ಒಂದು ದಿನಕ್ಕೆ ಒಂದು ವಾರ್ಡ್‌ನಲ್ಲಿ ಕೇವಲ 8 ಇ ಖಾತ ಮಾತ್ರ ಹಂಚಿಕೆ ಮಾಡಲಾಗುತ್ತಿದೆ. ಒಟ್ಟು 225 ವಾರ್ಡ್‌ನಲ್ಲಿ 1,800 ಇ ಖಾತೆ ಮಾತ್ರ ವಿತರಿಸಲಾಗುತ್ತಿದೆ. ಕಳೆದ ಹತ್ತು ತಿಂಗಳಿನಿಂದ ಬಿಬಿಎಂಪಿ ಹಂಚಿರೋದು 5 ಲಕ್ಷದ 84 ಸಾವಿರ ಇ ಖಾತ ಮಾತ್ರ. ಒಟ್ಟು 20 ಲಕ್ಷದ 57 ಸಾವಿರ ಸ್ವತ್ತುಗಳು ಪಾಲಿಕೆಯ ಅಧಿಕೃತ ಪಟ್ಟಿಯಲ್ಲಿದೆ. ಈ ಪೈಕಿ ಇನ್ನೂ 15 ಲಕ್ಷಕ್ಕೂ ಅಧಿಕ ಸ್ವತ್ತುಗಳಿಗೆ ಇ ಖಾತ ನೀಡಲು ಬಾಕಿ ಇರುವುದನ್ನು ನೋಡಿದರೆ ಬಿಬಿಎಂಪಿ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯ ಎದ್ದು ಕಾಣುವಂತಾಗಿದೆ. ಖಾತೆಗೆ ಜನ ಅರ್ಜಿ ಹಾಕಿದರೂ ಇ ಖಾತ ನೀಡದೆ ಬಿಬಿಎಂಪಿ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ. ಈ ಧೋರಣೆಯಿಂದ ಸ್ವತ್ತಿನ ಖಾತೆದಾರರಲ್ಲಿ ಆತಂಕ ಮನೆ ಮಾಡುವಂತಾಗಿದೆ. ಸರಿಯಾದ ಸಮಯಕ್ಕೆ ಇ ಖಾತ ಸಿಗದೆ ತಮ್ಮ ಆಸ್ತಿಯನ್ನು ಮಾರಾಟ ಮಾಡಲು ಇಲ್ಲವೆ ವರ್ಗಾವಣೆ ಮಾಡಲು ಸಾಧ್ಯವಾಗದೆ ಜನ ಪರಿತಪಿಸುವಂತಾಗಿದೆ.

## ನ್ಯಾಯಾಲಯದಿಂದ ಇತ್ಯರ್ಥವಾದ ನಂತರ ಕಾವೇರಿ ಆರತಿ ಪ್ರಕ್ರಿಯೆ

• **ಉದಯವಾಹಿನಿ, ಬೆಂಗಳೂರು**


ಕಾವೇರಿ ಆರತಿ ನಡೆಸುವ ವಿಚಾರ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದ್ದು, ನ್ಯಾಯಾಲಯದಿಂದ ಇತ್ಯರ್ಥವಾದ ನಂತರ ನಾವು ಕಾವೇರಿ ಆರತಿ ಪ್ರಕ್ರಿಯೆಯನ್ನು ಪುನಃ ಪ್ರಾರಂಭಿಸುತ್ತೇವೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದರು. ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ ಮಾಡಲು ಉದ್ದೇಶಿಸಲಾಗಿದೆ. ಈ ವಿಚಾರ ನ್ಯಾಯಾಲಯದಲ್ಲಿ ಇದೀಗ ವಿಚಾರಣೆ ನಡೆಯುತ್ತಿದ್ದು, ಅದು ಮುಗಿದ ಬಳಿಕ ನಾವು ಸೂಕ್ತ ತೀರ್ಮಾನ ಮಾಡುತ್ತೇವೆ ಎಂದರು. ರಾಜ್ಯ ಸರ್ಕಾರ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳನ್ನು ಬಿಜೆಪಿಯವರು ವಿರೋಧಿಸಿದರು. ಆದರೆ ದೆಹಲಿಯಲ್ಲಿ ಅವರೇ ಜಾರಿಗೆ ತಂದರು. ಬಿಜೆಪಿಯವರು ಹೇಳಿದಂತೆ ನಡೆದುಕೊಂಡಿಲ್ಲ. ಗ್ಯಾರಂಟಿ ಯೋಜನೆಗಳು ಅನುಕೂಲವಾಗಿವೆ ಎಂದರು.

**ಖರ್ಗೆ ಸಿಎಂ ಆಗದಂತೆ ತಪ್ಪಿಸಿದ್ದು ಯಾರೆಂದು ಉತ್ತರಿಸಿ ಎಂದ ಬಿವೈವಿ**

**ವಿಜಯೇಂದ್ರ ಮೊದಲು ತನ್ನ ಕುರ್ಚಿ ಕಾಲುಗಳನ್ನ ಭದ್ರ ಮಾಡಿಕೊಳ್ಳಲಿ**

**ನಿಮ್ಮ ಕುರ್ಚಿಯೇ ಗಟ್ಟಿಯಿಲ್ಲ, ನಮಗೆ ಹೇಳಲು ಬರುತ್ತೀರಾ..?**

# ಬಾಯಲ್ಲಿ ಬಡಾಯಿ, ಕುರ್ಚಿ ಲಡಾಯಿ



**ಮಲ್ಲಿಕಾರ್ಜುನ ಖರ್ಗೆ ಅಸ್ತ್ರ ಪ್ರಯೋಗಿಸಿದ ವಿಜಯೇಂದ್ರ**

**ವಿಜಯೇಂದ್ರಗೆ ಸಿದ್ದರಾಮಯ್ಯ ಎಸೆದ 'ಪಂಚ' ಸವಾಲುಗಳು**



• **ಉದಯವಾಹಿನಿ, ಬೆಂಗಳೂರು**

ತಾನು ಕೂತಿರುವ ಕುರ್ಚಿಯ 4 ಕಾಲುಗಳನ್ನು ಭದ್ರವಾಗಿ ಇಟ್ಟುಕೊಳ್ಳಲಾಗದ ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರಾಗಬೇಕೆಂದು ಸಲಹೆ ನೀಡುತ್ತಿರುವುದು ಅವರ ಅಜ್ಞಾನ ಮತ್ತು ಆತ್ಮವಂಚನೆಯನ್ನು ಮಾತ್ರವಲ್ಲ, ದುರಹಂಕಾರವನ್ನೂ ಸೂಚಿಸುತ್ತದೆ ಎಂದಿದ್ದರು. ಮಾತ್ರವಲ್ಲ, ದಲಿತರನ್ನು ಬಿಜೆಪಿ ರಾಜ್ಯಾಧ್ಯರನ್ನಾಗಿ ನೇಮಿಸಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಇದೀಗ ಈ ಹೇಳಿಕೆಗೆ ವಿಜಯೇಂದ್ರ ಕೂಡ ತಿರುಗೇಟು ನೀಡಿದ್ದಾರೆ.

ಸದ್ಯ ಎಕ್ಸ್ ಪೋಸ್ಟ್ ಮೂಲಕ ಪ್ರತಿಕ್ರಿಯೆ ನೀಡಿದ ಬಿವೈ ವಿಜಯೇಂದ್ರ, ದಲಿತರನ್ನು ರಾಜ್ಯಾಧ್ಯಕ್ಷರಾಗಿ ಮಾಡಿ ಎಂಬ ಸಿಎಂ ಮಾತಿಗೆ ವಿಜಯೇಂದ್ರ ತಿರುಗೇಟು ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಮಲ್ಲಿಕಾರ್ಜುನ್ ಖರ್ಗೆಯವರನ್ನು ಮುಖ್ಯಮಂತ್ರಿಯಾಗಿ ಮಾಡುವ ಅವಕಾಶ ಇದ್ದರೂ ತಪ್ಪಿಸಿದ್ದು ಯಾರೆಂದು ಪ್ರಶ್ನಿಸಿ ತಿರುಗೇಟು ನೀಡಿದ್ದಾರೆ. ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆ ಚರ್ಚೆ ನಡುವೆ ಖರ್ಗೆ ಹೆಸರನ್ನು ಮುನ್ನಲೆಗೆ ತಂದು ಹೊಸ ಅಸ್ತ್ರ ಪ್ರಯೋಗಿಸಿದ್ದಾರೆ.

| | |
|---|---|
| 1 | ಕರ್ನಾಟಕ ಬಿಜೆಪಿ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರಗೆ ಸಿದ್ದರಾಮಯ್ಯ ಪ್ರಶ್ನೆ |
| 2 | ಗೋವಿಂದ ಕಾರಜೋಳರನ್ನು ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ಮಾಡಿ ಎಂದು ಸಿಎಂ |
| 3 | ನಿಮ್ಮ ಕುರ್ಚಿಯ ನಾಲ್ಕು ಕಾಲನ್ನು ಭದ್ರ ಪಡಿಸಿಕೊಳ್ಳಿ ಎಂದ ಸಿಎಂ |

**ಬಿಹಾರ ಚುನಾವಣೆಗಾಗಿ ಮೊಸಳೆ ಕಣ್ಣೀರು**

ಸಾಮಾಜಿಕ ನ್ಯಾಯ, ಮೀಸಲಾತಿ, ಸಂವಿಧಾನದ ಬಗ್ಗೆ ಮೊಸಳೆ ಕಣ್ಣೀರು ಸುರಿಸೋದು ನೀವು ಮತ್ತು ನಿಮ್ಮ ಕಾಂಗ್ರೆಸ್, ಅದಕ್ಕಾಗಿ ನಿಮ್ಮ ಅಸಲಿ ಮುಖವಾಡ ಏನೆಂಬುದು ರಾಜ್ಯ ಹಾಗೂ ದೇಶದ ಜನತೆಗೆ ತಿಳಿಯಲಿ ಎಂಬ ಕಾರಣದಿಂದ ಅತ್ಯಂತ ಗೌರವದಿಂದ ನಿಮ್ಮ ಕಾಳಜಿ ನೈಜವೇ ಆಗಿದ್ದರೆ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆಯವರನ್ನು ಪ್ರಧಾನಿ ಸ್ಥಾನದ ಅಭ್ಯರ್ಥಿ ಎಂದು ಘೋಷಿಸಿ ಎಂಬ ಸಲಹೆ ನೀಡಿದ್ದೆ, ಆ ಸಲಹೆಯನ್ನು ನೀವು ಸಕಾರಾತ್ಮಕವಾಗಿ ಸ್ವೀಕರಿಸುವ ಬದಲು ಹತಾಶೆಯಿಂದ ಸಮರ್ಥನೀಯವಲ್ಲದ ಉತ್ತರ ನೀಡಿದ್ದೀರಿ ಎಂದು ಬರೆದಿದ್ದಾರೆ.

**ಖರ್ಗೆಯವರಿಗೆ ಅವಕಾಶ ಇದ್ದರೂ ಸಿಎಂ ಸ್ಥಾನ ತಪ್ಪಿಸಿದ್ದು ಯಾರು..?:** ಮಲ್ಲಿಕಾರ್ಜುನ್ ಖರ್ಗೆಯವರಿಗೆ ಅವಕಾಶವಿದ್ದರೂ ಅವರ ಹಿರಿತನವನ್ನು ಬದಿಗೆ ಸರಿಸಿ, ಮುಖ್ಯಮಂತ್ರಿ ಸ್ಥಾನ ನೀಡದೇ ವಂಚಿಸಿದ್ದು ಕಾಂಗ್ರೆಸ್ ಅಲ್ಲವೇ? ಕರ್ನಾಟಕದಲ್ಲಿ ಪರಿಶಿಷ್ಟ ಸಮುದಾಯಕ್ಕೆ ಸೇರಿದ ಅರ್ಹ ನಾಯಕರು ಮುಖ್ಯಮಂತ್ರಿ ಆಗುವ ಅವಕಾಶ ತಪ್ಪಿಸಿದವರು ಯಾರು..? ಈ ಪ್ರಶ್ನೆಗೆ ಇತಿಹಾಸದ ಪುಟಗಳಲ್ಲಿ ಉತ್ತರ ಶಾಶ್ವತವಾಗಿ ಅಚ್ಚೊತ್ತಿದೆ. ನಿಮ್ಮ ಅಹಿಂದ ಕಾಳಜಿ ಏನೆಂಬುದು ನಾಡಿನ ಎಲ್ಲಾ ಸಮುದಾಯಗಳಿಗೆ ಸ್ಪಷ್ಟವಾಗಿ ಗೊತ್ತಿದೆ ಎಂದು ಸಿದ್ದರಾಮಯ್ಯನವರಿಗೆ ಠಕ್ಕರ್ ನೀಡಿದ್ದಾರೆ. ಬಿಹಾರ ರಾಜ್ಯದ ಚುನಾವಣೆ ಸಮೀಪಿಸುತ್ತಿರುವ ಕಾರಣ ಎಐಸಿಸಿಯ ಒಬಿಸಿ ಸಮಿತಿಯು ಸಿದ್ದರಾಮಯ್ಯ ಅವರ ಮೂಲಕ ಹಿಂದುಳಿದ ವರ್ಗಗಳ ಕುರಿತು ಮೊಸಳೆ ಕಣ್ಣೀರು ಹಾಕುತ್ತಿದೆ ಎಂದು ಇದೇ ವೇಳೆ ವಿಜಯೇಂದ್ರ ಲೇವಡಿ ಮಾಡಿದರು.

**ಕಾರಜೋಳ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಿ :** ವಿಜಯೇಂದ್ರ ಅವರೇ, ದಲಿತ ಮತ್ತು ಹಿಂದುಳಿದ ಜಾತಿಗಳ ಬಗ್ಗೆ ನಿಮಗೆ ಅಷ್ಟೊಂದು ಅಕ್ಕರೆ, ಕಾಳಜಿಗಳಿದ್ದರೆ ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನವನ್ನು ಒಬ್ಬ ದಲಿತ ನಾಯಕನಿಗೆ ಬಿಟ್ಟುಬಿಡಿ. ನಿಮಗೆ ಅನುಕೂಲವಾಗಲೆಂದು ಆ ಹೆಸರನ್ನು ನಾನೇ ಸೂಚಿಸುತ್ತೇನೆ. ದಲಿತ ನಾಯಕ ಗೋವಿಂದ ಕಾರಜೋಳ ಅವರು ಇತ್ತೀಚೆಗೆ ನಿಮ್ಮ ಸಂಗಕ್ಕೆ ಬಿದ್ದು ಏನೇನೋ ಮಾತನಾಡುತ್ತಿದ್ದಾರೆ. ಆದರೆ ನನ್ನ ಸಹೋದ್ಯೋಗಿಯಾಗಿದ್ದ ಅವರು ಮೂಲತಃ ಸಜ್ಜನ ವ್ಯಕ್ತಿ. ನಿಮಗೆ ಮತ್ತು ನಿಮ್ಮ ಪಕ್ಷಕ್ಕೆ ಧಮು, ತಾಕತ್ ಇದ್ದರೆ ಕಾರಜೋಳ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಿ ಅವರನ್ನೇ ಮುಂದಿನ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಘೋಷಿಸಿಬಿಡಿ ಎಂದು ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

## ವಿಜಯೇಂದ್ರ-ಸಿದ್ದರಾಮಯ್ಯ ನಡುವೆ ಮುಂದುವರೆದ ಪೊಲಿಟಿಕಲ್ ವಾರ್..!

**ಖರ್ಗೆ ಪಿಎಂ ಅಭ್ಯರ್ಥಿ ಎಂದು ಕಾಂಗ್ರೆಸ್ ಘೋಷಿಸಲಿ**

ಕಾಂಗ್ರೆಸ್ ಪಕ್ಷಕ್ಕೆ ಪರಿಶಿಷ್ಟ ಜಾತಿ, ಪಂಗಡಗಳ ಬಗ್ಗೆ ನಿಜವಾಗಿಯೂ ಕಾಳಜಿ ಇದ್ದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಿಸಲಿ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಸವಾಲು ಹಾಕಿದ್ದಕ್ಕೆ ತಿರುಗೇಟು ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರಾಗಬೇಕೆಂದು ಸಲಹೆ ನೀಡುತ್ತಿರುವುದು ಅವರ ಅಜ್ಞಾನ ಮತ್ತು ಅತ್ಮವಂಚನೆಯನ್ನು ಮಾತ್ರವಲ್ಲ, ದುರಹಂಕಾರವನ್ನೂ ಸೂಚಿಸುತ್ತದೆ ಎಂದಿದ್ದಾರೆ. ಈ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, 'ತಾನು ಕೂತಿರುವ ಕುರ್ಚಿಯ ನಾಲ್ಕು ಕಾಲುಗಳನ್ನು ಭದ್ರವಾಗಿ ಇಟ್ಟುಕೊಳ್ಳಲಾಗದ ಸ್ಥಿತಿ ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರದ್ದು. ವಿಜಯೇಂದ್ರ ಅವರಿಗೆ ಓದುವ ಅಭ್ಯಾಸ ಇದ್ದರೆ ಈ ದೇಶದ ಹಿಂದುಳಿದ ಜಾತಿಗಳು, ದಲಿತರು ಮತ್ತು ಅಲ್ಪಸಂಖ್ಯಾತರನ್ನು ಭಾರತೀಯ ಜನತಾ ಪಕ್ಷ ಯಾವ ಯಾವ ಕಾಲದಲ್ಲಿ ಹೇಗೆಲ್ಲಾ ನಡೆಸಿಕೊಂಡಿದೆ ಎಂಬ ಇತಿಹಾಸವನ್ನು ಓದಿ ತಿಳಿದುಕೊಳ್ಳಲಿ.

**ಗಡ್ಕರಿ ಕಾರ್ಯಕ್ರಮಕ್ಕೆ ಸಿದ್ದು ಗೈರಿನ ರಹಸ್ಯ!**

ಶಿವಮೊಗ್ಗದಲ್ಲಿ ಸಿಗಂದೂರು ಸೇತುವೆ ಉದ್ಘಾಟನೆಗೆ ಸಿಎಂ ಸಿದ್ದರಾಮಯ್ಯ ಗೈರು ಕುರಿತಾದ ರಹಸ್ಯವನ್ನು ಬಿಚ್ಚಿಟ್ಟ ಯತ್ನಾಳ್, ಕಾರ್ಯಕ್ರಮದ ವಿಚಾರವಾಗಿ ಸಿಎಂಗೆ ಬರಬೇಡ ಅಂತ ಹೇಳಿದ್ದೇ ಯಡಿಯೂರಪ್ಪ ಎಂದು ಆರೋಪಿಸಿದರು. ನೀವು ಬರಬೇಡಿ, ನಿಮ್ಮ ಸಚಿವರೂ ಬರೋದು ಬೇಡ ಅಂತ ಸಿದ್ದರಾಮಯ್ಯಗೆ ಹೇಳಿದ್ರು. ಯಾಕಂದ್ರೆ, ಕೇಂದ್ರಕ್ಕೆ ಸಂದೇಶ ರವಾನೆ ಮಾಡಲು ಈ ತಂತ್ರ ಮಾಡಿದ್ದಾರೆ. ನಮ್ಮ ನಡುವೆ ಯಾವುದೇ ಅಜೆಸ್ಟ್‌ಮೆಂಟ್ ಇಲ್ಲ ಅಂತ ಸೂಚಿಸುವ ಉದ್ದೇಶ ಇದಾಗಿದೆ. ತಮ್ಮ ಮಗನನ್ನ ಮತ್ತೆ ರಾಜ್ಯಾಧ್ಯಕ್ಷ ಮಾಡಲು ಈ ಪ್ಲಾನ್ ಮಾಡಿದ್ದಾರೆಂದು ಆರೋಪಿಸಿದರು. ಕರ್ನಾಟಕದಲ್ಲಿ ಆಡಳಿತ ಪಕ್ಷದ ಜೊತೆ ಬಿಜೆಪಿ ವಿರೋಧ ಇದೆ ಅಂತ. ಹಾಗಾಗಿ ಇವರೇ ಬರೋದನ್ನು ತಡೆದಿದ್ದಾರೆ ಎಂದು ಬಿಎಸ್ ಯಡಿಯೂರಪ್ಪ ವಿರುದ್ಧ ಮತ್ತೆ ವಾಗ್ದಾಳಿ ನಡೆಸಿದರು. ಸಿಗಂಧೂರು ಸೇತುವೆ ಉದ್ಘಾಟನೆಗೆ ಸಿಎಂ ಸಿದ್ದರಾಮಯ್ಯಗೆ ಆಹ್ವಾನ ನೀಡದೆ ಇರುವುದು ಚರ್ಚೆಗೆ ಎಡೆ ಮಾಡಿತ್ತು. ಇದು ಶಿಷ್ಟಾಚಾರದ ಉಲ್ಲಂಘನೆ ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದರು.

**ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ ಆದ್ರೆ ಹೊಸ ಪಕ್ಷ ಸ್ಥಾಪನೆ..?:** ಬಿವೈ ವಿಜಯೇಂದ್ರ ಅವರು ಬಿಜೆಪಿ ರಾಜ್ಯಾಧ್ಯಕ್ಷರಾದರೆ ನಾವು ಹೊಸ ಪಕ್ಷ ಸ್ಥಾಪನೆ ಮಾಡುತ್ತೇವೆ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ. ಹೊಸ ಪಕ್ಷ ಕಟ್ಟುವುದರಲ್ಲಿ ಯಾವುದೇ ಸಂಶಯ ಬೇಡ. ಹಿಂದುತ್ವ ಮತ್ತು ಅಭಿವೃದ್ಧಿ ಆಧಾರದ ಮೇಲೆ ಹೊಸ ಪಕ್ಷ ಕಟ್ಟುತ್ತೇವೆ. ನಮ್ಮ ಹೊಸ ಪಕ್ಷಕ್ಕೆ ಕಾಂಗ್ರೆಸ್, ಬಿಜೆಪಿ ಎರಡೂ ಪಕ್ಷಗಳಿಂದ ಬರ್ತಾರೆ. ಮುಂದೆ ರಾಜ್ಯದಲ್ಲಿ ಆಡಳಿತ ಮಾಡ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಬದಲಾವಣೆ ಚರ್ಚೆ ಕಮಲ ಪಾಳಯದಲ್ಲಿ ತೀವ್ರಗೊಂಡಿದೆ. ಈ ನಡುವೆ ಯಾವುದೇ ಕಾರಣಕ್ಕೂ ವಿಜಯೇಂದ್ರ ಅವರನ್ನು ಒಪ್ಪಲ್ಲ ಎಂದು ರೆಬೆಲ್ಸ್ ಪಟ್ಟು ಹಿಡಿದಿದ್ದಾರೆ.

# ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ 24.50 ಕೋಟಿ ರೂ. ವೆಚ್ಚದಲ್ಲಿ ಜವಳಿ ಪಾರ್ಕ್ ನಿರ್ಮಾಣ

## ● ರಾಯಚೂರಿಗೆ ಹೊಸ ಜವಳಿ ಪಾರ್ಕ್, ಕಿತ್ತೂರಿಗೆ ಥೀಮ್ ಪಾರ್ಕ್ ಸೇರಿದಂತೆ ಸಚಿವ ಸಂಪುಟದ 10 ಪ್ರಮುಖ ನಿರ್ಣಯಗಳು

• **ಉದಯವಾಹಿನಿ, ಬೆಂಗಳೂರು**

ರಾಯಚೂರು ಜಿಲ್ಲೆ ತಾಲ್ಲೂಕಿನಲ್ಲಿ ನೂತನ ಜವಳಿ ಪಾರ್ಕ್ ಅನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಒಟ್ಟು 24.50 ಕೋಟಿಗಳ ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಕರ್ನಾಟಕ ಸಚಿವ ಸಂಪುಟ ಸಭೆ ಮಹತ್ವದ ನಿರ್ಣಯ ಕೈಗೊಂಡಿದೆ.

ಗುರುವಾರ ಬೆಂಗಳೂರಿನ ವಿಧಾನಸೌಧದಲ್ಲಿ ಮಹತ್ವದ ಸಚಿವ ಸಂಪುಟ ಸಭೆ ನಡೆದಿದ್ದು, ರಾಜ್ಯ ಸರ್ಕಾರದ ಹಲವು ಯೋಜನೆಗಳಿಗೆ ಒಪ್ಪಿಗೆ ನೀಡಲಾಗಿದೆ. ಆ ಪೈಕಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆ, ಜವಳಿ ಪಾರ್ಕ್ ಸೇರಿದಂತೆ ಹಲವಾರು ಯೋಜನೆಗಳಿಗೆ ಅನುಮತಿ, ಅನುದಾನ ಮೀಸಲಿಡಲಾಗಿದೆ.

### ಸಭೆಯಲ್ಲಿ ಪ್ರಮುಖ ನಿರ್ಧಾರಗಳು

- ಕರ್ನಾಟಕ ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ತಾತ್ವಿಕ ಅನುಮೋದನೆ ಹಾಗೂ ಎನ್‌ಟಿಪಿಸಿ ಸಂಸ್ಥೆಯು ಕರ್ನಾಟಕದಲ್ಲಿ ಪರಮಾಣು ವಿದ್ಯುತ್ ಸ್ಥಾಪನೆಗೆ ಗುರುತಿಸಿರುವ ಸಂಭಾವ್ಯ ಸ್ಥಳಗಳಲ್ಲಿ ಪ್ರಾಥಮಿಕ ಅಧ್ಯಯನ



ನಡೆಸಲು ಅನುಮತಿ.

- ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಯಳವಟ್ಟಿ ಗ್ರಾಮದಲ್ಲಿ 28.3 ಎಕರೆ ಪ್ರದೇಶದಲ್ಲಿ ಮಾವು ಮತ್ತು ಇತರೆ ತೋಟಗಾರಿಕೆ ಬೆಳೆಗಳ ಬಹು ಉತ್ಪನ್ನಗಳ ನಿರ್ವಹಣೆ, ಸಂಗ್ರಹಣೆ, ಸಂಸ್ಕರಣೆ ಮತ್ತು ಸಂರಕ್ಷಣಾ ಘಟಕ ಸ್ಥಾಪನೆ.

**ರೂ.30.00 ಕೋಟಿ ವೆಚ್ಚದ ಥೀಮ್ ಪಾರ್ಕ್ ನಿರ್ಮಾಣ ಕಾಮಗಾರಿ ಅನುಮತಿ**

ದಕ್ಷಿಣ ಕನ್ನಡ ಜಿಲ್ಲೆಯ ಉಲ್ಲಾಳದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪದವಿ ಪೂರ್ವ ಕಾಲೇಜನ್ನು ರೂ.17.09 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಿ 400 ವಿದ್ಯಾರ್ಥಿನಿಯರ ಸಂಖ್ಯಾ ಬಲದೊಂದಿಗೆ ಪ್ರಾರಂಭಿಸಲು ಒಪ್ಪಿಗೆ ನೀಡಿದೆ. ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕಿನ ಕಿತ್ತೂರು ಕೋಟೆ ಆವರಣದಲ್ಲಿ ರೂ.30.00 ಕೋಟಿ ವೆಚ್ಚದ ಥೀಮ್ ಪಾರ್ಕ್ ನಿರ್ಮಾಣ ಕಾಮಗಾರಿ ಅನುಮತಿ ಕೊಟ್ಟಿದೆ. ಹಾರಂಗಿ ಜಲಾಶಯದ ಕೆಳಭಾಗದಲ್ಲಿ ಕೊಡಗು ಜಿಲ್ಲೆಯ ಕುಶಾಲನಗರದ ಹುಲುಗುಂದ ಗ್ರಾಮದ ಬಳಿ ಕಮಾನು ಸೇತುವೆಯನ್ನು ರೂ.36.50 ಕೋಟಿಗಳಲ್ಲಿ ನಿರ್ಮಾಣ ಅವಕಾಶ ಮಾಡಲಾಗಿದೆ. ಹೇಮಾವತಿ ಯೋಜನೆಯಡಿಯಲ್ಲಿನ ನಾಗಮಂಗಲ ಶಾಖಾ ನಾಲೆಯ ಸರಪಳಿ 78.46 ಕಿ.ಮೀ ವರೆಗೆ ಅಭಿವೃದ್ಧಿಪಡಿಸುವ ರೂ.560.00 ಕೋಟಿಗಳ ಮೊತ್ತದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ..

- ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಸಿರಿವಾರ ಗ್ರಾಮದಲ್ಲಿ ತೋಟಗಾರಿಕೆ ತಂತ್ರಜ್ಞಾನ ಪಾರ್ಕ್‌ನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಡಿ ರೂ.83.79 ಕೋಟಿ ಅಂದಾಜು ವೆಚ್ಚದಲ್ಲಿ ಸ್ಥಾಪನೆ.
- ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೆಮ್ಮಿಂಜೆ ಗ್ರಾಮದ ಸ.ನಂ.138/4 ರಲ್ಲಿ 3.00 ಎಕರೆ ಗೋಮಾಳ ಜಮೀನನ್ನು ಬಂಟರ ಸಂಘ, ಪುತ್ತೂರು ತಾಲ್ಲೂಕು ಮಂಜೂರು.
- ಮೈಸೂರು ವಿಶ್ವವಿದ್ಯಾಲಯದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಸಂವಿಧಾನ ಪೀಠವನ್ನು ರೂ.10.00 ಕೋಟಿಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.
- ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಂಪಿ-ಬಾದಾಮಿ-ಐಹೊಳೆ-ಪಟ್ಟದಕಲ್ಲು-ವಿಜಯಪುರ ಒಳಗೊಂಡಂತೆ ಉತ್ತರ ಕರ್ನಾಟಕ ಪ್ರವಾಸಿ ವೃತ್ತವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ DBFOT ಮಾದರಿಯಲ್ಲಿ ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮದ ಮೂಲಕ ರೂ.166.22 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಗೆ ನಿರ್ಧಾರ.
- ಗ್ರೇಟರ್ ಬೆಂಗಳೂರು ಪ್ರದೇಶ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ''ಎ'' ಮತ್ತು ''ಬಿ'' ಖಾತಾ ನೀಡುವುದನ್ನು ನಿಯಂತ್ರಿಸಲು ನಿರ್ಣಯ.
- ಮಲಪ್ರಭಾ ನದಿಗೆ ಅಡ್ಡಲಾಗಿರುವ ಮುನವಳ್ಳಿ ಆರ್‌ಬಿಸಿಗೆ ನವಿಲುತೀರ್ಥ ಆಣೆಕಟ್ಟೆ ಕಾಮಗಾರಿ 19.05 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ನಿರ್ಧಾರ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,933/Gram24ct ₹9,105/Gram22ct ಬೆಳ್ಳಿ: ₹114.00/Gram

## ಶುಶ್ರುತಿ ಸೌಹಾರ್ದ ಸಹಕಾರ ಬ್ಯಾಂಕ್ ವಂಚನೆ ಪ್ರಕರಣ: 10 ಕಡೆ ಇಡಿ ದಾಳಿ

• ಉದಯವಾಹಿನಿ, ಬೆಂಗಳೂರು

ಠೇವಣಿದಾರರ ನೂರಕ್ಕೂ ಹೆಚ್ಚು ಕೋಟಿ ರೂಪಾಯಿಗಳನ್ನು ವಂಚಿಸಿದ ಪ್ರಕರಣದಲ್ಲಿ ನಗರದ ಶುಶ್ರುತಿ ಸೌಹಾರ್ದ ಸಹಕಾರ ಬ್ಯಾಂಕ್‌ನ ಮುಖ್ಯ ಕಚೇರಿ, ಶಾಖೆಗಳು ಸೇರಿ ಒಟ್ಟು ಹತ್ತು ಕಡೆಗಳಲ್ಲಿ ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬ್ಯಾಂಕ್‌ನ ಮುಖ್ಯಸ್ಥರಾಗಿದ್ದ ಶ್ರೀನಿವಾಸಮೂರ್ತಿ ಅವರು ಈಗಾಗಲೇ ಸಿಸಿಬಿ ಬಂಧನದಲ್ಲಿದ್ದಾರೆ. ಅವರ ಮನೆ, ಕಚೇರಿ, ಆಪ್ತರ ಕಚೇರಿಗಳಲ್ಲಿ ಗುರುವಾರ ಬೆಳಿಗ್ಗೆಯೇ ದಾಳಿ ನಡೆಸಿರುವ ಇಡಿ ಅಧಿಕಾರಿಗಳು ಸಿಬ್ಬಂದಿಯನ್ನು ವಿಚಾರಣೆ ನಡೆಸುತ್ತಿದ್ದಾರೆ.

## ಸಾರ್ವಜನಿಕರ ಮೇಲೆ ಮಚ್ಚು ಬೀಸಿದ ಮೂವರು ಆರೋಪಿಗಳು

• ಉದಯವಾಹಿನಿ, ಬೆಂಗಳೂರು

ಸಂಬಂಧಿಯನ್ನು ಹೆದರಿಸಲು ಹೋಗಿ ಸಾರ್ವಜನಿಕರ ಮೇಲೆ ಮಚ್ಚು ಹಾಗೂ ಕಬ್ಬಿಣದ ರಾಡ್ ನಿಂದ ಹಲ್ಲೆ ಮಾಡಿದ್ದ ನಾಲ್ವರ ವಿರುದ್ಧ ನಂದಿನಿ ಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಾಯಾಳು ಪವನ್ ಕುಮಾರ್ ನೀಡಿದ ದೂರಿನ ಮೇರೆಗೆ ಆರೋಪಿ ರವಿ ಹಾಗೂ ತಲೆಮರೆಸಿಕೊಂಡಿರುವ ಆತನ ಮೂವರು ಸ್ನೇಹಿತರ ವಿರುದ್ಧ ಪ್ರಕರಣ ದಾಖಲಾಗಿದೆ. ಮನೆಗೆ ನಡೆದು ಹೋಗುವಾಗ ಆರೋಪಿಗಳು ಏಕಾಏಕಿ ಹಲ್ಲೆ ಮಾಡಿದ್ದಾರೆ' ಎಂದು ದೂರಿನಲ್ಲಿ ಪವನ್ ಆರೋಪಿಸಿದ್ದಾರೆ. ಜುಲೈ 13ರಂದು ರಾತ್ರಿ ನಂದಿನಿ ಲೇಔಟ್‌ನ ಕಂಠೀರವ ನಗರದಲ್ಲಿ ಘಟನೆ ನಡೆದಿದೆ. ಹಲ್ಲೆಯ ದೃಶ್ಯ ಸಿ.ಸಿ.ಟಿ.ವಿ. ಕ್ಯಾಮೆರಾದಲ್ಲಿ ಸೆರೆಯಾಗಿದೆ. ಆರೋಪಿಗಳ ಪತ್ತೆಗಾಗಿ ವಿಶೇಷ ತಂಡ ರಚಿಸಿ ಶೋಧಕಾರ್ಯ ನಡೆಸುತ್ತಿದ್ದಾರೆ. ಕಂಠೀರವ ನಗರದಲ್ಲಿ ನೆಲಸಿರುವ ಜಗದೀಶ್ ಅವರ ಅಕ್ಕನ ಮಗಳನ್ನು ರವಿ ಮದುವೆಯಾಗಲು ಮುಂದಾಗಿದ್ದ.

ಇದಕ್ಕೆ ಜಗದೀಶ್ ಒಪ್ಪಿರಲಿಲ್ಲ. ಇದೇ ಕಾರಣಕ್ಕೆ ಕೋಪಗೊಂಡಿದ್ದ ರವಿ ತನ್ನ ಸಂಬಂಧಿಯೂ ಆಗಿರುವ ಜಗದೀಶ್ ಅಂಗಡಿ ಬಳಿಗೆ ಸ್ನೇಹಿತರೊಂದಿಗೆ ಬಂದು ಗಲಾಟೆ ಮಾಡಿದ್ದ. ಗಲಾಟೆ ತೀವ್ರಗೊಂಡಾಗ ಮಚ್ಚು ಬೀಸಿದ್ದ. ರಸ್ತೆಯಲ್ಲಿ ನಡೆದು ತೆರಳುತ್ತಿದ್ದ ದೂರುದಾರ ಪವನ್, ವೆಂಕಟೇಶ್, ಸ್ಯಾಟ್ಸನ್ ಅವರಿಗೆ ಏಟು ಬಿದ್ದಿತ್ತು' ಎಂದು ಪೊಲೀಸರು ಹೇಳಿದರು.

## 40 ಲಕ್ಷ ರೂ. ವಹಿವಾಟು ನಡೆಸಿದ 6 ಸಾವಿರ ಮಂದಿಗೆ ನೋಟಿಸ್

• ಉದಯವಾಹಿನಿ, ಬೆಂಗಳೂರು

40 ಲಕ್ಷ ರೂ. ವಹಿವಾಟು ನಡೆಸಿದ 6 ಸಾವಿರ ರೂ. ಮಂದಿಗೆ ನೋಟಿಸ್ ನೀಡಿದ್ದೇವೆ ಎಂದು ಕರ್ನಾಟಕ ಸರ್ಕಾರ ವಾಣಿಜ್ಯ ತೆರಿಗೆ ಹೆಚ್ಚುವರಿ ಆಯುಕ್ತ ಚಂದ್ರಶೇಖರ್ ನಾಯಕ್ ಹೇಳಿದ್ದಾರೆ.

ಬೇಕರಿ, ಕಾಂಡಿಮೆಂಟ್ಸ್, ಟೀ- ತರಕಾರಿ ಅಂಗಡಿಯವರಿಗೆ ಲಕ್ಷಲಕ್ಷ ತೆರಿಗೆ ಬಾಕಿ ನೋಟಿಸ್ ನೀಡಿದ್ದಕ್ಕೆ ಪ್ರತಿಕ್ರಿಯಿಸಿದ ಅವರು, 40 ಸಾವಿರ ಯುಪಿಐ ದಾಖಲೆಯನ್ನು ಕಲೆ ಹಾಕಿ ಅದರಲ್ಲಿ 40 ಲಕ್ಷ ವಹಿವಾಟು ದಾಟಿದ ಆರು ಸಾವಿರ ಮಾಲೀಕರಿಗೆ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದರು. ಹಾಲು, ಬ್ರೆಡ್ ಮಾರಾಟ, ತರಕಾರಿ ಮಾರಾಟದ ಬಗ್ಗೆ ದಾಖಲೆ ನೀಡಿದರೆ ಖಂಡಿತ ಬಡ್ಡಿಯನ್ನು ಮನ್ನಾ ಮಾಡಲಾಗುತ್ತದೆ. ಉಳಿದಂತೆ 40 ಲಕ್ಷ ರೂ. ವಹಿವಾಟು ಹೆಚ್ಚಾದರೆ ವಾರ್ಷಿಕವಾಗಿ ಜಿಎಸ್‌ಟಿ ನೋಂದಣಿ ಮಾಡಿಕೊಳ್ಳಬೇಕು. ಕಂಪೋಸಿಷನ್ ಟ್ಯಾಕ್ಸ್ ಅಡಿ 1% ಕೂಡ ಕಟ್ಟುವ ಅವಕಾಶ ಇದೆ ಎಂದು ತಿಳಿಸಿದರು. ಕಳೆದ 2021 ರಿಂದ 2024 ವರೆಗೆ ಪ್ರತಿ ವರ್ಷ 40 ಲಕ್ಷ ರೂ.ಗಿಂತ ಹೆಚ್ಚಿನ ವ್ಯಾಪಾರ ವಹಿವಾಟು ನಡೆಸಿದವರಿಗೆ ಮಾತ್ರ ನೋಟಿಸ್ ನೀಡಲಾಗಿದೆ.

ಬ್ಯಾಂಕ್ ದಾಖಲೆಗಳ ಆಧಾರದಲ್ಲಿ ನೋಟಿಸ್ ನೀಡಲಾಗಿದೆ ಎಂದು ಹೇಳಿದರು. ಹೂ, ಹಣ್ಣು, ಹಾಲು ಸೇರಿ ಮೊದಲಾದವು ಜಿಎಸ್‌ಟಿಯಿಂದ ಹೊರಗಡೆ ಇದೆ. ಇವರಿಗೆ ನೋಟಿಸ್ ಬಂದಿದ್ದರೆ ಆ ವ್ಯಾಪಾರಿಗಳು ಸ್ಪಷ್ಟೀಕರಣ ನೀಡಬಹುದು. ಸರಕು ಖರೀದಿ ವೇಳೆ ಜಿಎಸ್‌ಟಿ ಪಾವತಿ ಮಾಡಿದ್ದರೆ ಮಾರಾಟದಲ್ಲಿ ಜಿಎಸ್‌ಟಿ ಪಾವತಿಸಬೇಕಾದ ಅವಶ್ಯಕತೆ ಇರುವುದಿಲ್ಲ. ಅದಕ್ಕೆ ಪೂರಕ ದಾಖಲೆಗಳನ್ನು ವಾಣಿಜ್ಯ ತೆರಿಗೆ ಇಲಾಖೆಗೆ ಸಲ್ಲಿಸಬೇಕಾಗುತ್ತದೆ ಎಂದರು.

## ಡಿಗ್ರಿ ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ಇನ್ಮುಂದೆ ಸಿಸಿಟಿವಿ ಕಣ್ಗಾವಲು

• ಉದಯವಾಹಿನಿ, ಬೆಂಗಳೂರು

ಡಿಗ್ರಿ ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ಇನ್ನು ಮುಂದೆ ಸಿಸಿಟಿವಿ ಕಣ್ಗಾವಲು ಇರಲಿದೆ. ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಕ್ಯಾಂಪಸ್‌ಗಳಲ್ಲಿ ಸಿಸಿಟಿವಿ ಅಳವಡಿಕೆಗೆ ಸರ್ಕಾರ ಆದೇಶ ಮಾಡಿದೆ. ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಅನುದಾನಿತ, ಖಾಸಗಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ ಸಿಸಿಟಿವಿ ಅಳವಡಿಕೆ ಮಾಡುವಂತೆ ಉನ್ನತ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಕಾಲೇಜು, ವಿವಿ ಕ್ಯಾಂಪಸ್‌ಗಳಲ್ಲಿ ರಯಾಗಿಂಗ್, ಡ್ರಗ್ಸ್ ಚಟುವಟಿಕೆಗಳು, ಲೈಂಗಿಕ ಕಿರುಕುಳ ಪ್ರಕರಣಗಳು ಜಾಸ್ತಿ ಆಗುತ್ತಿರುವ ಹಿನ್ನೆಲೆಯಲ್ಲಿ ಇದರ ನಿಯಂತ್ರಣಕ್ಕೆ ಉನ್ನತ ಶಿಕ್ಷಣ ಇಲಾಖೆ ಈ ಮಹತ್ವದ ನಿರ್ಧಾರ ಮಾಡಿದೆ.

ಉನ್ನತ ಶಿಕ್ಷಣ ಇಲಾಖೆ ಆದೇಶ ಬೆನ್ನಲ್ಲೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಕೆ ಮಾಡುವಂತೆ ಕಾಲೇಜು ಶಿಕ್ಷಣ ಇಲಾಖೆ ಆದೇಶ ಮಾಡಿದೆ.

ಕಾಲೇಜುಗಳಲ್ಲಿ ಲಭ್ಯ ಇರುವ ಅನುದಾನದಲ್ಲಿ ಸಿಸಿಟಿವಿ ಅಳವಡಿಕೆ ಮಾಡುವಂತೆ ಸೂಚನೆ ನೀಡಲಾಗಿದೆ. ಜುಲೈ 21ರ ಒಳಗೆ ಸಿಸಿಟಿವಿ ಅಳವಡಿಕೆ ಬಗ್ಗೆ ಇಲಾಖೆಗೆ ಮಾಹಿತಿ ನೀಡುವಂತೆ ಸೂಚನೆ ನೀಡಲಾಗಿದೆ.

## ಮೆಟ್ರೋ, ಹೊಸ ಮಾರ್ಗದ ನಿಲ್ದಾಣಗಳಲ್ಲಿ ಸಿಗಲಿದೆ ವೈಫೈ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ಎರಡನೇ ಹಂತದ ರೀಚ್ 5 ಮತ್ತು 6ರಲ್ಲಿ ಪ್ರಯಾಣಿಕರಿಗೆ ವೈಫೈ ಸೌಲಭ್ಯ ಸಿಗಲಿದೆ. ಇದಕ್ಕಾಗಿ ಅಡ್ವಾನ್ಸ್ಡ್ ಕಮ್ಯುನಿಕೇಶನ್ ಆ್ಯಂಡ್ ಎಲೆಕ್ಟ್ರಾನಿಕ್ಸ್ ಸಿಸ್ಟಮ್ಸ್ (ಎಸಿಇಎಸ್) ಇಂಡಿಯಾ ಜೊತೆಗೆ ಬೆಂಗಳೂರು ಮೆಟ್ರೊ ರೈಲು ಕಾರ್ಪೊರೇಷನ್ ಲಿಮಿಟೆಡ್ (ಬಿಎಂಆರ್‌ಸಿಎಲ್) ಒಪ್ಪಂದ ಮಾಡಿಕೊಂಡಿದೆ.ಈ ಒಡಂಬಡಿಕೆಯಂತೆ ರಾಷ್ಟ್ರೀಯ ವಿದ್ಯಾಲಯ ರಸ್ತೆ–ಬೊಮ್ಮಸಂದ್ರ ಸಂಪರ್ಕಿಸುವ ಹಳದಿ ಮಾರ್ಗ (ರೀಚ್ 5) ಮತ್ತು ಕಾಳೇನ ಅಗ್ರಹಾರ ನಾಗವಾರ ಸಂಪರ್ಕಿಸುವ ಗುಲಾಬಿ ಮಾರ್ಗದ (ರೀಚ್ 6) ನಿಲ್ದಾಣಗಳಲ್ಲಿ 13 ವರ್ಷ ವೈಫೈ ಸಿಗಲಿದೆ. ಅದಕ್ಕಾಗಿ ಐಬಿಎಸ್, ಬಿಟಿಎಸ್, ಸೆಲ್ಯುಲರ್ ಟವರ್‌ಗಳನ್ನು ಸ್ಥಾಪಿಸಲಿರುವ ಎಸಿಇಎಸ್ ನಿರ್ವಹಣೆಯನ್ನೂ ಮಾಡಲಿದೆ.

ಇದರಿಂದ ಹಲವು ಮೊಬೈಲ್ ಆಪರೇಟರ್‌ಗಳಿಗೆ ಬೆಂಬಲ ಸಿಗಲಿದೆ. ಮೆಟ್ರೊ ಜಾಗದ ಸಮರ್ಪಕ ಬಳಕೆಯೂ ಆಗುತ್ತದೆ. 4ಜಿ/5ಜಿ ಸೇವೆಗಳು ಲಭ್ಯವಾಗಲಿವೆ. ಪ್ರಯಾಣಿಕರಿಗೆ ಉತ್ತಮ ಅನುಭವವನ್ನು ನೀಡಲಿದೆ ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಂ. ಮಹೇಶ್ವರ ರಾವ್ ತಿಳಿಸಿದ್ದಾರೆ. ಈ ಒಡಂಬಡಿಕೆಗೆ ಬಿಎಂಆರ್‌ಸಿಎಲ್‌ನ ಕಾರ್ಯನಿರ್ವಾಹಕ ನಿರ್ದೇಶಕ ಎ.ಎಸ್. ಶಂಕರ್, ಎಸಿಇಎಸ್ ಇಂಡಿಯಾ ವ್ಯವಸ್ಥಾಪಕ ನಿರ್ದೇಶಕ ಮೊಹಮ್ಮದ್ ಎನ್. ಮಝುರ್ ಸಹಿ ಹಾಕಿದರು. ಈ ಸಂದರ್ಭದಲ್ಲಿ ಬಿಎಂಆರ್‌ಸಿಎಲ್ ನಿರ್ದೇಶಕ ಸುಮತ್ ಭಟ್ನಾಗರ್, ಎಸಿಇಎಸ್ ಗ್ರೂಪ್ ಸಿಇಒ ಅಕ್ರಂ ಅಬುರಾಸ್ ಉಪಸ್ಥಿತರಿದ್ದರು. ಹಳದಿ ಮಾರ್ಗದಲ್ಲಿ ರೈಲು ಸಂಚಾರವು ಆಗಸ್ಟ್‌ನಲ್ಲಿ ಆರಂಭಗೊಳ್ಳುವ ನಿರೀಕ್ಷೆ ಇದೆ. ಗುಲಾಬಿ ಮಾರ್ಗದಲ್ಲಿ 2026ರ ಅಂತ್ಯದೊಳಗೆ ಸಂಚಾರ ಆರಂಭಗೊಳ್ಳುವ ಸಾಧ್ಯತೆ ಇದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

# ನಾಡಪ್ರಭು ಕೆಂಪೇಗೌಡ ಬಡಾವಣೆ ಶೀಘ್ರವೇ ವಿಸ್ತರಣೆ

### ಹೈಕೋರ್ಟ್ ಆದೇಶದಂತೆ ಬಿಡಿಎ ಭೂಸ್ವಾಧೀನ ಪ್ರಕ್ರಿಯೆಗೆ ಮುಂದಾದ ಬಿಡಿಎ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಮುಂದುವರಿದ ನಾಡಪ್ರಭು ಕೆಂಪೇಗೌಡ ಬಡಾವಣೆ ರಚಿಸುವ ಸಂಬಂಧ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲು ಮುಂದಾಗಿದೆ. ಸರ್ವೆಗೆ ಭೂಮಾಪಕರು ಮತ್ತು ಡಿಇಒಗಳಿಗೆ ಕಾರ್ಯ ವಿಂಗಡಣೆ ಮಾಡಿ ಆದೇಶಿಸಿದೆ. ಹೈಕೋರ್ಟ್ ಆದೇಶದಂತೆ ಮುಂದುವರಿದ ಬಡಾವಣೆ ರಚಿಸುವ ಸಂಬಂಧ ಅಸೂಚನೆ ಹೊರಡಿಸಲು ತೀರ್ಮಾನಿಸಿರುವ ಬಿಡಿಎ, ಭೂಸ್ವಾಧೀನ ಪ್ರಕ್ರಿಯೆ ತ್ವರಿತವಾಗಿ ಪೂರ್ಣಗೊಳಿಸಲು ಐವರು ಭೂಮಾಪಕರನ್ನು ನಿಯೋಜಿಸಿ, ಕಾರ್ಯವಿಂಗಡಣೆ ಮಾಡಿದೆ.

ಹಾಲಿ ನಿರ್ವಹಿಸುತ್ತಿರುವ ಕಾರ್ಯದ ಜತೆಗೆ, ಮುಂದುವರಿದ ನಾಡಪ್ರಭು ಕೆಂಪೇಗೌಡ ಬಡಾವಣೆ ರಚಿಸಲು ಸರ್ವೆ ಕಾರ್ಯ ನಡೆಸಿ, ನಕ್ಷೆಯೊಂದಿಗೆ ವರದಿ ನೀಡಲು ಆದೇಶಿಸಿದೆ. ಅಲ್ಲದೆ, ಪ್ರಭಾರ ವಹಿಸಿಕೊಂಡು ಮುಂದಿನ ಆದೇಶದವರೆಗೂ ಕಾರ್ಯನಿರ್ವಹಿಸಲು ಬಿಡಿಎ ಉಪ ಆಯುಕ್ತರು (ಭೂಸ್ವಾಧೀನ) ಸೂಚಿಸಿದ್ದಾರೆ.

**ಕೆಂಪೇಗೌಡ ಲೇಔಟ್ ಸೈಟ್ ಸಿಗಬೇಕಾದರೆ ಯಾವುದೋ ಜನ್ಮದ ಪುಣ್ಯ ಮಾಡಿರಬೇಕು:** ನಗರದ ಬಹುನಿರೀಕ್ಷಿತ ಕೆಂಪೇಗೌಡ ಲೇಔಟ್‌ನಲ್ಲಿ ನಿವೇಶನ ಪಡೆಯುವುದು ಯಾವುದೋ ಜನ್ಮದ ಪುಣ್ಯ ಮಾಡಿದಂತೆ ಎಂದು ಕರ್ನಾಟಕ ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ನಿವೃತ್ತ ಸಹಾಯಕ ಆಡಳಿತಾಧಿಕಾರಿ ವೈ.ವೈ. ಬಗಲಿ ಅವರು ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿಯ ವಿಚಾರಣೆ ನಡೆಸಿದ ಸಂದರ್ಭದಲ್ಲಿ


ಉದಯವಾಹಿನಿ ಚಿತ್ರ

ನ್ಯಾಯಾಲಯ ಈ ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿದೆ. ಬಗಲಿ ಅವರು ವೀರಪ್ಪನ್ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಲಾಗಿತ್ತು. ಆದರೆ, ಬಗಲಿ ವೀರಪ್ಪನ್ ಕಾರ್ಯಾಚರಣೆಯಲ್ಲಿ ಭಾಗಿಯಾಗಿಲ್ಲ ಎಂದು ಸರ್ಕಾರದ ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು. ಈ ಹಿನ್ನೆಲೆಯಲ್ಲಿ, ಬಗಲಿ ಅವರ ಕುರಿತು ಹೆಚ್ಚಿನ ಮಾಹಿತಿ ನೀಡುವಂತೆ ನ್ಯಾಯಾಲಯ ಸರ್ಕಾರಕ್ಕೆ ಸೂಚನೆ ನೀಡಿದೆ.

**ಕೆಂಪೇಗೌಡ ಲೇಔಟ್ ಶೇ. 90ರಷ್ಟು ಕಾಮಗಾರಿ ಪೂರ್ಣ**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಆಯುಕ್ತ ಜಯರಾಮ್ ಅವರು ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಶೇ. 90ರಷ್ಟು ಮೂಲಸೌಕರ್ಯ ಕಾಮಗಾರಿಗಳು ಪೂರ್ಣಗೊಂಡಿವೆ ಎಂದು ಹೇಳಿದ್ದಾರೆ. ಉಳಿದ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಅವರು ಭರವಸೆ ನೀಡಿದರು. ಆದರೆ, ಬಿಡಿಎ ಆಯುಕ್ತರು ಕರೆದಿದ್ದ ಸಭೆಗೆ ಹಾಜರಾದ ನಿವೇಶನದಾರರು, ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಮಾತನಾಡಲು ಅವಕಾಶ ನೀಡದ ಕಾರಣ ಸಭೆಯನ್ನೇ ಬಹಿಷ್ಕರಿಸಿದ್ದಾರೆ. ಇದರಿಂದಾಗಿ ಬಿಡಿಎ ಆಯುಕ್ತರ ಭರವಸೆಗಳ ಹೊರತಾಗಿಯೂ, ನಿವೇಶನದಾರರ ಅಸಮಾಧಾನ ಮುಂದುವರಿದಿದೆ.

**ಬಿಡಿಎಯ ಈ ಒಂದು ನಿರ್ಧಾರವೇ ಕೆಂಪೇಗೌಡ ಬಡಾವಣೆ ಅಭಿವೃದ್ಧಿ ವಿಳಂಬಕ್ಕೆ ಕಾರಣ:** ನಾಡಪ್ರಭು ಕೆಂಪೇಗೌಡ ಲೇಔಟ್‌ನಲ್ಲಿ ಈಗಾಗಲೇ ಮೂಲಸೌಕರ್ಯ ಕಾಮಗಾರಿಗಳು ವಿಳಂಬವಾಗಿರುವ ಹಿನ್ನೆಲೆಯಲ್ಲಿ, ಆರು ಬ್ಲಾಕ್‌ಗಳ ಕಾಮಗಾರಿಯನ್ನು ಒಂದೇ ಏಜೆನ್ಸಿಗೆ ಅಥವಾ ಗುತ್ತಿಗೆದಾರರಿಗೆ ವಹಿಸುವ ಬಿಡಿಎ ನಿರ್ಧಾರಕ್ಕೆ ನಿವಾಸಿಗಳು ಮತ್ತು ನಿವೇಶನದಾರರಿಂದ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಈಗಾಗಲೇ ಒಂದೊಂದು ಬ್ಲಾಕ್ ಕಾಮಗಾರಿಗಳನ್ನು ಬೇರೆ ಬೇರೆ ಏಜೆನ್ಸಿಗಳಿಗೆ ನೀಡಿದ್ದರೂ ಸಹ ಅವುಗಳನ್ನು ನಿಗದಿತ ಕಾಲಮಿತಿಯಲ್ಲಿ ಮುಗಿಸಲು ಸಾಧ್ಯವಾಗಿಲ್ಲ. ಇಂತಹ ಪರಿಸ್ಥಿತಿಯಲ್ಲಿ, ಆರು ಬ್ಲಾಕ್‌ಗಳ ಬೃಹತ್ ಕಾಮಗಾರಿಯನ್ನು ಒಂದೇ ಟೆಂಡರ್ ಮೂಲಕ ಒಬ್ಬರೇ ಗುತ್ತಿಗೆದಾರರಿಗೆ ನೀಡಿದರೆ, ಅದು ಹೇಗೆ ಕಾಲಮಿತಿಯಲ್ಲಿ ಪೂರ್ಣಗೊಳ್ಳಲು ಸಾಧ್ಯ ಎಂದು ನಿವೇಶನದಾರರು ಪ್ರಶ್ನಿಸಿದ್ದಾರೆ. ಈ ನಿರ್ಧಾರದಿಂದ ಕಾಮಗಾರಿಗಳು ಮತ್ತಷ್ಟು ವಿಳಂಬವಾಗುವ ಆತಂಕವನ್ನು ಅವರು ವ್ಯಕ್ತಪಡಿಸಿದ್ದಾರೆ.

**ಹಳ್ಳಿಗಳು-ಭೂಮಾಪಕರು-ಡಿಇಒ ವಿವರ**

- **ಮನೋಹರ್(ಭೂಮಾಪಕ), ಮೋಹನ್ (ಡಿಇಒ): ಕೋಲೂರು-ಗುರುರಾಯನಪುರ, ಕೇತೋಹಳ್ಳಿ, ನರಸೀಪುರ, ರಾಮಪುರ.**
- **ಗಿರೀಶ್(ಭೂಮಾಪಕ), ರಾಜೇಶ್ವರಿ(ಡಿಇಒ): ಚಿಕ್ಕಲ್ಲೂರು-ವೆಂಕಟಾಪುರ, ರಾಮಪುರ, ಕೋಲೂರು, ನಂಜುಂಡಾಪುರ.**
- **ಮಲ್ಲಯ್ಯ(ಭೂಮಾಪಕ), ಮಮತಾ(ಡಿಇಒ): ಮಾರಗೊಂಡನಹಳ್ಳಿ, ಮಾಲಿಗೊಂಡನಹಳ್ಳಿ, ರಾಮೋಹಳ್ಳಿ, ಚಿಕ್ಕಲ್ಲೂರು.**
- **ಸೋಮಶೇಖರ್(ಭೂಮಾಪಕ),ಜೀವನ್ (ಡಿಇಒ): ಶೇಷಗಿರಿಪುರ, ಕಣಿಮಿಣಿಕೆ, ಕೊಡಿಗೆಹಳ್ಳಿ.**
- **ಶಿವಾರೆಡ್ಡಿ (ಭೂಮಾಪಕ), ಹೇಮಂತ್(ಡಿಇಒ): ಶೀಗೆಹಳ್ಳಿ, ಮುದ್ದಿನಪಾಳ್ಯ (ಮಾಗಡಿ ಅಭಿವೃದ್ಧಿ ಪ್ರಾಧಿಕಾರ).**

## ಸಿಎಂ ಭೇಟಿಯಾದ ವಕೀಲರ ನಿಯೋಗ, SIT ರಚಿಸುವಂತೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗುತ್ತಿರುವ ಧರ್ಮಸ್ಥಳ ಪ್ರಕರಣದ ತನಿಖೆಗೆ ಸುಪ್ರೀಂ ಕೋರ್ಟ್ ಅಥವಾ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ವಕೀಲರ ನಿಯೋಗ ಆಗ್ರಹಿಸಿದೆ. ಸಿಎಂ ನಿವಾಸ 'ಕಾವೇರಿಯಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ನಿಯೋಗವು ಪ್ರಕರಣದ ಬಗ್ಗೆ ಸಮಗ್ರ ತನಿಖೆ ಆಗಬೇಕು. ಅತ್ಯಾಚಾರ ಮತ್ತು ಕೊಲೆಗಳಿಗೆ ಸಂಬಂಧಿಸಿದ ಈ ಪ್ರಕರಣದಲ್ಲಿ ತನಿಖೆ ಪ್ರಕ್ರಿಯೆ ಅತ್ಯಂತ ಪಾರದರ್ಶಕವಾಗಿ ನಡೆಯಬೇಕು. ವಿಚಾರಣೆ ಪ್ರಕ್ರಿಯೆಯನ್ನು ಸಂಪೂರ್ಣ ವಿಡಿಯೋ ದಾಖಲೆ ಮಾಡಬೇಕು ಎಂದು ಮನವಿ ಸಲ್ಲಿಸಿತು.

ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ಸಿ.ಎಸ್.ದ್ವಾರಕನಾಥ್, ಎಸ್.ಬಾಲನ್, ಉಮಾಪತಿ ಎಸ್. ಮೊದಲಾದವರು ಈ ಕುರಿತ ಪತ್ರವನ್ನು ನೀಡಿದರು.

ಧರ್ಮಸ್ಥಳದಲ್ಲಿ ಸಾಮೂಹಿಕ ಅತ್ಯಾಚಾರಗಳು,


ಉದಯವಾಹಿನಿ ಚಿತ್ರ

ಹತ್ಯೆಗಳು ನಡೆದಿವೆ. ನೂರಾರು ಶವಗಳನ್ನು ಸುತ್ತಮುತ್ತಲ ಅರಣ್ಯ ಪ್ರದೇಶದಲ್ಲಿ ಹೂಳಲಾಗಿದೆ ಎಂಬ ವಿವರ ಇರುವ ವರದಿಗಳು ಸುದ್ದಿ ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾಗಿವೆ. ಈ ಗಂಭೀರ ವಿಷಯದತ್ತ ನೀವು ಗಮನ ಹರಿಸಬೇಕು ಎಂದು ಕೋರಿದ್ದಾರೆ. ಒಬ್ಬ ಸಾಕ್ಷಿಯು ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರಾಗಿ, ಕಳೇಬರದ ಮಾಹಿತಿಯನ್ನು ಸಲ್ಲಿಸಿದ್ದಾನೆ. ಜೊತೆಗೆ ನೂರಾರು ಶವಗಳು ಇರುವ ಸ್ಥಳವನ್ನು ತೋರಿಸುತ್ತೇನೆ ಎಂದಿದ್ದಾನೆ. ನ್ಯಾಯಾಲಯದಲ್ಲಿ ಹೇಳಿಕೆ ದಾಖಲಿಸಿದ ನಂತರವಷ್ಟೇ ಎಫ್‌ಐಆರ್ ದಾಖಲಿಸಲಾಗಿದೆ. ಆದರೆ, ಶವಗಳನ್ನು ಹುಡುಕಿ, ಹೊರತೆಗೆಯುವ ಕೆಲಸ ಇನ್ನೂ ಆರಂಭವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

> **ಅತ್ಯಂತ ಪ್ರಭಾವಿ, ರಾಜಕೀಯ ನಂಟು ಇರುವ ವ್ಯಕ್ತಿಗಳ ವಿರುದ್ಧ ಆರೋಪ ಎದುರಾಗಿದೆ. ಆದರೆ, ತನಿಖೆ ನಡೆಸುತ್ತಿರುವುದು ಸಬ್ ಇನ್‌ಸ್ಪೆಕ್ಟರ್ ದರ್ಜೆಯ ಅಧಿಕಾರಿ. ಆರೋಪಿಗಳು ತನಿಖೆಯನ್ನು ಪ್ರಭಾವಿಸುವ, ಸಾಕ್ಷ್ಯಗಳನ್ನು ನಾಶಪಡಿಸುವ ಅಪಾಯವಿದೆ. ಹೀಗಾಗಿ ನಿವೃತ್ತ ನ್ಯಾಯಮೂರ್ತಿಗಳ ಮೇಲ್ವಿಚಾರಣೆಯಲ್ಲಿ ಎಸ್‌ಐಟಿ ತನಿಖೆ ನಡೆಯಬೇಕು. ಎಡಿಜಿಪಿ ಒಬ್ಬರನ್ನು ತನಿಖಾ ತಂಡದ ಮುಖ್ಯಸ್ಥರಾಗಿ ನೇಮಕ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.**

## ಸಿಗಂದೂರು ಸೇತುವೆ ಉದ್ಘಾಟನೆಗೆ ಸಿಎಂಗೆ ಬರಬೇಡ ಅಂದಿದ್ದೇ ಬಿಎಸ್‌ವೈ

• ಉದಯವಾಹಿನಿ, ಬೆಂಗಳೂರು

ಸಿಗಂದೂರು ಸೇತುವೆ ಉದ್ಘಾಟನೆಗೆ ಸಿಎಂಗೆ ಬರಬೇಡ ಅಂದಿದ್ದ ಯಡಿಯೂರಪ್ಪ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ಈ ಮೂಲಕ ಸಿಗಂದೂರು ಸೇತುವೆ ಶಿಷ್ಟಾಚಾರ ಜಟಾಪಟಿಗೆ ಯತ್ನಾಳ್ ಹೊಸ ಟ್ವಿಸ್ಟ್ ಕೊಟ್ಟಿದ್ದಾರೆ. ಬೆಂಗಳೂರಿನಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, ಸಿಗಂದೂರು ಸೇತುವೆಯಲ್ಲಿ ಶಿಷ್ಟಾಚಾರ ಪಾಲನೆ ಅನ್ನೋದು ಒಂದು ನೆಪ.

ಯಡಿಯೂರಪ್ಪ ಸಿಎಂ ಸಿದ್ದರಾಮಯ್ಯ ಮಧ್ಯೆ ಅಡ್ಜಸ್ಟ್‌ಮೆಂಟ್ ಆಗಿತ್ತು. ಸಿಎಂಗೆ ನೀವೂ ಬರಬೇಡಿ, ನಿಮ್ಮವರೂ ಬರೋದು ಬೇಡ ಎಂದಿದ್ದರು. ಈ ಮೂಲಕ ತಮ್ಮ ಹಾಗೂ ಸಿದ್ದರಾಮಯ್ಯ ನಡುವೆ ಅಡ್ಜಸ್ಟ್‌ಮೆಂಟ್ ಪಾಲಿಟಿಕ್ಸ್ ಇಲ್ಲ ಅಂತ ತೋರಿಸಿಕೊಳ್ಳೋದು



ಯಡಿಯೂರಪ್ಪ ಉದ್ದೇಶ ಆಗಿತ್ತು ಎಂದಿದ್ದಾರೆ.

ಅಡ್ಜಸ್ಟ್‌ಮೆಂಟ್ ಇಲ್ಲ ಅಂತ ತೋರಿಸಿಕೊಂಡು ತಮ್ಮ ಮಗ ರಾಜ್ಯಾಧ್ಯಕ್ಷನಾಗಿ ಮುಂದುವರಿಯಲಿ ಎಂಬುದು ಅವರ ಉದ್ದೇಶ. ಈ ಅಪ್ಪ–ಮಗನಿಗೂ ಸಿದ್ದರಾಮಯ್ಯಗೂ ಹೊಂದಾಣಿಕೆ ಇದೆ. ರಾಜ್ಯಾಧ್ಯಕ್ಷ ಆಗಿಯೂ ವಿಜಯೇಂದ್ರ ಮುಂದುವರಿತಾರೆ. ಅಮೇರಿಕ ಅಧ್ಯಕ್ಷರಾಗಿಯೂ ವಿಜಯೇಂದ್ರ ಅವರೇ ಮುಂದುವರಿತಾರೆ ಎಂದು ವ್ಯಂಗ್ಯವಾಡಿದ್ದಾರೆ.

## ಎ ಖಾತಾದಂತೆ ಬಿ ಖಾತೆಗಳಿಗೂ ಅಧಿಕೃತ ಮಾನ್ಯತೆ

• ಉದಯವಾಹಿನಿ, ಬೆಂಗಳೂರು

ಬಿ ಖಾತಾ ಹೊಂದಿರುವ ಬೆಂಗಳೂರಿಗರಿಗೆ ಸರ್ಕಾರ ಗುಡ್ ನ್ಯೂಸ್ ಕೊಟ್ಟಿದೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಎ ಖಾತಾ, ಬಿ ಖಾತಾ ಗೊಂದಲಕ್ಕೆ ತೆರೆ ಎಳೆಯಲು ಸಂಪುಟ ಒಪ್ಪಿಗೆ ನೀಡಿದೆ. ಎ ಖಾತಾದಂತೆ ಬಿ ಖಾತಾಗೂ ಅಧಿಕೃತ ಮಾನ್ಯತೆ ನೀಡಲು ಸಂಪುಟ ತೀರ್ಮಾನಿಸಿದ್ದು, ಶೀಘ್ರದಲ್ಲೇ ರಾಜ್ಯ ಸರ್ಕಾರದಿಂದ ಅಧಿಕೃತ ಅಧಿಸೂಚನೆ ಹೊರಬೀಳಲಿದೆ. 2020ರ ಮೇ 22 ರಿಂದ ಅನ್ವಯ ಆಗಲಿದ್ದು, 2024 ಸೆ.30 ರ ವರೆಗೆ ಮಾತ್ರ ಹಾಲಿ ಇರುವ ಬಿ ಖಾತಾಗಳನ್ನು ಎಲ್ಲಾ ಕಾನೂನು ಉದ್ದೇಶಕ್ಕೆ ಅಧಿಕೃತ ಖಾತಾ ಎಂದು ಪರಿಗಣಿಸುವುದಾಗಿ ಸಂಪುಟ ತೀರ್ಮಾನಿಸಿದೆ.



ಈ ಮೂಲಕ ಬಿ ಖಾತಾಗಳಿಗಿದ್ದ ಬಿಬಿಎಂಪಿ ಪ್ಲಾನಿಂಗ್, ಓಸಿ, ಬ್ಯಾಂಕ್ ಲೋನ್ ಸಮಸ್ಯೆಗೆ ಮುಕ್ತಿ ಸಿಗಲಿದ್ದು, ಸರ್ಕಾರದ ಮಾನದಂಡಗಳು ಮುಂದಿನ ದಿನಗಗಳಲ್ಲಿ ಸ್ಪಷ್ಟವಾಗಲಿದೆ.

ಇದೇ ವೇಳೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿ 5 ಪಾಲಿಕಗಳ ರಚನೆಗೆ ಕ್ಯಾಬಿನೆಟ್ ಒಪ್ಪಿಗೆ ಸೂಚಿಸಿದೆ.

ಆದರೆ, 5 ಪಾಲಿಕೆಗಳ ವ್ಯಾಪ್ತಿ ಪ್ರದೇಶ, ಗಡಿಗಳ ವಿಚಾರದಲ್ಲಿ ಗೊಂದಲ ಇದ್ದು, ಶಾಸಕರ ಸಭೆ ಕರೆದು ಅಂತಿಮಗೊಳಿಸುತ್ತೇವೆ ಎಂದು ಕ್ಯಾಬಿನೆಟ್ ಸಲಹೆ ನೀಡಿದೆ. ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆಗೆ ಕ್ಯಾಬಿನೆಟ್ ತಾತ್ವಿಕ ಅನುಮೋದನೆ ನೀಡಿದ್ದು, ಎನ್‌ಟಿಪಿಸಿ ಗುರುತಿಸಿರುವ ಸಂಭಾವ್ಯ ಸ್ಥಳಗಳ ಪರಿಶೀಲನೆಗೆ ನಿರ್ಧಾರ ಮಾಡಿದೆ.

ಇಡೀ ಕರ್ನಾಟಕದಲ್ಲಿ ಎಲ್ಲೆಲ್ಲಿ ಸಾಧ್ಯವೋ ಆ ಸ್ಥಳಗಳ ಅಧ್ಯಯನ ಮಾಡಲು ಕ್ಯಾಬಿನೆಟ್ ನಿರ್ಧರಿಸಿದೆ. ಅಂದಹಾಗೆ 3 ಸ್ಥಳಗಳ ಪರಿಶೀಲನೆಗೆ ಎನ್ಟಿಪಿಸಿ ಸಲಹೆ ನೀಡಿದ್ದರೂ, ಇಡೀ ಕರ್ನಾಟಕದಲ್ಲಿ ಒಟ್ಟಾರೆ ಸ್ಥಳ ಪರಿಶೀಲನೆ ಅಧ್ಯಯನ ನಡೆಸಲು ಕ್ಯಾಬಿನೆಟ್ ತೀರ್ಮಾನಿಸಿದೆ.

## ನ್ಯಾಯಮೂರ್ತಿಗಳ ವರ್ಗಾವಣೆ ಸಲ್ಲ

• ಉದಯವಾಹಿನಿ, ಬೆಂಗಳೂರು

ರಾಜ್ಯ ಹೈಕೋರ್ಟ್‌ನ ಸ್ಥಳೀಯ ನ್ಯಾಯಮೂರ್ತಿಗಳನ್ನು ಅನ್ಯ ರಾಜ್ಯಗಳಿಗೆ ವರ್ಗಾವಣೆ ಮಾಡುವ ಪದ್ಧತಿ ಒಳ್ಳೆಯ ಬೆಳವಣಿಗೆ ಅಲ್ಲ ಎಂದು ಬೆಂಗಳೂರು ವಕೀಲರ ಸಂಘ (ಎಎಬಿ) ಆತಂಕ ವ್ಯಕ್ತಪಡಿಸಿದೆ.ಈ ಸಂಬಂಧ ಸಂಘದ ಅಧ್ಯಕ್ಷ ವಿವೇಕ ರೆಡ್ಡಿ. ಉಪಾಧ್ಯಕ್ಷ ಸಿ.ಎಸ್.ಗಿರೀಶ್, ಪ್ರಧಾನ ಕಾರ್ಯದರ್ಶಿ ಎಚ್.ವಿ.ಪ್ರವೀಣ್ ಗೌಡ ಮತ್ತು ಖಜಾಂಚಿ ಶ್ವೇತಾ ರವಿಶಂಕರ್ ಸಹಿ ಮಾಡಿರುವ ಹೇಳಿಕೆಯನ್ನು ಮಾಧ್ಯಮಗಳಿಗೆ ಬಿಡುಗಡೆ ಮಾಡಲಾಗಿದೆ.

ಅನ್ನ ರಾಜ್ಯದ ನ್ಯಾಯಮೂರ್ತಿಗಳನ್ನು ನಾವು ಸ್ವಾಗತಿಸುತ್ತೇವೆ ನಿಜ. ಆದರೆ,



ಸ್ಥಳೀಯ ನ್ಯಾಯಮೂರ್ತಿಗಳು ಪ್ರಕರಣಗಳನ್ನು ಸುಲಭವಾಗಿ ಮತ್ತು ಶೀಘ್ರವಾಗಿ ಅರ್ಥೈಸಿಕೊಂಡು ಸೂಕ್ತ ನ್ಯಾಯ ಒದಗಿಸಲು ಅನುಕೂಲವಾಗುತ್ತದೆ ಎಂಬುದನ್ನು ಗಂಭೀರವಾಗಿ ಪರಿಗಣಿಸಬೇಕು ಸಂಘವು ಈಗಾಗಲೇ ಇಂತಹ ವರ್ಗಾವಣೆ ನೀತಿಗೆ ವಿರುದ್ಧವಾಗಿದೆ ಎಂಬುದನ್ನು ಈಗ ಮತ್ತೊಮ್ಮೆ ಗಮನಕ್ಕೆ ತರಲಾಗುತ್ತಿದೆ' ಎಂದು ಪ್ರಕಟಣೆಯಲ್ಲಿ ವಿವರಿಸಲಾಗಿದೆ. ಪ್ರಕರಣಗಳ ಸಂಖ್ಯೆ ಏರುಗತಿಯಲ್ಲಿರುವ ಇಂದಿನ ದಿನಗಳಲ್ಲಿ ಅನ್ಯ ರಾಜ್ಯದ ನ್ಯಾಯಮೂರ್ತಿಗಳಿಗೆ ಸ್ಥಳೀಯ ಭಾಷೆಯ ತೊಡಕುಂಟಾಗುತ್ತದೆ. ಸರ್ಕಾರದ ಅಧಿಸೂಚನೆ, ಸುತ್ತೋಲೆ, ಆದೇಶಗಳನ್ನು ಕನ್ನಡದಿಂದ ಇಂಗ್ಲಿಷ್‌ಗೆ ತರ್ಜುಮೆ ಮಾಡುವ ಪ್ರಕ್ರಿಯೆಗೆ ಹೆಚ್ಚಿನ ಸಮಯ ತಗಲುತ್ತದೆ. ಅಂತೆಯೇ, ಇದು ಕಕ್ಷಿದಾರರ ಮೇಲೆ ಆರ್ಥಿಕ ಹೊರೆಯನ್ನು ಹೇರುತ್ತದೆ' ಎಂದು ಕಳವಳ ವ್ಯಕ್ತಪಡಿಸಲಾಗಿದೆ.

## ಬೇಲ್ ನೀಡುವಾಗ ಹೈಕೋರ್ಟ್ ತನ್ನ ವಿವೇಚನೆ ಬಳಸಿಲ್ಲ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನು ಪಡೆದು ಶೂಟಿಂಗ್, ವಿದೇಶ ಪ್ರವಾಸ ಅಂತಾ ಜಾಲಿ ಮೂಡ್‌ನಲ್ಲಿದ್ದ ನಟ ದರ್ಶನ್‌ಗೆ ಸುಪ್ರೀಂ ಕೋರ್ಟ್ ಶಾಕ್ ಕೊಟ್ಟಿದೆ. ಹೈಕೋರ್ಟ್ ತೀರ್ಪಿನ ಬಗ್ಗೆ ಪರಿಶೀಲಿಸಿರುವ ಸುಪ್ರೀಂ ಕೋರ್ಟ್ ಬದಲಾವಣೆಯ ಬಗ್ಗೆ ಪರೋಕ್ಷವಾಗಿ ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದೆ. ಮಂಗಳವಾರ (ಜು.22) ಅಂತಿಮ ವಿಚಾರಣೆ ನಡೆಸಿ ಅಂದೇ ಆದೇಶ ನೀಡುವುದಾಗಿ ಸುಪ್ರೀಂ ಕೋರ್ಟ್ ಹೇಳಿದ್ದು ಅಂದು ದರ್ಶನ ಪವಿತ್ರಾ ಗೌಡ ಸೇರಿ ಏಳು ಮಂದಿಯ ಭವಿಷ್ಯ ನಿರ್ಧಾರವಾಗಲಿದೆ.

**22ಕ್ಕೆ ಜಾಮೀನು ಭವಿಷ್ಯ ನಿರ್ಧಾರ**

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲುವಾಸ ಅನುಭವಿಸಿ, ಜಾಮೀನು ಪಡೆದು ಸದ್ಯ ಶೂಟಿಂಗ್‌ಗಾಗಿ ವಿದೇಶಿ ಪ್ರವಾಸ ಅಂತಾ ಬ್ಯುಸಿಯಾಗಿರುವ ನಟ ದರ್ಶನ್‌ಗೆ ಸುಪ್ರೀಂ ಕೋರ್ಟ್ ಶಾಕ್ ಕೊಡುವ ಸಾಧ್ಯತೆ ಇದೆ. ಹೈಕೋರ್ಟ್ ನೀಡಿರುವ ಜಾಮೀನು ಪ್ರಶ್ನಿಸಿ ಬೆಂಗಳೂರು ಪೊಲೀಸರು ಸಲ್ಲಿಕೆ ಮಾಡಿರುವ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್‌ನ ನ್ಯಾ.ಪರ್ದಿವಾಲಾ ನೇತೃತ್ವದ ದ್ವಿ–ಸದಸ್ಯ ಪೀಠ ಹೈಕೋರ್ಟ್ ಆದೇಶದ ಬಗ್ಗೆ ಭಿನ್ನಾಭಿಪ್ರಾಯಗಳನ್ನ ವ್ಯಕ್ತಪಡಿಸಿದೆ.


ಉದಯವಾಹಿನಿ ಚಿತ್ರ

ಜಾಮೀನು ನೀಡುವಾಗ ಹೈಕೋರ್ಟ್ ತನ್ನ ವಿವೇಚನೆಯನ್ನ ಸೂಕ್ತವಾಗಿ ಬಳಸಿಲ್ಲ ಎಂದ ನ್ಯಾ. ಪರ್ದಿವಾಲಾ. ಈ ಬಗ್ಗೆ ಏನು ಹೇಳಬಯಸುತ್ತೀರಿ ಎಂದು ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್‌ಗೆ ಪ್ರಶ್ನಿಸಿದರು. ಹೈಕೋರ್ಟ್ ಆದೇಶವನ್ನ ಹೇಗೆ ನೀಡಿದೆ ಅನ್ನೋದನ್ನ ನೀವು ಗಮನಿಸಿರಬಹುದು ಎಂದು ಸಿಬಲ್ ಅವರಿಗೆ ಹೇಳಿದ ನ್ಯಾಯಾಲಯ ಕೇಳಿತು.

**22ಕ್ಕೆ ಜಾಮೀನು ಭವಿಷ್ಯ ನಿರ್ಧಾರ:** ಇದಕ್ಕೆ ಪ್ರತಿಯಾಗಿ ದರ್ಶನ ಪರ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಲು ಮುಂದಾಗಿದ್ದರು. ಈ ವೇಳೆ ಮಧ್ಯಪ್ರವೇಶ ಮಾಡಿದ ನ್ಯಾ. ಪರ್ದಿವಾಲಾ ಮಂಗಳವಾರ ಅಂತಿಮವಾದ ಮಂಡಿಸಿ, ಅಂದೇ ಈ ಬಗ್ಗೆ ತೀರ್ಪು ನೀಡಲಾಗುವುದು ಎಂದು ಹೇಳಿದರು. ಹೀಗಾಗೀ ಅಂದು ದರ್ಶನ್ ಜಾಮೀನು ಭವಿಷ್ಯ ನಿರ್ಧಾರವಾಗಲಿದೆ.

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಈಗಾಗಲೇ ತನಿಖೆ ಮಾಡಿ ಚಾರ್ಜ್ ಶೀಟ್ ಕೂಡ ಸಲ್ಲಿಕೆಯಾಗಿದೆ. ಹೀಗಾಗಿ ಜಾಮೀನು ಸಿಗಬಹುದು ಮುಂದುವರಿಸಬಹುದು ಎನ್ನುವುದು ದರ್ಶನ ಮತ್ತು ಇತರೆ ಆರೋಪಿಗಳ ಪರ ವಕೀಲರ ಲೆಕ್ಕಾಚಾರ. ಆದ್ರೆ ಹೈಕೋರ್ಟ್ ಆದೇಶದ ಬಗ್ಗೆ ಭಿನ್ನಾಭಿಪ್ರಾಯ ಹೊಂದಿರುವ ಸುಪ್ರೀಂ ಕೋರ್ಟ್ ದರ್ಶನ್‌ಗೆ ಜಾಮೀನು ನೀಡಿರುವುದಕ್ಕೆ ಅಚ್ಚರಿ ವ್ಯಕ್ತಪಡಿಸಿದೆ.

> **ಪವಿತ್ರಾ ಗೌಡ ಸೇರಿ ಇತರ ಐವರ ಭವಿಷ್ಯ**
> **ನಟ ದರ್ಶನ ಮಾತ್ರವಲ್ಲ, ಆಪ್ತೆ ಪವಿತ್ರಾ ಗೌಡ ಸೇರಿ ಇತರೆ ಐವರು ಆರೋಪಿಗಳ ಭವಿಷ್ಯವೂ ನಿರ್ಧಾರವಾಗಲಿದೆ. ದರ್ಶನ ಪರ ವಾದ ಆಲಿಸಿದ ಬಳಿಕ ಉಳಿದ ಆರೋಪಿಗಳ ಪರ ವಾದವನ್ನೂ ಕೋರ್ಟ್ ಆಲಿಸಲಿದೆ. ಇದಾದ ಬಳಿಕ ಕೋರ್ಟ್ ತನ್ನ ಅಂತಿಮ ಆದೇಶ ನೀಡಲಿದೆ.**

# ತನಿಖಾ ವರದಿಯಲ್ಲಿ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ್ಯ ಸಾಬೀತು!

### ಆರ್‌ಸಿಬಿ ಐಪಿಎಲ್ ಗೆಲುವಿನ ಸಂಭ್ರಮಾಚರಣೆ ವೇಳೆ ಕಾಲ್ತುಳಿತ, ನ್ಯಾ. ಮೈಕಲ್ ಡಿ ಕುನ್ಹಾ ಅವರ ಏಕಸದಸ್ಯ ಆಯೋಗ ತನಿಖಾ ವರದಿ ಸಲ್ಲಿಕೆ


• ಉದಯವಾಹಿನಿ, ಬೆಂಗಳೂರು

ಆರ್ ಸಿ ಬಿ ಗೆಲುವಿನ ಸಂಭ್ರಮಾಚರಣೆಯ ಸಂದರ್ಭದಲ್ಲಿ ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಪೊಲೀಸ ಅಧಿಕಾರಿಗಳ ನಿರ್ಲಕ್ಷ್ಯ ಸಾಬೀತು ಆಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಹೇಳಿದರು.

ಸಂಪುಟ ಸಭೆಯ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾ. ಮೈಕಲ್ ಡಿ ಕುನ್ಹಾ ಅವರ ಏಕಸದಸ್ಯ ಆಯೋಗ ನೀಡಿರುವ ತನಿಖಾ ವರದಿಯ ಕೆಲವು ಅಂಶಗಳ ಬಗ್ಗೆ ಗಮನ ಸೆಳೆದರು. ಆರ್ ಸಿ ಬಿ ವಿರುದ್ಧ ಕ್ರಿಮಿನಲ್ ಮೊಕದ್ದಮೆಗೆ ಸರ್ಕಾರದ ನಿರ್ಧಾರ ವಿಚಾರವಾಗಿ ಮಾತನಾಡಿ, ರಾಜ್ಯ ಕ್ರಿಕೆಟ್ ಸಂಸ್ಥೆಯ ವಿರುದ್ಧವೂ ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ. ಡಿ ಕುನ್ಹಾ ವರದಿಯಲ್ಲಿ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ್ಯ ದೃಢಪಟ್ಟಿದೆ.

ಸಂಬಂಧಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ವರದಿಯಲ್ಲೂ ಶಿಫಾರಸು ಮಾಡಲಾಗಿದೆ ಎಂದರು. ಪೊಲೀಸ್


ಉದಯವಾಹಿನಿ ಚಿತ್ರ



ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸಲಹೆ. ಹೀಗಾಗಿ ಪೊಲೀಸ್ ಅಧಿಕಾರಿಗಳ ವಿರುದ್ಧವು ಕ್ರಿಮಿನಲ್ ಮೊಕದ್ದಮೆ ದಾಖಲು ಸಾಧ್ಯತೆ ಇದೆ ಎಂದು ಅವರು ತಿಳಿಸಿದರು. ಆದರೆ ಇದಕ್ಕೆ ಸಂಬಂಧಿಸಿ ಮತ್ತೆ ಮುಂದಿನ ಕ್ಯಾಬಿನೆಟ್‌ನಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಆರ್ ಸಿ ಬಿ ಸಂಭ್ರಮಾಚರಣೆಯ ಸಂದರ್ಭದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ 11 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಘಟನೆ ರಾಜ್ಯ ಸರ್ಕಾರಕ್ಕೆ ತೀವ್ರ ಮುಜುಗರ ಉಂಟು ಮಾಡಿತ್ತು.

ಸರ್ಕಾರದ ತುರ್ತು ನಿರ್ಧಾರದಿಂದ ಘಟನೆ ಆಗಿದೆ ಎಂದು ಆರೋಪ ಮಾಡಲಾಗಿತ್ತು. ಆದರೆ ಇದೇ ಸಂದರ್ಭದಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ ದಯಾನಂದ ಸೇರಿಂತೆ 5 ಮಂದಿ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಲಾಗಿತ್ತು. ಸಲ್ಲದೆ ತನಿಖೆ ನಡೆಸಲು ನಿವೃತ್ತ ನ್ಯಾಯಮೂರ್ತಿ ಮೈಕಲ್ ಡಿ ಕುನ್ಹಾ ನೇತೃತ್ವದಲ್ಲಿ ಏಕ ಸದಸ್ಯ ಆಯೋಗವನ್ನು ರಚನೆ ಮಾಡಲಾಗಿತ್ತು.

**ಏನಿದು ಘಟನೆ:** ಜೂನ್ 4ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವದ ವೇಳೆ 11 ಜನರು ಕಾಲ್ತುಳಿತಕ್ಕೊಳಗಾಗಿ ಮೃತಪಟ್ಟಿದ್ದರು. ಮರಣೋತ್ತರ ಪರೀಕ್ಷೆಯ ಪ್ರಾಥಮಿಕ ವರದಿ ಪ್ರಕಾರ ಉಸಿರುಗಟ್ಟುವಿಕೆ. ದೇಹದ ಮೂಳೆಗಳು ಮುರಿದು ಮೃತಪಟ್ಟಿದ್ದಾರೆ ಎನ್ನಲಾಗಿತ್ತು. ಈ ಘಟನೆಯಿಂದಾಗಿ 50ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು.

> **ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆಗೆ ತಾತ್ವಿಕ ಅನುಮೋದನೆ**
> **ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆಗೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಎನ್‌ಟಿಪಿಸಿ ಗುರುತಿಸಿರುವ ಸಂಭಾವ್ಯ ಸ್ಥಳಗಳ ಪರಿಶೀಲನೆಗೆ ನಿರ್ಧಾರ ಕೈಗೊಳ್ಳಲಾಗಿದೆ. ಕರ್ನಾಟಕದಲ್ಲಿ ಎಲ್ಲೆಲ್ಲಿ ಸಾಧ್ಯವೋ ಆ ಸ್ಥಳಗಳ ಅಧ್ಯಯನ ಮಾಡಲು ಕ್ಯಾಬಿನೆಟ್ ನಿರ್ಧಾರ ಕೈಗೊಳ್ಳಲಾಗಿದೆ. ಒಟ್ಟು ಸ್ಥಳಗಳ ಪರಿಶೀಲನೆಗೆ ಎನ್‌ಟಿಪಿಸಿ ಸಲಹೆ ನೀಡಿದೆ. ಆದರೆ ಇಡೀ ಕರ್ನಾಟಕದಲ್ಲಿ ಒಟ್ಟಾರೆ ಸ್ಥಳ ಪರಿಶೀಲನೆ ಅಧ್ಯಯನ ನಡೆಸಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.**

ಅಂತರಾಳದಿಂದ... EDITORIAL

# ಚಾರಿತ್ರಿಕ ರೈತ ಹೋರಾಟಕ್ಕೆ ಜಯ; ಸಂತಸದ ಜೊತೆಗೆ ಎಚ್ಚರವೂ ಅಗತ್ಯ

ಕೃಷಿ ಭೂಮಿ ಸ್ವಾಧೀನ ವಿರೋಧಿಸಿ ರೈತರು ನಡೆಸುತ್ತಿದ್ದ ಹೋರಾಟಕ್ಕೆ ಮನ್ನಣೆ ನೀಡಿರುವ ರಾಜ್ಯ ಸರ್ಕಾರ, ಭೂಸ್ವಾಧೀನ ಪ್ರಕ್ರಿಯೆಯಿಂದ ಹಿಂದೆ ಸರಿದಿದೆ. ಈ ನಿರ್ಧಾರ, ಚುನಾಯಿತ ಸರ್ಕಾರವೊಂದು ನಡೆದುಕೊಳ್ಳಬೇಕಾದ ಜವಾಬ್ದಾರಿಯುತ ನಡೆಯಾಗಿದೆ. . 2022ರಲ್ಲಿ ಅಂತಿಮ ಆದೇಶ ಪ್ರಕಟಗೊಂಡ ನಂತರ ಭೂಸ್ವಾಧೀನ ವಿರೋಧಿಸಿ ರೈತರು ಹೋರಾಟ ಆರಂಭಿಸಿದ್ದರು. ಕಳೆದ ಏಪ್ರಿಲ್‌ನಲ್ಲಿ ಭೂಸ್ವಾಧೀನದ ಅಂತಿಮ ಅಧಿಸೂಚನೆ ಪ್ರಕಟಗೊಂಡ ನಂತರ ರೈತರ ಹೋರಾಟ ತೀವ್ರಗೊಂಡಿತ್ತು ಹಾಗೂ ಆ ಹೋರಾಟಕ್ಕೆ ವಿವಿಧ ಕ್ಷೇತ್ರಗಳ ಮುಖಂಡರ ಬೆಂಬಲವೂ ದೊರೆತಿತ್ತು. ಅಂತಿಮವಾಗಿ ರೈತರ ಹೋರಾಟಕ್ಕೆ ಸ್ಪಂದಿಸಿರುವ ಸರ್ಕಾರ, ಭೂಸ್ವಾಧೀನದ ಅಧಿಸೂಚನೆಯನ್ನು ಹಿಂದಕ್ಕೆ ಪಡೆದುಕೊಂಡಿದೆ.

ಭೂಮಿ ಉಳಿಸಿಕೊಳ್ಳಲು ರೈತರು ನಡೆಸಿದ ಹೋರಾಟ ಹಾಗೂ ಭೂಸ್ವಾಧೀನ ಅಧಿಸೂಚನೆ ಹಿಂತೆಗೆದುಕೊಂಡಿರುವ ರಾಜ್ಯ ಸರ್ಕಾರದ ನಿರ್ಧಾರ. ಎರಡಕ್ಕೂ ಚಾರಿತ್ರಿಕ ಮಹತ್ವವಿದೆ. ಸಾವಿರ ದಿನಗಳಿಗೂ ಹೆಚ್ಚು ಕಾಲ ಹೋರಾಟವೊಂದನ್ನು ಜೀವಂತವಾಗಿ ಉಳಿಸಿಕೊಳ್ಳುವುದು ಸಮಕಾಲೀನ ಸಂದರ್ಭದಲ್ಲಿ ಸುಲಭವಲ್ಲ. ವ್ಯವಸ್ಥೆ ಹಾಗೂ ಸರ್ಕಾರ ಮಾನವೀಯ ಸ್ಪಂದನ ಗಳನ್ನು ಕಳೆದುಕೊಂಡಂತೆ ವರ್ತಿಸುವ ಉದಾಹರಣೆಗಳೇ ಹೆಚ್ಚಾಗಿರುವ ಸಂದರ್ಭದಲ್ಲಿ, ಹಿಂಸೆಗೆ ಅಸ್ಪದ ಕೊಡದೆ ಸತ್ಯಾಗ್ರಹ ಮಾರ್ಗದಲ್ಲಿ ಚಳವಳಿಯನ್ನು ನಡೆಸಿ ರಾಜ್ಯದ ರೈತರು ಯಶಸ್ಸು ಪಡೆದಿದ್ದಾರೆ. ಈ ಯಶಸ್ಸು, ದೃಢಸಂಕಲ್ಪದ ಪ್ರಾಮಾಣಿಕ ಚಳವಳಿಗಳಿಗೆ ವಿಳಂಬವಾಗಿಯಾದರೂ ನ್ಯಾಯ ದೊರೆಯುತ್ತದೆ ಎನ್ನುವುದಕ್ಕೆ ನಿದರ್ಶನದಂತಿದೆ. ಸರ್ಕಾರ ತನ್ನ ನಿರ್ಧಾರದಿಂದ ಹಿಂದೆ ಸರಿಯುವಂತೆ ಮಾಡಿರುವ ಹೋರಾಟದ ಯಶಸ್ಸಿನ ಶ್ರೇಯಸ್ಸು, ವಿವೇಕ ಮತ್ತು ಸಂಯಮ ಕಳೆದುಕೊಳ್ಳದೆ ಚಳವಳಿಯನ್ನು ದೀರ್ಘಕಾಲ ಮುನ್ನಡೆಸಿದ ರೈತರು ಹಾಗೂ ರೈತ ಸಂಘಟನೆಗಳ ಕಾರ್ಯಕರ್ತರಿಗೆ ಸಲ್ಲಬೇಕು. ರೈತರಿಂದ ಬಲವಂತವಾಗಿ ಭೂಮಿ ಪಡೆಯದಿರುವ ಸರ್ಕಾರದ ನಡೆಯೂ ಮೆಚ್ಚುವಂತಹದ್ದು.

**ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯ ರೈತರು ನಡೆಸಿದ 1,198 ದಿನಗಳ ಹೋರಾಟಕ್ಕೆ ಸರ್ಕಾರ ವಿಳಂಬವಾಗಿಯಾದರೂ ಸ್ಪಂದಿಸಿದ್ದು, ಭೂಸ್ವಾಧೀನಕ್ಕೆ ಹೊರಡಿಸಿದ್ದ ಅಧಿಸೂಚನೆಯನ್ನು ಹಿಂಪಡೆದಿದೆ.ರಕ್ಷಣಾ ಮತ್ತು ವೈಮಾಂತರಿಕ್ಷ ಪಾರ್ಕ್ ಸ್ಥಾಪನೆಗಾಗಿ 13 ಗ್ರಾಮಗಳ ವ್ಯಾಪ್ತಿಯಲ್ಲಿ 1,777 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು, 2021ರಲ್ಲಿ ಅಂದಿನ ಬಿಜೆಪಿ ಸರ್ಕಾರ ಪ್ರಾಥಮಿಕ ಅಧಿಸೂಚನೆ ಹೊರಡಿಸಿತ್ತು**



ಭೂಸ್ವಾಧೀನದ ಅಧಿಸೂಚನೆ ಹೊರಬಿದ್ದ ಆರಂಭದಲ್ಲೇ ಚಳವಳಿನಿರತ ರೈತರನ್ನು ಭೇಟಿ ಮಾಡಿದ್ದ ಸಿದ್ದರಾಮಯ್ಯ, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ರೈತರ ಹಿತಾಸಕ್ತಿಯನ್ನು ರಕ್ಷಿಸುವುದಾಗಿ ಭರವಸೆ ನೀಡಿದ್ದರು. ಹಾಗಾಗಿ, ಭೂಸ್ವಾಧೀನದ ಅಧಿಸೂಚನೆಯನ್ನು ಹಿಂಪಡೆಯುವುದು ಅವರಿಗೆ ಕೊಟ್ಟ ಮಾತು ಉಳಿಸಿಕೊಳ್ಳುವ ಅನಿವಾರ್ಯ ದಾರಿಯೂ ಆಗಿತ್ತು.

ಕರ್ನಾಟಕಕ್ಕೆ ಬಂದಿರುವ ಯೋಜನೆ ಬೇರೆ ರಾಜ್ಯದ ಪಾಲಾಗಬಹುದು ಎನ್ನುವ ಆತಂಕದ ನಡುವೆಯೂ, ರೈತರ ಹಿತಾಸಕ್ತಿ ಕಾಪಾಡುವ ಇಚ್ಛಾಶಕ್ತಿಯನ್ನು ಸರ್ಕಾರ ಹಾಗೂ ಮುಖ್ಯಮಂತ್ರಿ ಪ್ರದರ್ಶಿಸಿದ್ದಾರೆ.

ಭೂಸ್ವಾಧೀನದ ಅಧಿಸೂಚನೆಯನ್ನು ಕೈಬಿಟ್ಟಿರುವ ಸರ್ಕಾರದ ನಿರ್ಧಾರಕ್ಕೆ ರೈತರು ಸಂತಸ ವ್ಯಕ್ತಪಡಿಸಿದ್ದಾರೆ. ಹೋರಾಟಕ್ಕೆ ಯಶಸ್ಸು ದೊರೆತಾಗ ಸಂಭ್ರಮಿಸುವುದು ಸಹಜ. ಆದರೆ, ರೈತರು ಸಾಗಬೇಕಾಗಿರುವ ದಾರಿ ಹಾಗೂ ಎದುರಿಸಬೇಕಾದ ಸವಾಲು ದೀರ್ಘವಾದುದು. ಭೂಸ್ವಾಧೀನದ ಅಧಿಸೂಚನೆ ಕೈಬಿಟ್ಟಿದ್ದರೂ, ಸ್ವಯಂ ಪ್ರೇರಣೆಯಿಂದ ಜಮೀನು ನೀಡುವ ರೈತರ ಭೂಮಿಯನ್ನು ಪಡೆಯುವುದಾಗಿ ಹಾಗೂ ಆ ಜಮೀನಿಗೆ ಮಾರ್ಗಸೂಚಿ ದರಕ್ಕಿಂತ ಹೆಚ್ಚಿನ ಪರಿಹಾರ ನೀಡುವುದಾಗಿ ಸರ್ಕಾರ ಹೇಳಿದೆ. ಈ ನಿರ್ಧಾರ, ಭೂಮಿಯನ್ನು ಮಾರುವ ಇಲ್ಲವೇ ಮಾರದಿರುವ ಸ್ವಾತಂತ್ರ್ಯವನ್ನು ರೈತರಿಗೆ ಉಳಿಸಿರುವಂತೆ ಮೇಲ್ನೋಟಕ್ಕೆ ಕಾಣಿಸುತ್ತದೆ.ಆದರೆ, ಭೂಮಿಯನ್ನು ಮಾರುವ ಅವಕಾಶ ಮುಕ್ತವಾಗಿರುವುದು ರೈತರಲ್ಲಿ ಗೊಂದಲ ಮೂಡಿಸಬಹುದು ಹಾಗೂ ಕೃಷಿಯ ಬಗ್ಗೆ ಭರವಸೆಗಳನ್ನು ಕಳೆದುಕೊಂಡವರು ತಮ್ಮ ಭೂಮಿ ಬಿಟ್ಟುಕೊಡಲು ಒತ್ತಾಸೆಯಾಗಿ ಪರಿಣಮಿಸಬಹುದು.

ಕೃಷಿ ಭೂಮಿಯನ್ನು ಉಳಿಸಿಕೊಳ್ಳಲು ಅನುಕೂಲ ಕಲ್ಪಿಸಬೇಕಾದ ಸರ್ಕಾರವೇ, ಮಾರಾಟದ ಸಾಧ್ಯತೆಗಳನ್ನು ರೈತರ ಮುಂದಿಡುವ ವಿರೋಧಾಭಾಸ ಸುಲಭ ವ್ಯಾಖ್ಯಾನಕ್ಕೆ ನಿಲುಕುವಂತಹದ್ದಲ್ಲ. ಆರಂಭದಲ್ಲಿ ಕೆಲವಷ್ಟೇ ರೈತರು ಭೂಮಿಯನ್ನು ಬಿಟ್ಟುಕೊಟ್ಟರೂ, ಆ ಮಾದರಿ ದೀರ್ಘಾವಧಿಯಲ್ಲಿ ಉಳಿದ ರೈತರಿಗೂ ತಮ್ಮ ಭೂಮಿಯನ್ನು ಮಾರುವ ಸ್ವಯಂ ಒತ್ತಡ ಸೃಷ್ಟಿಸಬಹುದು. ಕೃಷಿ ಭೂಮಿಯನ್ನು ಉಳಿಸಿಕೊಳ್ಳುವ ಹಾಗೂ ಕೃಷಿಯಲ್ಲಿ ಮುಂದುವರಿಯುವ ಅಗ್ನಿದಿವ್ಯವನ್ನು ಹಾಯುವ ಅವಕಾಶ ಈಗ ರೈತರೆದುರು ಇದೆ. ರೈತರ ಹೋರಾಟಕ್ಕೆ ಜಯ ಸಂದಿದೆಯೆಂದು ಸದ್ಯಕ್ಕೆ ಭಾವಿಸಬಹುದಾದರೂ, ಆ ಯಶಸ್ಸಿನ ಫಲಿತ ಯಾವ ರೂಪದ್ದು ಹಾಗೂ ಎಷ್ಟು ಅವಧಿಯದ್ದು ಎನ್ನುವುದನ್ನು ತೀರ್ಮಾನಿಸುವ ಅವಕಾಶವನ್ನು ಸರ್ಕಾರ ರೈತರಿಗೇ ಬಿಟ್ಟುಕೊಟ್ಟಿದೆ.

# ರಾಮಾಯಣ



## ಭರತನು ಶ್ರೀ ರಾಮನನ್ನು ಅಯೋಧ್ಯಾ ಪಟ್ಟಣಕ್ಕೆ ಕರೆದದ್ದು

• ಹಿಂದಿನ ಸಂಚಿಕೆಯಿಂದ

## 101ನೆಯ ಅಧ್ಯಾಯ

ಮಿಥ್ಯಾದೋಷದಿಂದ ಕೆಡ್ಡಿಸುವವನನ್ನಾದರೂ, ಹೆಚ್ಚಾಗಿ ಐಶ್ವರವನ್ನು ಬಯಸುವ ಶೂರನನ್ನಾದರೂ ದೇಶದಿಂದ ಹೊರಡಿಸದಿರುವ ಅರಸನು ಕೆಡುವನು. ವಂಶಪರಂಪರೆಯಿಂದ ಸಂಮಾನಿಸಲ್ಪಟ್ಟಿರುವ ವೃದ್ಧ ಬ್ರಾಹ್ಮಣರನ್ನು ಚೆನ್ನಾಗಿ ಕಾಪಾಡಿಕೊಂಡಿದ್ದೀಯೊ ಬಲ್ಲವರೆಂದು ಆಹಂಕರಿಸಿಕೊಂಡಿರುವವರು ಧರ್ಮಶಾಸ್ತ್ರ ವಿಚಾರವು ಬಂದಾಗ ಶಾಸ್ತ್ರಾನುಸಾರವಾಗಿ ನುಡಿಯದಿದ್ದರೆ ಅವರಿಂದ ಪ್ರಯೋಜನವಿಲ್ಲವೆಂದು ಅವರನ್ನು ಉಪೇಕ್ಷೆಮಾಡುತ್ತಿದ್ದೀಯೋ ಮಹಾ ಪರಾಕ್ರಮಿಗಳಾದ ನಮ್ಮ ಪೂರ್ವದ ಅರಸರಿಂದ ಪರಿಪಾಲಿಸಲ್ಪಟ್ಟು ಶತ್ರುಗಳಿಗೆ ಅಭೇದ್ಯವಾದ ಕಾರಣದಿಂದ ಅಯೋಧ್ಯೆ ಎಂಬ ಯಥಾರ್ಥನಾಮವುಳ್ಳ ನಮ್ಮ ರಾಜಧಾನಿಯನ್ನು ಭದ್ರವಾಗಿ ರಕ್ಷಿಸಿಕೊಂಡಿದ್ದೀಯೊ ನಿನ್ನ ರಾಜ್ಯದಲ್ಲಿ ಕೃಷಿಮಾಡುವವರು, ಗೊಲ್ಲರು ಮೊದಲಾದ ಸಮಸ್ತರೂ ಲೋಕಾಭಿರಾಮವಾದ ವಾರ್ತೆಗಳನ್ನು ಕೇಳಿಕೊಂಡು ಸುಖವಾಗಿದ್ದಾರೆಯೊ ಅವರಿಗೆ ಯಾವ ಉಪದ್ರವವೂ ಬರದಹಾಗೆ ರಕ್ಷಿಸಿಕೊಂಡಿದ್ದೀಯೊ ಅರಸನು ತನ್ನ ರಾಜ್ಯದಲ್ಲಿರುವ ಪ್ರಜೆಗಳನ್ನು ತನ್ನ ಮಕ್ಕಳನ್ನು ಕಾಣುವಹಾಗೆ ಕಂಡುಕೊಂಡಿರಬೇಕೆಂಬ ಧರ್ಮಶಾಸ್ತ್ರವನ್ನರಿತು ಆ ಪ್ರಕಾರದಲ್ಲಿ ಪ್ರಜೆಗಳನ್ನು, ಚೆನ್ನಾಗಿ ರಕ್ಷಿಸಿಕೊಂಡಿದ್ದೀಯೊ ಕೇರಿಯನ್ನು ಗುಡಿಸುವ ಸೇವಕರು ಪ್ರಾತಃಕಾಲದಲ್ಲಿ ತಮ್ಮ ಕೃತ್ಯವನ್ನು ಮಾಡುತ್ತಿದ್ದಾರೆಯೇ ಅಪಾತ್ರದಲ್ಲಿ ತ್ಯಾಗವನ್ನು ಮಾಡುವುದಿಲ್ಲವಲ್ಲವೆ ನೀನು ಸಂಪಾದಿಸಿದ ಭಂಡಾರವು ದೇವತಾರ್ಥವಾಗಿಯೂ ಬ್ರಾಹ್ಮಣನಿಮಿತ್ತವಾಗಿಯೂ ಅತಿಥಿಗಳ ನಿಮಿತ್ತವಾಗಿಯೂ ಪಟುಭಟರ ನಿಮಿತ್ತವಾಗಿಯೂ ನಿನ್ನ ಮಿತ್ರಜನರ ನಿಮಿತ್ತವಾಗಿಯೂ ವೆಚ್ಚವಾಗುತ್ತಿದೆಯೆ ಎಂದು ಅನೇಕ ರಾಜನೀತಿಗಳನ್ನೂ ಧರ್ಮಬುದ್ಧಿಯನ್ನೂ ಉಪದೇಶ ಮಾಡಿದನು.

**ಭರತನು ಶ್ರೀ ರಾಮನನ್ನು ಅಯೋಧ್ಯಾ ಪಟ್ಟಣಕ್ಕೆ ಕರೆದದ್ದು**

ಆಮೇಲೆ ಭರತನು ಅಣ್ಣ, ಧರ್ಮಮಾರ್ಗವನ್ನು ಬಿಟ್ಟು ನನಗೆ ರಾಜಧರ್ಮದಿಂದ ಕಾರ್ಯವೇನು ನಮ್ಮ ವಂಶದಲ್ಲಿ ಯಾವಾಗಲೂ ಧರ್ಮಮಾರ್ಗದ ನಡತೆಯೇ ಸ್ಥಿರವಾಗಿರುವುದು. ಜೇಷ್ಠಪುತ್ರನಿದ್ದರೆ ತಮ್ಮನಿಗೆ ರಾಜ್ಯಾಧಿಪತ್ಯವು ಸಲ್ಲದು. ಆದಕಾರಣ ನೀನು ಸಮಸ್ತ ಐಶ್ವರ್ಯವುಳ್ಳ ಅಯೋಧ್ಯಾಪಟ್ಟಣಕ್ಕೆ ಬಂದು ಪಟ್ಟಾಭಿಷೇಕವನ್ನು ಮಾಡಿಕೊಂಡು ನಮ್ಮ ಕುಲಧರ್ಮವನ್ನು ನಡೆಯಿಸು, ಲೋಕದಲ್ಲಿ ಅರಸನನ್ನು ಮನುಷ್ಯನೆಂದು ಹೇಳುತ್ತಾರೆ ದೇವನೆಂದು ನನ್ನ ಅಭಿಪ್ರಾಯ.

ಏಕೆಂದರೆ, ಧರ್ಮ ಅರ್ಥಗಳಿಂದ ಕೂಡಿದ ಅವನ ನಡೆವಳಿಕೆಯನ್ನು ಹಿರಿಯರು ಅಮಾನುಷವೆಂದೇ ಹೇಳುವರಲ್ಲವೆ ನಾನು ಕೇಕಯ ದೇಶದಲ್ಲಿರಲಾಗಿ ಸೀತಾಲಕ್ಷ್ಮಣಸಮೇತನಾಗಿ ನೀನು ವನಕ್ಕೆ ಬಂದಮೇಲೆ ಪೂಜ್ಯನಾದ ಮಹಾರಾಜನು ನಿನ್ನ ವಿಯೋಗದುಃಖದಿಂದಲೇ ಹಂಬಲಿಸಿ ಸ್ವರ್ಗಸ್ಥನಾದನು. ನೀನು ದಶರಥರಾಯನಿಗೆ ಉತ್ತರಕ್ರಿಯೆಗಳನ್ನು ಮಾಡು. ನಾನೂ ಶತ್ರುಘ್ನನೂ ದಶರಥರಾಯನಿಗೆ ಉತ್ತರಕ್ರಿಯೆಗಳನ್ನು ಮಾಡಿದೆವು. ಹಾಗಾದರೂ ಲೋಕದಲ್ಲಿ ಪ್ರಿಯಪುತ್ರ ನಾದವನು ತಂದೆಗೆ ಉತ್ತರಕ್ರಿಯೆಗಳನ್ನು ಮಾಡದಿದ್ದರೆ ತೃಪ್ತಿಯಾಗದೆಂದು ಬಲ್ಲವರು ಹೇಳುತ್ತಾರೆ

ಮುಂದುವರಿಯುವುದು...

# ನೆಕ್ಸಸ್ ಮಾಲ್‌ನಲ್ಲಿ 100ನೇ ಮಳಿಗೆ ಉದ್ಘಾಟಿಸಿದ ಬಾಲಿವುಡ್ ನಟಿ ನುಸ್ರತ್ ಭರುಚಾ

• ಉದಯವಾಹಿನಿ, ಬೆಂಗಳೂರು


ಭಾರತದ ಪ್ರಮುಖ ಫ್ಯಾಷನ್ ಮತ್ತು ಬೆಳ್ಳಿ ಆಭರಣ ಬ್ರಾಂಡ್ ಆಗಿರುವ ಕುಶಾಲ್ಸ್ ಫ್ಯಾಷನ್ ಜ್ಯುವೆಲರಿ ಭಾರತದಲ್ಲಿ 100 ಮಳಿಗೆಗಳನ್ನು ಹೊಂದುವ ಮೂಲಕ ಮಹತ್ತರ ಸಾಧನೆ ಮಾಡಿದೆ. ಸಂಸ್ಥೆಯ 100ನೇ ಮಳಿಗೆಯು ಬೆಂಗಳೂರಿನ ಕೋರಮಂಗಲದ ನೆಕ್ಸಸ್ ಮಾಲ್‌ನಲ್ಲಿ ಆರಂಭಗೊಂಡಿದ್ದು, ಈ ಮಳಿಗೆಯನ್ನು ಬಾಲಿವುಡ್ ನಟಿ ನುಸ್ರತ್ ಭರುಚಾ ಅವರು ಉದ್ಘಾಟಿಸಿದರು.

ಸುಮಾರು ಎರಡು ದಶಕದ ಪರಂಪರೆ ಹೊಂದಿರುವ ಕುಶಾಲ್ಸ್

**100ನೇ ಮಳಿಗೆ ಉದ್ಘಾಟನೆ**


**ಸಂದರ್ಭದಲ್ಲಿ ಮಾತನಾಡಿದ ಕುಶಾಲ್ಸ್ ಫ್ಯಾಷನ್ ಜ್ಯುವೆಲರಿಯ ಸಹ-ಸಂಸ್ಥಾಪಕ ಮನೀಶ್ ಗುಲೇಚ್ಛಾ ಅವರು, 100 ಮಳಿಗೆ ಉದ್ಘಾಟನೆಗೊಳ್ಳುತ್ತಿರುವ ಈ ಸಂದರ್ಭವು ನಮಗೆ ಬಹಳ ಹೆಮ್ಮೆಯ ಮತ್ತು ಭಾವನಾತ್ಮಕ ಕ್ಷಣವಾಗಿದೆ. 2006ರಲ್ಲಿ ಸಣ್ಣದಾಗಿ ಪ್ರಾರಂಭವಾದ ಈ ಸಂಸ್ಥೆ ಇವತ್ತು ಭಾರತದಾದ್ಯಂತ ಇರುವ ಆಧುನಿಕ ಭಾರತೀಯ ಮಹಿಳೆಯರ ಇಷ್ಟದ ಬ್ರಾಂಡ್ ಆಗಿ ಬೆಳೆದಿದೆ. ಈ ಸಾಧನೆಯು ನಮ್ಮ ಗ್ರಾಹಕರು ನಮ್ಮ ಮೇಲೆ ಇಟ್ಟಿರುವ ವಿಶ್ವಾಸ ಮತ್ತು ನಮ್ಮ ತಂಡದ ಶ್ರದ್ಧೆಯಿಂದ ಮಾತ್ರ ಸಾಧ್ಯವಾಗಿದೆ. ನಾವು ಅಂಗಡಿಯಲ್ಲಾಗಲಿ ಅಥವಾ ಆನ್‌ಲೈನ್ ನಲ್ಲಾಗಲಿ ಸೊಗಸಾದ ವಿನ್ಯಾಸಗಳುಳ್ಳ ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ನೀಡಲು ಬದ್ಧರಾಗಿದ್ದೇವೆ'' ಎಂದರು.**

ಫ್ಯಾಷನ್ ಜ್ಯುವೆಲರಿ ಈ ಆರ್ಥಿಕ ವರ್ಷದ ಅಂತ್ಯದ ವೇಳೆಗೆ 150 ಮಳಿಗೆಗಳನ್ನು ತೆರೆಯುವ ಗುರಿಯನ್ನು ಹೊಂದಿದೆ. ತನ್ನ ಉತ್ಪನ್ನಗಳನ್ನು ಹೆಚ್ಚು ಹೆಚ್ಚು ಜನರಿಗೆ ತಲುಪಿಸುವ ಉದ್ದೇಶದಿಂದ ಕಂಪನಿಯು ಹೊಸ ಸಂಗ್ರಹಗಳನ್ನು ಪರಿಚಯಿಸಲು ಯೋಜನೆ ರೂಪಿಸಿದೆ ಮತ್ತು ಪ್ಲೇಟಿಂಗ್ ತಂತ್ರಜ್ಞಾನದ ಮೂಲಕ ಉತ್ಪನ್ನದ ಗುಣಮಟ್ಟವನ್ನು ಹೆಚ್ಚಿಸುವ ಕ್ರಮ ಕೈಗೊಂಡಿದೆ. ವಿಶೇಷವಾಗಿ ತನ್ನ ಹೊಸ ಎಲಿವೇಟೆಡ್ ಎವೆರಿಡೇ ಶ್ರೇಣಿಯನ್ನು ಮತ್ತಷ್ಟು ವಿಸ್ತಾರಗೊಳಿಸಲು ಯೋಜಿಸಿದೆ. ದೀರ್ಘ ಪ್ರಯಾಣದಲ್ಲಿ ದೊಡ್ಡದಾಗಿ ಉಪಸ್ಥಿತಿ ವಿಸ್ತರಿಸಿಕೊಳ್ಳಲು ಆಲೋಚಿಸಿರುವ ಕುಶಾಲ್ಸ್ ಫ್ಯಾಷನ್ ಜ್ಯುವೆಲರಿ ಸಂಸ್ಥೆಯು ಮುಂದಿನ ಮೂರು ವರ್ಷಗಳಲ್ಲಿ ದೇಶಾದ್ಯಂತ 300 ಮಳಿಗೆಗಳನ್ನು ತಲುಪುವ ಗುರಿಯನ್ನು ಇಟ್ಟುಕೊಂಡಿದೆ. ದೇಶದ ಪ್ರತಿಯೊಂದು ಮೂಲೆಗೂ ಕೈಗೆಟುಕುವ ದರದ ಮತ್ತು ವಿಶಿಷ್ಟ ಫ್ಯಾಷನ್‌ನ ಆಭರಣಗಳನ್ನು ತಲುಪಿಸುವ ಉದ್ದೇಶ ಹೊಂದಿದೆ.



ನಟಿ ನುಸ್ರತ್ ಭರುಚಾ ಅವರು, ಕುಶಾಲ್ಸ್ ಫ್ಯಾಷನ್ ಜ್ಯುವೆಲರಿಯಲ್ಲಿ ಸಂಭ್ರಮಾಚರಣೆ ಮತ್ತು ದೈನಂದಿನ ಬಳಕೆ ಎಲ್ಲಕ್ಕೂ ಸೂಕ್ತವಾಗುವ ಆಭರಣಗಳಿವೆ. 100ನೇ ಮಳಿಗೆ ಉದ್ಘಾಟನೆಯ ಈ ಸಂದರ್ಭದಲ್ಲಿ ಈ ಸಂಸ್ಥೆಯ ಜೊತೆ ಇರುವುದು ನನಗೆ ಸಂದೃತಸ ತಂದಿದೆ ಎಂದರು.

2006ರಲ್ಲಿ ಆರಂಭಗೊಂಡ ಕುಶಾಲ್ಸ್ ಫ್ಯಾಷನ್ ಜ್ಯುವೆಲರಿ 38 ನಗರಗಳಲ್ಲಿ 100 ಮಳಿಗೆಗಳನ್ನು ಹೊಂದಿದ್ದು, ದೇಶಾದ್ಯಂತ ಅತ್ಯುತ್ತಮ ಉಪಸ್ಥಿತಿಯನ್ನು ಹೊಂದಿದೆ. ಈ ಸಂಸ್ಥೆಯು ಸೊಗಸಾಗಿ, ಎಚ್ಚರಿಕೆಯಿಂದ ರೂಪಿಸಲಾದ 10,000ಕ್ಕೂ ಹೆಚ್ಚು ವಿನ್ಯಾಸಗಳನ್ನು ಒಳಗೊಂಡಿದ್ದು, ಇದರಲ್ಲಿ ಆಂಟಿಕ್, ಕುಂದನ್, ಜಿರ್ಕಾನ್, ಟೆಂಪಲ್ ಜ್ಯುವೆಲ್ಲರಿ ಮತ್ತು 92.5 ಬಿಐಎಸ್- ಹಾಲ್‌ಮಾರ್ಕ್ ಮಾಡಲಾದ ಸ್ಟರ್ಲಿಂಗ್ ಬೆಳ್ಳಿಯ ಆಭರಣಗಳು ಸೇರಿವೆ. ಈ ಉತ್ಪನ್ನಗಳು ಉತ್ತಮ ಮತ್ತು ಪ್ರೀಮಿಯಂ ಗುಣಮಟ್ಟಕ್ಕೆ ಹೆಸರುವಾಸಿಯಾಗಿವೆ. ಈ ಶ್ರೇಣಿಯಲ್ಲಿ ನೆಕ್ಲೇಸ್‌ಗಳು, ಕಿವಿಯೋಲೆಗಳು, ಚೋಕರ್‌ಗಳು, ಉಂಗುರಗಳು ಕಂಕಣಗಳು ಬ್ರೋಚ್‌ಗಳು ಸೇರಿದಂತೆ ವಿವಿಧ ವಿಭಾಗಗಳ ಆಭರಣಗಳು ಸೇರಿವೆ. ಸಂಭ್ರಮಾಚರಣೆ, ವಿವಾಹ, ಕಚೇರಿ ಬಳಕೆ ಮತ್ತು ದೈನಂದಿನ ಬಳಕೆ ಹೀಗೆ ಎಲ್ಲಾ ಸಂದರ್ಭದಲ್ಲಿ ಬಳಸಬಲ್ಲ ಉತ್ಪನ್ನಗಳು ಇಲ್ಲಿ ಲಭ್ಯವಿದೆ.




# ಸೈಬರ್ ಅಪರಾಧ ತಡೆಗೆ ಹೊಸ ತಂತ್ರಜ್ಞಾನ

• ಉದಯವಾಹಿನಿ, ಬೆಂಗಳೂರು

ಪೊಲೀಸ್ ಅಧಿಕಾರಿ ರೂಮ್ ಅಥವಾ ಠಾಣೆಯಲ್ಲಿ ಕೂತು ಕೆಲಸ ಮಾಡಿದರೆ ಸಾಲದು. ಜನ ಸಾಮಾನ್ಯರ ಜೊತೆ ಬೆರೆಯಬೇಕು, ಜನಸ್ನೇಹಿ ಕೆಲಸಗಳನ್ನು ಮಾಡಿದಾಗ ಮಾತ್ರ ನಮ್ಮ ಕೆಲಸಕ್ಕೆ ಮಾನ್ಯತೆ ದೊರೆಯಲಿದೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಹೇಳಿದರು. ಪ್ರೆಸ್ ಕ್ಲಬ್‌ನಲ್ಲಿ ಏರ್ಪಡಿಸಿದ್ದ ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಅವರು, ಸೈಬರ್ ಅಪರಾಧ ತಡೆಯಲು ಹೊಸ ತಂತ್ರಜ್ಞಾನಗಳನ್ನು ಹಂತ ಹಂತವಾಗಿ ಅಳವಡಿಸಿಕೊಳ್ಳುವುದರ ಜತೆಗೆ ಸುಳ್ಳು ಸುದ್ದಿ ಹಬ್ಬಿಸುವ ಜಾಲತಾಣಗಳ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ. ನಗರದಲ್ಲಿ ಜನಸಾಮಾನ್ಯರ ಮಾನಹಾನಿ, ಆಸ್ತಿ ಪಾಸ್ತಿಗಳ ರಕ್ಷಣೆ ಮಾಡಲು ಉತ್ತಮ ತಂತ್ರಜ್ಞಾನ ಸೇರಿದಂತೆ 6 ಲಕ್ಷ ಸಿ.ಸಿ.ಟಿ.ವಿ. ಕ್ಯಾಮೆರಾಗಳಿಗೆ ಜಿಯೋಟ್ಯಾಗ್ ಅಳವಡಿಸಲಾಗಿದೆ' ಎಂದು ಮಾಹಿತಿ ನೀಡಿದರು. ಸಾಮಾಜಿಕ ಜಾಲತಾಣ, ಸೈಬರ್ ಅಪರಾಧಕ್ಕೆ ನೇರ ಸಂಪರ್ಕವಿದೆ. ಸಂಚಾರ ಸಮಸ್ಯೆಗೆ ಈಗಾಗಲೇ ಬಿಬಿಎಂಪಿ ಆಯುಕ್ತರು ಸೇರಿ ಅನೇಕ ಅಧಿಕಾರಿಗಳ ಜತೆ ಚರ್ಚಿಸಿದ್ದು, ಮುಂದಿನ ದಿನಗಳಲ್ಲಿ ಪರಿಹಾರಗಳನ್ನು ಕಂಡುಕೊಳ್ಳಲಾಗುವುದು. ಬೆಂಗಳೂರು ದಿನೇ ದಿನೇ ಬೆಳೆಯುತ್ತಿದ್ದು, ಪೊಲೀಸ್ ಠಾಣೆಗಳ ಸಂಖ್ಯೆ ಕೂಡ ಹೆಚ್ಚಾಗುತ್ತಿದೆ. ಒತ್ತಡದಿಂದಾಗಿ ಪೊಲೀಸ್ ಅಧಿಕಾರಿಗಳು ಕೆಲವು ಪ್ರಮುಖ ಪ್ರಕರಣಗಳಿಗೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಸೂಕ್ತ ಸಾಕ್ಷ್ಯಾಧಾರ, ದಾಖಲೆ ಸಂಗ್ರಹಿಸಿ ನ್ಯಾಯಾಲಯಕ್ಕೆ ಒಪ್ಪಿಸುವಲ್ಲಿ ವಿಫಲರಾಗುತ್ತಿದ್ದಾರೆ. ಸಮಾಜದಲ್ಲಿ ಶಾಂತಿ ಸೌಹಾರ್ದ ಕಾಪಾಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಮಹಿಳೆಯರು ಮತ್ತು ಮಕ್ಕಳ ರಕ್ಷಣೆ ಮಾಡಬೇಕು ಎಂದು ತಿಳಿಸಿದರು. ಫೀಲಿ ಮಾಡುವವರ ಮೇಲೆ ನಿಗಾವಹಿಸಿದ್ದು. ಸ್ಟೀಲಿಗಾಗಿ ದ್ವಿಚಕ್ರ ವಾಹನಗಳನ್ನು ವಿನ್ಯಾಸಗೊಳಿಸುವ ಗ್ಯಾರೇಜ್‌ಗಳ ಮಾಲೀಕರಿಗೆ ಎಚ್ಚರಿಕೆ ನೀಡಲಾಗಿದೆ. ರೌಡಿಸಂ ನಿಯಂತ್ರಣದಲ್ಲಿ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಪ್ರೆಸ್ ಕ್ಲಬ್ ಅಧ್ಯಕ್ಷ ಶ್ರೀಧರ್, ಕಾರ್ಯದರ್ಶಿ ಶಿವಕುಮಾರ ಬೆಳ್ಳಿತಟ್ಟೆ ಇದ್ದರು.



**ಐಪಿಎಸ್ ಅಧಿಕಾರಿಗಳಿಗೆ ರಾಜ್ಯ ಅಚ್ಚುಮೆಚ್ಚು:** ರಾಜ್ಯಕ್ಕೆ ಐಪಿಎಸ್ ಐಎಎಸ್ ಅಥವಾ ಕೇಂದ್ರ ಸರ್ಕಾರದಿಂದ ಆಯ್ಕೆಯಾಗಿ ಬರುವ ಯಾವುದೇ ಅಧಿಕಾರಿಗಳಿಗೆ ಮೊದಲು ಆಯಾ ರಾಜ್ಯಗಳ ಭಾಷೆ ಸಂಸ್ಕೃತಿಯ ಬಗ್ಗೆ ಗೌರವ ಇರಬೇಕು. ನನ್ನ ಜೊತೆ ಬಂದ ಅಧಿಕಾರಿಗಳು ನಿವೃತ್ತಿ ಹೊಂದಿದ್ದಾರೆ.

ಆದರೆ ಅವರು ಯಾರೂ ಕರ್ನಾಟಕವನ್ನು ಬಿಟ್ಟು ಹೋಗಿಲ್ಲ. ನನ್ನ ಮಗಳು 10ನೇ ತರಗತಿಯಲ್ಲಿ ಕನ್ನಡ ವಿಷಯದಲ್ಲಿ ಶೇಕಡ 99 ಅಂಕ ಪಡೆದಿದ್ದಾಳೆ' ಎಂದು ಕನ್ನಡ ಭಾಷೆಯ ಬಗ್ಗೆ ಸೀಮಂತ್ ಕುಮಾರ್ ಅವರು ಹೆಮ್ಮೆ ವ್ಯಕ್ತಪಡಿಸಿದರು.

# ಶ್ರೀಮದ್ ಜಯತೀರ್ಥರ ಆರಾಧನಾ ಮಹೋತ್ಸವ



• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀಮದ್ ಜಯತೀರ್ಥರ ಆರಾಧನಾ ಮಹೋತ್ಸವದ ಅಂಗವಾಗಿ ವಿಶೇಷ ಪಲ್ಲಕ್ಕಿ ಉತ್ಸವ ಮತ್ತು ಸುಧಾ ಗ್ರಂಥಗಳ ಪಾರಾಯಣ, ಶ್ರೀ ಹರಿ ಭಜನೆ ವಿದ್ವಾನ್ ಶ್ರೀ ಸುಶೀಲೇಂದ್ರಾಚಾರ್ಯರಿಂದ ಪ್ರವಚನ ನೆರವೇರಿತು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು, ಈ ಪೂಜಾ-ಪ್ರವಚನ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಭಾಗವಹಿಸಿ ಮಹಾಮಂಗಳಾರತಿ ಪ್ರಸಾದ ಸ್ವೀಕರಿಸಿ ಶ್ರೀಮದ್ ಶ್ರೀ ಜಯತೀರ್ಥರ ಶ್ರೀಟೀಕಾಕೃತ್ಪಾದರ ಅನುಗ್ರಹಕ್ಕೆ ಪಾತ್ರರಾದರು.

# ಈ ಒಂದು ಫೇಸ್‌ಪ್ಯಾಕ್‌ನಲ್ಲಿದೆ ಕಾಂತಿ

ಮುಖದಲ್ಲಿನ ಕಲೆಗಳು ನಿವಾರಣೆಯಾಗಿ ಕಾಂತಿಯುತವಾಗಿರಬೇಕೆಂದರೆ ಆಯುರ್ವೇದ ಡಾಕ್ಟರ್ ರಾಬಿನ್ ಒಂದು ಸಿಂಪಲ್ ಆಗಿರುವ ಫೇಸ್ ಪ್ಯಾಕ್‌ನ್ನು ತಿಳಿಸಿದ್ದಾರೆ. ನೀವೂ ಇದನ್ನು ಟ್ರೈ ಮಾಡಿ ನೋಡಿ. ಪ್ರತಿಯೊಬ್ಬರಿಗೂ ಮುಖ ಸುಂದರವಾಗಿರಬೇಕು, ಕಲೆರಹಿತವಾಗಿ, ಕಾಂತಿಯುವಾಗಿರಬೇಕು ಎನ್ನುವ ಬಯಕೆ ಇದ್ದೇ ಇರುತ್ತದೆ. ಅದಕ್ಕಾಗಿ ನಾನಾ ರೀತಿಯ ದುಬಾರಿ ಕ್ರೀಮ್‌ಗಳನ್ನೂ ಹಚ್ಚುತ್ತಾರೆ, ಫೇಸ್‌ಪ್ಯಾಕ್ ಬಳಸುತ್ತಾರೆ, ಬ್ಯೂಟಿ ಪಾರ್ಲರ್‌ಗೆ ಹೋಗುತ್ತಾರೆ. ಆದರೆ ನೀವು ಎಷ್ಟೇ ದುಬಾರಿ ಕ್ರೀಮ್ ಬಳಸಿದರೂ ಬಾರದ ಕಾಂತಿ ಒಂದು ಫೇಸ್‌ಪ್ಯಾಕ್ ಹಚ್ಚಿದ್ರೆ, ಸಾಕು ಬರುತ್ತೆ ಅಂತಾರೆ ಆಯುರ್ವೇದ ವೈದ್ಯ ರಾಬಿನ್ ಶರ್ಮಾ. ಈ ಬಗ್ಗೆ ತಮ್ಮ ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್‌ನ್ನು ಹಾಕಿದ್ದಾರೆ.

**ಫೇಸ್‌ಪ್ಯಾಕ್ ತಯಾರಿಸಲು ಯಾವೆಲ್ಲಾ ಸಾಮಾಗ್ರಿ ಅಗತ್ಯವಿದೆ?**

- ಒಂದು ಮಣ್ಣಿನ ಪಾತ್ರೆ
- ಒಂದು ಹಿಡಿ ಅಕ್ಕಿ
- ಒಂದು ಚಮಚ ಬೇಳೆ
- 5 ರಿಂದ 6 ಬಾದಾಮಿ

**ಮುಖದ ಕಲೆ ನಿವಾರಿಸಲು ಫೇಸ್‌ಪ್ಯಾಕ್:** ಡಾ. ರಾಬಿನ್ ಶರ್ಮಾ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಫೇಸ್‌ಪ್ಯಾಕ್ ವಿಡಿಯೋವೊಂದನ್ನು ಹಂಚಿಕೊಂಡಿದ್ದು, ಇದು ಮುಖದ ಮೇಲಿನ ಅನೇಕ



**ಯಾವೆಲ್ಲಾ ಸಮಸ್ಯೆಗಳನ್ನು ನಿವಾರಿಸುತ್ತದೆ?**

- ಮೊಡವೆ ಕಡಿಮೆಯಾಗುತ್ತದೆ
- ಮುಖದ ಕಲೆಗಳು ಕಡಿಮೆಯಾಗುತ್ತವೆ
- ಅಸಮ ಚರ್ಮದ ಟೋನ್ ಸುಧಾರಿಸುತ್ತದೆ
- ಚರ್ಮದ ಸುಕ್ಕುಗಳನ್ನು ನಿವಾರಿಸುತ್ತದೆ.

ಸಾಮಾನ್ಯ ಸಮಸ್ಯೆಗಳನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ ಎಂದಿದ್ದಾರೆ.

ಈ ಆಯುರ್ವೇದ ಪಾಕವಿಧಾನವು ಯಾವುದೇ ಉತ್ತಮ, ದುಬಾರಿ ಚರ್ಮದ ಆರೈಕೆ ಉತ್ಪನ್ನಕ್ಕಿಂತ ಉತ್ತಮ ಫಲಿತಾಂಶಗಳನ್ನು ನೀಡುತ್ತದೆ. **ಫೇಸ್ ಪ್ಯಾಕ್ ತಯಾರಿಸುವುದು ಹೇಗೆ:** ಮೊದಲು ನೀವು ಮಣ್ಣಿನ ಪಾತ್ರೆಯನ್ನು ತೆಗೆದುಕೊಳ್ಳಬೇಕು. ಈ ಪಾತ್ರೆಯಲ್ಲಿ ಅಕ್ಕಿ, ಬೇಳೆ ಬಾದಾಮಿ ತೆಗೆದುಕೊಳ್ಳಿ. ಇವೆಲ್ಲವನ್ನೂ ರಾತ್ರಿಯಿಡೀ ನೀರಿನಲ್ಲಿ ಚೆನ್ನಾಗಿ ನೆನೆಸಿಡಿ. ಮರುದಿನ ಬಾದಾಮಿಯನ್ನು ಸಿಪ್ಪೆ ತೆಗೆದು, ಅಕ್ಕಿ, ಬೇಳೆಯ ಜೊತೆ ರುಬ್ಬಿ ದಪ್ಪ ಪೇಸ್ಟ್ ತಯಾರಿಸಿ. ಇದೀಗ ನಿಮ್ಮ ಫೇಸ್ ಪ್ಯಾಕ್ ಸಿದ್ಧವಾಗಿದೆ. **ಇದನ್ನು ಮುಖದ ಮೇಲೆ ಬಳಸುವುದು ಹೇಗೆ :** ಈ ಮನೆಯಲ್ಲಿ ತಯಾರಿಸಿದ ಫೇಸ್ ಪ್ಯಾಕ್ ಅನ್ನು ನಿಮ್ಮ ಮುಖದ ಮೇಲೆ ದಪ್ಪವಾಗಿ ಹಚ್ಚಿ. ಈ ಪೇಸ್ಟ್ ಸಂಪೂರ್ಣವಾಗಿ ಒಣಗುವ ಮೊದಲು, ನಿಮ್ಮ ಮುಖವನ್ನು ಶುದ್ಧ ನೀರಿನಿಂದ ತೊಳೆಯಿರಿ. ಇದು ಮುಖದ ಮೇಲೆ ಉತ್ತಮ ಫಲಿತಾಂಶಗಳನ್ನು ನೀಡುತ್ತದೆ.


**ನೀವು ಅದನ್ನು ಎಷ್ಟು ಸಮಯದವರೆಗೆ ಸಂಗ್ರಹಿಸಬಹುದು:** ನೀವು ಇದನ್ನು ತಯಾರಿಸುವಾಗ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಮಾಡಬಾರದು. ನೀವು ಈ ಪೇಸ್ಟ್ ಅನ್ನು 1 ಅಥವಾ 2 ದಿನಗಳವರೆಗೆ ಮಾತ್ರ ಸಂಗ್ರಹಿಸಬಹುದು. ನೀವು ಉತ್ತಮ ಮತ್ತು ತ್ವರಿತ ಫಲಿತಾಂಶಗಳನ್ನು ಪಡೆಯಲು ಬಯಸಿದರೆ, ಈ ಪೇಸ್ಟ್ ಅನ್ನು ಪ್ರತಿ ಬಾರಿಯೂ ತಾಜಾವಾಗಿ ತಯಾರಿಸಿ ಮುಖಕ್ಕೆ ಹಚ್ಚುವುದು ಉತ್ತಮ.

# ಪುರುಷರಿಗೆ ಆಗಾಗ ಸುಸ್ತು ಆಯಾಸ ಅಥವಾ ವೀಕ್ ನೆಸ್ ಆಗುವುದು ಯಾಕೆ?

ಕೆಲವೊಮ್ಮೆ ದೇಹದಲ್ಲಿ ಪೌಷ್ಟಿಕಾಂಶಗಳ ಕೊರತೆ ಕಾಣಿಸಿಕೊಂಡಾಗ ಅಥವಾ ದೇಹದಲ್ಲಿ ಎಲೆಕ್ಟ್ರೋಲೈಟ್ ಅಂಶಗಳು ಕಡಿಮೆ ಆದಾಗ ಮನುಷ್ಯನಿಗೆ ಇದ್ದಕ್ಕಿದಂತೆ ಸುಸ್ತು, ಆಯಾಸ, ನಿತ್ರಾಣ, ಕೆಲವೊಮ್ಮೆ ಅತಿಯಾದಮೈಕೈ ನೋವು, ಮಾಂಸಖಂಡಗಳ ಸೆಳೆತ ಈ ರೀತಿಯ ಎಲ್ಲಾ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಲು ಶುರುವಾಗುತ್ತದೆ ಅದರಲ್ಲೂ ಮಹಿಳೆಯರಿಗೆ ಹೋಲಿಸಿದರೆ ಪುರುಷರಲ್ಲಿ ಈ ಸಮಸ್ಯೆ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ಇದಕ್ಕೆ ಕಾರಣಗಳು ಹಲವಾರು ಇದ್ದರೂ ಕೂ ಕೆಲವೊಮ್ಮೆ ಅನಾರೋಗ್ಯಕಾರಿ ಜೀವನಶೈಲಿ ಮತ್ತು ವೈದ್ಯಕೀಯ ಅಂಶಗಳು ಶಕ್ತಿಯ ಕೊರತೆಗೆ ಕಾರಣವಾಗಬಹುದು. ಉದಾಹರಣೆಗೆ, ರಕ್ತಹೀನತೆ, ಟೆಸ್ಟೋಸ್ಟೆರಾನ್ ಮಟ್ಟಗಳಲ್ಲಿ ಏರುಪೇರು ಮತ್ತು ಅನಾರೋಗ್ಯಕಾರಿ ಆಹಾರಪದ್ಧತಿಯೂ ಕೂಡ ದೇಹದಲ್ಲಿದಲ್ಲಿ ವೀಕ್ ನೆಸ್ ಕಾಣಿಸಿಕೊಳ್ಳಲು ಕಾರಣವಾಗುತ್ತದೆ.

**ಆಯಾಸ ಸುಸ್ತು ಕಾಣಿಸಿಕೊಂಡಾಗ:** ಕೆಲವೊಮ್ಮೆ ಅತಿಯಾದ ಆಯಾಸ ಸುಸ್ತು ಕಾಣಿಸಿಕೊಂಡಾಗ, ರಾತ್ರಿ ವೇಳೆ ಸರಿಯಾಗಿ ನಿದ್ದೆ ಮಾಡಿದಾಗ ಸರಿಹೋಗುತ್ತದೆ ಆದರೆ ಕೆಲವೊಮ್ಮೆ ಚೆನ್ನಾಗಿ ನಿದ್ರೆ ಮಾಡಿದರೂ ಸುಸ್ತು ಮೈಕೈನೋವು ಆಯಾಸ ಬಳಲಿಕೆ ಮಾತ್ರ ಹಾಗೆ ಉಳಿದುಕೊಂಡಿರುವುದು! ಈ ರೀತಿಯಾಗಿ ದೈಹಿಕ ಶಕ್ತಿ ಕಡಿಮೆ ಆಗಲು ಪ್ರಮುಖ ಕಾರಣ ನಮ್ಮ ದೈನಂದಿನ ಆಹಾರಪದ್ಧತಿ ಹಾಗೂ ಜೀವನಶೈಲಿಯ ಜೊತೆಗೆ ಸರಿ ಯಾಗಿ ನಿದ್ದೆ ಮಾಡದೇ ಇರುವುದು, ವ್ಯಾಯಾಮ ಅಥವಾ ಜಡ ಜೀವನಶೈಲಿ ಅನುಸರಿಸಿಕೊಂಡು ಹೋಗುವವರಲ್ಲಿ ಈ ಸಮಸ್ಯೆ ಹೆಚ್ಚಾಗಿಯೇ ಕಾಣಿಸಿಕೊಳ್ಳುತ್ತದೆ ಎನ್ನುತ್ತಾರೆ ತಜ್ಞರು. ಇಂದಿನ ಲೇಖನದಲ್ಲಿ ಪುರುಷರಲ್ಲಿ ಯಾಕೆ ಸುಸ್ತು ಆಯಾಸ ನಿಶ್ಯಕ್ತಿ ಪದೇ ಪದೇ ಕಾಣಿಸಿಕೊಳ್ಳುತ್ತದೆ ಹಾಗೂ ತಮ್ಮ ದೈಹಿಕಶಕ್ತಿಯ ಮಟ್ಟವನ್ನು ಹೆಚ್ಚಿಸುವ ವಿಧಾನ ಹೇಗೆ ಎನ್ನುವುದರ ಬಗ್ಗೆ ನೋಡೋಣ........

**ಆಹಾರ ಪದ್ಧತಿ:** ಪ್ರೋಟೀನ್, ಆರೋಗ್ಯಕರ ಕಾರ್ಬೋಹೈಡ್ರೇಟ್‌ಗಳು, ಅಗತ್ಯವಾದ ಕ್ಯಾಲೋರಿಗಳು ಮತ್ತು ವಿಟಮಿನ್‌ಗಳಂತಹ ಅನೇಕ ಅಗತ್ಯ ಪೋಷಕಾಂಶಗಳ ಕೊರತೆಯು ದೇಹದಲ್ಲಿ ಆಯಾಸ ಅಥವಾ ಶಕ್ತಿಯ ಕೊರತೆಗೆ ಕಾರಣ ವಾಗಬಹುದು. ಹೀಗಾಗಿ ಈ ಸಮಸ್ಯೆ ಇರುವವರು ತಮ್ಮ ದೈನಂದಿನ ಆಹಾರಪದ್ಧತಿಯಲ್ಲಿ ಹಸಿರೆಲೆ ತರಕಾರಿಗಳು, ಧಾನ್ಯಗಳು ಮತ್ತು ಪ್ರೋಟೀನ್ ಭರಿತ ಆಹಾರವನ್ನು ಸೇವಿಸುವುದರಿಂದ ವ್ಯಕ್ತಿಯ ದೇಹದಲ್ಲಿ ಶಕ್ತಿಯ ಮಟ್ಟಗಳು ಹೆಚ್ಚಾಗಬಹುದು.



**ವ್ಯಾಯಾಮ ಮಾಡದಿದ್ದರೂ ಹೀಗಾಗುತ್ತದೆ!:** ಕೆಲವೊಮ್ಮೆ ಜಡಜೀವನಶೈಲಿ ಹಾಗೂ ಸರಿಯಾಗಿ ವ್ಯಾಯಾಮ ಮಾಡ ದಿದ್ದರೂ ಕೂಡ, ದೇಹದಲ್ಲಿ ಶಕ್ತಿಯ ಮಟ್ಟ ಕಡಿಮೆ ಆಗುವ ಸಾಧ್ಯತೆ ಇರುತ್ತದೆ. ವ್ಯಾಯಾಮವು ದೇಹದಲ್ಲಿ ಶಕ್ತಿಯ ಮಟ್ಟವನ್ನು ಹೆಚ್ಚಿಸುತ್ತದೆ ಎಂಬುದರಲ್ಲಿ ಸಂದೇಹವಿಲ್ಲ. ಆದರೆ ಸಮಯ ಮತ್ತು ವಯಸ್ಸಿನೊಂದಿಗೆ, ಅತಿಯಾದ ವ್ಯಾಯಾಮವು ಆಯಾಸಕ್ಕೂ ಕಾರಣವಾಗಬಹುದು. ಆದ್ದರಿಂದ, ವಯಸ್ಸಿಗೆ ಅನುಗುಣವಾಗಿ ಸಮತೋಲಿತ ರೀತಿಯಲ್ಲಿ ವ್ಯಾಯಾಮ ಮಾಡುವುದು ಮುಖ್ಯ.

**ಕಡಿಮೆ ಟೆಸ್ಟೋಸ್ಟೆರಾನ್ ಮಟ್ಟಗಳು :** ಟೆಸ್ಟೋಸ್ಟೆರಾನ್ ಒಂದು ಲೈಂಗಿಕ ಹಾರ್ಮೋನ್. ಇದು ಮಾನಸಿಕ ಮತ್ತು ದೈಹಿಕ ಶಕ್ತಿಯ ಮಟ್ಟವನ್ನು ಕಾಯ್ದುಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಪುರುಷರ ವಯಸ್ಸಾದಂತೆ, ಅವರ ದೇಹವು ನೈಸರ್ಗಿಕವಾಗಿ ಕಡಿಮೆ ಟೆಸ್ಟೋಸ್ಟೆರಾನ್ ಅನ್ನು ಉತ್ಪಾದಿಸುತ್ತದೆ. ಹೈಪೊಗೊನಾಡಿಸಮ್ ಎಂದೂ ಕರೆಯಲ್ಪಡುವ ಕಡಿಮೆ ಟೆಸ್ಟೋಸ್ಟೆರಾನ್ ಮಟ್ಟಗಳು ಕಡಿಮೆ ಶಕ್ತಿಯ ಮಟ್ಟಗಳು, ಆಯಾಸ, ಖಿನ್ನತೆಗೆ ಕಾರಣವಾಗಬಹುದು.

**ದೇಹದಲ್ಲಿ ನೀರಿನ ಅಂಶ ಕಡಿಮೆಯಾದರೆ :** ದೇಹದಲ್ಲಿ ನೀರಿನ ಅಂಶ ಕಡಿಮೆಯಾದರೆ ಶಕ್ತಿಯ ಮಟ್ಟ ಕಡಿಮೆ ಯಾಗುತ್ತದೆ. ಅತಿಯಾದ ಬೆವರುವಿಕೆ ಅಥವಾ ಕಡಿಮೆ ನೀರು ಕುಡಿಯು ವುದರಿಂದ ದೇಹವು ದುರ್ಬಲವಾಗಲು ಪ್ರಾರಂಭಿಸುತ್ತದೆ.

**ಮಾನಸಿಕ ಕಾರಣಗಳು:** ದೈಹಿಕ ಕಾರಣಗಳು ಮಾತ್ರವಲ್ಲ, ಮಾನಸಿಕ ಕಾರಣಗಳು ಸಹ ದೌರ್ಬಲ್ಯಕ್ಕೆ ಕಾರಣವಾಗುತ್ತವೆ. ಅತಿಯಾದ ಒತ್ತಡ ಮತ್ತು ಚಿಂತೆ ದೇಹದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಮತ್ತು ಒಬ್ಬ ವ್ಯಕ್ತಿಯು ದುರ್ಬಲನೆಂದು ಭಾವಿಸು ವಂತೆ ಮಾಡುತ್ತದೆ.



**ಈ ಸಮಸ್ಯೆಯಿಂದ ಹೊರಬರುವುದು ಹೇಗೆ :** ದೇಹವನ್ನು ಶಕ್ತಿಯುತವಾಗಿಡಲು, ನೀವು ಮೊದಲು ನಿಮ್ಮ ನೀರಿನ ಸೇವನೆಯನ್ನು ಹೆಚ್ಚಿಸಬೇಕು. ದೇಹದಲ್ಲಿ ಶಕ್ತಿಯನ್ನು ಕಾಪಾಡಿ ಕೊಳ್ಳಲು ನೀರು ಬಹಳ ಮುಖ್ಯ. ನಿಮ್ಮ ಆಹಾರದಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿ ರುವ ಹಣ್ಣುಗಳು, ಧಾನ್ಯಗಳು, ಮೊಟ್ಟೆ ಮತ್ತು ಕೋಳಿ ಮಾಂಸದಂತಹ ಪ್ರೋಟೀನ್ ಭರಿತ ಆಹಾರಗಳನ್ನು ಸಹ ಸೇರಿಸಿಕೊಳ್ಳಬೇಕು. ಹಸಿರು ತರಕಾರಿಗಳು, ಹಣ್ಣುಗಳು, ಒಣ ಹಣ್ಣುಗಳು ಮತ್ತು ಪ್ರೋಟೀನ್ ಭರಿತ ಆಹಾರವನ್ನು ಸೇವಿಸಿ. ದಿನವಿಡೀ ಕನಿಷ್ಠ 8-10 ಗ್ಲಾಸ್ ನೀರು ಕುಡಿಯಿರಿ. ಸಾಕಷ್ಟು ನಿದ್ರೆ ಪಡೆಯಿರಿ ಮತ್ತು ದೌರ್ಬಲ್ಯ ಮುಂದುವರಿದರೆ, ವೈದ್ಯರ ಬಳಿ ಪರೀಕ್ಷಿಸಿ. ಯೋಗ, ಲಘು ವ್ಯಾಯಾಮಗಳು ಸಹ ದೇಹವನ್ನು ಸದೃಢವಾಗಿ ರಿಸುತ್ತವೆ.

**ಹಕ್ಕು ನಿರಾಕರಣೆ:** ಈ ಲೇಖನವು ಕೇವಲ ಮಾಹಿತಿಗಾಗಿ ಮಾತ್ರ. ಇದು ಯಾವುದೇ ರೀತಿಯಲ್ಲೂ ಯಾವುದೇ ಔಷಧಿ ಅಥವಾ ಚಿಕಿತ್ಸೆಗೆ ಪರ್ಯಾಯವಲ್ಲ. ಇದರ ಸತ್ಯತೆ, ನಿಖರತೆ ಪರಿಣಾಮದ ಜವಾಬ್ದಾರಿಯನ್ನು ತೆಗೆದುಕೊಳ್ಳುವುದಿಲ್ಲ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ ಮತ್ತು ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ. ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು.

**ವೃಷಭ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ-ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ.

**ಮಿಥುನ** ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ.

**ಕರ್ಕಾಟಕ** ಹತ್ತಿರದ ಗೆಳೆಯರು ಹಾಗು ಸ್ನೇಹಿತರು ಆಕ್ರಮಣಕಾರಿಯಾಗುತ್ತಾರೆ ಪಡೆಯಲು ಮತ್ತು ನಿಮಗೆ ಜೀವನವನ್ನು ಕಠಿಣಗೊಳಿಸುತ್ತಾರೆ. ನೀವು ಇಂದು ಪ್ರೀತಿ ಮಾಲಿನ್ಯವನ್ನು ಹರಡುತ್ತೀರಿ.

**ಸಿಂಹ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ.

**ಕನ್ಯಾ** ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು, ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

**ತುಲಾ** ನಿಮ್ಮ ಅನುಮಾನದ ಪ್ರಕೃತಿ ನಿಮಗೆ ಸೋಲಿನ ಮುಖ ತೋರಿಸಬಹುದು. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ವೃಶ್ಚಿಕ** ಇಂದು ನಿಮಗೆ ನಿಮ್ಮ ಸಹೋದರ, ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮನೆಯ ಕೆಲಸ ಸುಸ್ತು ಮಾಡುತ್ತದೆ ಮತ್ತು ನಿಮ್ಮನ್ನು ಮಾನಸಿಕ ಒತ್ತಡದಲ್ಲಿರಿಸುತ್ತದೆ.

**ಧನಸ್ಸು** ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ನಿಮ್ಮ ಹೆಂಡತಿಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು.

**ಮಕರ** ನಿಮ್ಮ ಶಾಂತತೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಚಟುವಟಿಕೆಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡಿರಿ. ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

**ಕುಂಭ** ನಗು ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಸಪರಿಹಾರವಾದ್ದರಿಂದ ನಕ್ಕುಬಿಡಿ. ಮನೆಯ ಅಗತ್ಯವಾದ ವಸ್ತುಗಾಲ ಮೇಲೆ ಹಣವನ್ನು ಖರ್ಚು ಮಾಡುವುದು ಖಂಡಿತವಾಗಿಯೂ ನಿಮಗೆ ಆರ್ಥಿಕ ತೊಂದರೆಗಳನ್ನು ನೀಡುತ್ತದೆ.

**ಮೀನ** ಖಿನ್ನತೆಯನ್ನು ಹೊಡೆದೋಡಿಸಿ, ಇದು ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

---

• ವೃತ್ತಿಪರ ಪತ್ರಕರ್ತರಿಗೆ ವಿಪುಲ ಅವಕಾಶ:ಪ್ಯಾಕ್ಟ್ ನ್ಯೂಸ್ ಮಾಡಬೇಕಾದವರು ಫ್ಯಾಕ್ಟ್ ಚೆಕ್ ಮಾಡುವ ಪರಿಸ್ಥಿತಿ ಬಂದಿದೆ

# ವೃತ್ತಿಪರ ಪತ್ರಕರ್ತರಿಗೆ ವಿಪುಲ ಅವಕಾಶ: ದೇವಯ್ಯ ಗುತ್ತೇದಾರ

• ಉದಯವಾಹಿನಿ ಕಲಬುರಗಿ

ಮಾಧ್ಯಮ ಕ್ಷೇತ್ರದಲ್ಲಿ ವೃತ್ತಿಪರ ಪತ್ರಕರ್ತರಿಗೆ ಇಂದಿನ ದಿನಮಾನದಲ್ಲಿ ವಿಪುಲ ಅವಕಾಶವಿದ್ದು, ಪತ್ರಿಕೋದ್ಯಮದ ವಿದ್ಯಾರ್ಥಿಗಳಿಗೆ ಮುಂದೇನೆಂಬ ಚಿಂತೆಯ ಭಯ ಬೇಡ ಎಂದು ವಿಜಯ ಕರ್ನಾಟಕ ದಿನಪತ್ರಿಕೆಯ ಕಲಬುರಗಿ ಆವೃತ್ತಿಯ ಸ್ಥಾನಿಕ ಸಂಪಾದಕ ದೇವಯ್ಯ ಗುತ್ತೇದಾರ್ ಹೇಳಿದರು.

ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಇವುಗಳ ಸಂಯುಕ್ತಾಶ್ರಯದಲ್ಲಿ ಗುರುವಾರ ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಅನುಭವ ಮಂಟಪದಲ್ಲಿ ಆಯೋಜಿಸಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆಲ್ಲ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಮುಂದಿನ ಭವಿಷ್ಯ ಕಟ್ಟಿಕೊಳ್ಳಲು ಪತ್ರಿಕೆ, ಸುದ್ದಿ ವಾಹಿನಿಗಳನ್ನೆ ಅವಲಂಬಿಸಬೇಕಿತ್ತು. ಇದೀಗ ಸಾಮಾಜಿಕ ಮಾಧ್ಯಮ ವೇಗವಾಗಿ ಬೆಳೆಯುತ್ತಿರುವುದರಿಂದ ಇಲ್ಲಿಯೂ ಉದ್ಯೋಗದ ಅವಕಾಶ ಹೆಚ್ಚಿದೆ. ಅದರಲ್ಲಿಯೂ ವೃತ್ತಿಪರತೆ ಮೈಗೂಡಿಸಿಕೊಂಡವರಿಗೆ, ಭಾಷೆಯ ಮೇಲೆ ಪ್ರಭುದ್ಧತೆ ಇರುವವರಿಗೆ ಅವಕಾಶ ಹೆಚ್ಚು. ಕಾರ್ಪೋರೇಟ್ ಕಂಪನಿಯಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿಯಾಗಿಯೂ ಕೆಲಸ ಮಾಡಬಹುದಾಗಿದೆ. ಇದಲ್ಲದೆ ಪೋಟೋ ಎಡಿಟಿಂಗ್, ಡಿಸೈನ್, ಜಾಹೀರಾತು ಅನೇಕ ವಿಭಾಗದಲ್ಲಿ ಉದ್ಯೋಗ ಇವೆ ಎಂದರು.



ಉದಯವಾಹಿನಿ ಚಿತ್ರ

**ಪತ್ರಿಕಾ ದಿನಾಚರಣೆ ಕಾರ್ಯಕ್ರಮ**

ಇಂದು ನಿಜ ಸುದ್ದಿಗಾಗಿ ಪರಿಶ್ರಮ ಪಡಬೇಕಿದೆ. ಫ್ಯಾಕ್ಟ್ ನ್ಯೂಸ್ ನೀಡಬೇಕಾದ ನಾವು ಸುದ್ದಿ ಮಾಡಲು ಫ್ಯಾಕ್ಟ್ ಚೆಕ್ ಮಾಡುವ ಪರಿಸ್ಥಿತಿಯಲ್ಲಿದ್ದೇವೆ. ಪತ್ರಕರ್ತನಾದವನು ಜೀವಪರ, ಜನಪರವಾಗಿದ್ದು, ಪತ್ರಿಕಾ ಧರ್ಮದ ಮೌಲ್ಯ ಎತ್ತಿ ಹಿಡಿಯಬೇಕು.

181 ದೇಶಗಳ ಪೈಕಿ ಪತ್ರಿಕಾ ಸ್ವಾತಂತ್ರ್ಯದಲ್ಲಿ ಭಾರತ ಇಂದು 151ನೇ ಸ್ಥಾನದಲ್ಲಿದೆ. ಅದೇ ರೀತಿ ವಾಕ್ ಸ್ವಾತಂತ್ರ್ಯದಲ್ಲಿ 109ನೇ ಸ್ಥಾನ. ವಿಶ್ವದ ಬಲಿಷ್ಟ ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ಮತ್ತು ವಾಕ್ ಸ್ವಾತಂತ್ರ್ಯ ಉಳಿಸುವ ಜವಾಬ್ದಾರಿ ಪತ್ರಕರ್ತರ ಮೇಲಿದೆ. ಪತ್ರಿಕಾ ದಿನಾಚರಣೆಯ ಈ ಸಂದರ್ಭದಲ್ಲಿ ನಾವೆಲ್ಲರು ಇದನ್ನು ಅವಲೋಕನ ಮಾಡಿಕೊಳ್ಳಲು ಇದು ಸೂಕ್ತಕಾಲ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂಗಮನಾಥ ರೇವತಗಾಂವ ಮಾತನಾಡಿ, ಶರಣಬಸವ ವಿ.ವಿ. ಪತ್ರಿಕೋದ್ಯಮ ವಿಷಯದಲ್ಲಿ ಚಲನಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಪತ್ರಿಕೋದ್ಯಮ ವಿದ್ಯಾರ್ಥಿಗಳು ಪತ್ರಿಕೆ ಓದುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

> ಇಂದು ಯಾವುದೇ ಒಂದು ಗಣ್ಯರ ಭಾಷಣವನ್ನು ಎ.ಐ. ತಂತ್ರಜ್ಞಾನ ಸಹಾಯದಿಂದ ಕ್ಷಣಾರ್ಧದಲ್ಲಿ ತಮಗೆ ಬೇಕಾದ ಭಾಷೆಯಲ್ಲಿ ಭಾಷಾಂತರ ಮಾಡಬಹುದಾಗಿದೆ. ಇಷ್ಟರ ಮಟ್ಟಿಗೆ ತಂತ್ರಜ್ಞಾನ ಬೆಳೆದಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಶರಣಬಸವ ವಿ.ವಿ. ಶೈಕ್ಷಣಿಕ ಪಠ್ಯಕ್ರಮದ ಜೊತೆ ಮಾನವೀಯ ಮೌಲ್ಯ ಬಿತ್ತುವ ಕೆಲಸ ಮಾಡುತ್ತಿದೆ.
> -ಅನಿಲಕುಮಾರ ಜಿ. ಶರಣಬಸವ ವಿಶ್ವವಿದ್ಯಾಲಯದ ಕುಲಪತಿ ಡಾ.

**ಕೌಶಲ್ಯಕ್ಕೆ ಮಹತ್ವ ಕೊಡಿ**

ಜಡಿಯಪ್ಪ ಗೆದ್ಲಗಟ್ಟಿ ಮಾತನಾಡಿ, ಕೌಶಲ್ಯ ಇದ್ದಲ್ಲಿ ಮಾತ್ರ ಮನುಷ್ಯನಿಗೆ ಬೆಲೆ ಇದೆ. ಹೀಗಾಗಿ ನಿಮ್ಮ ಆಸಕ್ತಿಯ ವಿಷಯದಲ್ಲಿ ಕೌಶಲ್ಯತೆ ಹೆಚ್ಚಿಸಿಕೊಳ್ಳಬೇಕು. ಕಥೆ, ಕಾದಂಬರಿ, ಸಾಹಿತ್ಯ ಓದು ವೃತ್ತಪರತೆ ಹೆಚ್ಚಿಸಲು ಅನುಕೂಲವಾಗಲಿದೆ. ಇನ್ನು ಮೊಬೈಲ್ ಬಳಕೆ ಸಿಮಿತವಾಗಿ ಬಳಸಿ ಅನಗತ್ಯ ಅದರಲ್ಲಿಯೇ ಕಳೆದು ಹೋಗಬೇಡಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

> ಸುದ್ದಿ ವಾಹಿನಿ ಬಂದ ಮೇಲೆ ಮುದ್ರಣ ಮಾಧ್ಯಮದ ಕಥೆ ಮುಗಿಯಿತು ಎನ್ನುತ್ತಿದ್ದರು. ಆದರೆ ಇಂದಿಗೂ ವಿದ್ಯುನ್ಮಾನ ವಾಹಿನಿಕ್ಕಿಂತ ಮುದ್ರಣ ಮಾಧ್ಯಮ ತನ್ನ ಸಾಮಾಜಿಕ ಜವಾಬ್ದಾರಿ ಬಹಳ ಎಚ್ಚರಿಕೆಯಿಂದ ನಿಭಾಯಿಸುತ್ತಿದೆ ಎಂದು ಹಲವಾರು ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ. ಹೀಗಾಗಿ ಪತ್ರಿಕಾ ವೃತ್ತಿಗೆ ಬರುವ ಪ್ರತಿಯೊಬ್ಬ ವಿದ್ಯಾರ್ಥಿ ಪ್ರತಿ ದಿನ ದಿನಪತ್ರಿಕೆಗಳನ್ನು ಓದುವ ಮೂಲಕ ಜ್ಞಾನ ಹೆಚ್ಚಿಸಿಕೊಳ್ಳಬೇಕೆಂದ ಅವರು, ತನಿಖಾ ವರದಿ ಮಾಡುವಾಗ ದಾಖಲೆ ಇಟ್ಟುಕೊಳ್ಳುವುದು ಒಳಿತು. -ದೇವಯ್ಯ ಗುತ್ತೇದಾರ

---

## 14ವರ್ಷ ಚಿಂಚೋಳಿಯಲ್ಲಿ ವೈದ್ಯ ಸೇವೆ ಸಲ್ಲಿಸಿದ್ದು ನನಗೆ ತೃಪ್ತಿ ತಂದಿದೆ: ಡಾ.ಸಂತೋಷ ಪಾಟೀಲ

• ಉದಯವಾಹಿನಿ, ಚಿಂಚೋಳಿ

ಸಾರ್ವಜನಿಕರ ಮತ್ತು ಮುಖಂಡರ ಬೆಂಬಲ,ಸಿಬ್ಬಂದಿ ವರ್ಗದವರ ಸಹಕಾರದಿಂದ ಯಶಸ್ವಿಯಾಗಿ ತಾಲ್ಲೂಕಾ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಕಳೆದ 14ವರ್ಷದಿಂದ ಮಕ್ಕಳ ವೈದ್ಯನಾಗಿ ಸೇವೆ ಸಲ್ಲಿಸಿದ್ದು ಅತ್ಯಂತ ತೃಪ್ತಿ ತಂದಿದೆ ಎಂದು ಶಾಹಾಬಾದಗೆ ವರ್ಗಾವಣೆಗೊಂಡ ಮಕ್ಕಳ ತಜ್ಞವೈದ್ಯ, ಡಾ.ಸಂತೋಷ ಪಾಟೀಲ ಹೇಳಿದರು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ,ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಮಕ್ಕಳ ತಜ್ಞವೈದ್ಯ, ಡಾ.ಸಂತೋಷ ಪಾಟೀಲರವರ ವರ್ಗಾವಣೆಯಾದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಬಿಳ್ಕೋಡುವ ಸಮಾರಂಭದಲ್ಲಿ ಮಾತನಾಡಿದ ಅವರು,14ವರ್ಷಗಳ ಹಿಂದೆ ನಾನು ಚಿಂಚೋಳಿಗೆ ಸೇವೆ ಸಲ್ಲಿಸಲು ಬಂದಾಗ ಪಟ್ಟಣದಲ್ಲಿ ಅಭಿವೃದ್ಧಿ ಇರಲಿಲ್ಲ ಟೀ,ಊಟದ ಸಮಸ್ಯೆ ವಿತ್ತು ಈಗ ಎಲ್ಲವೂ ಸಿಗುತ್ತಿದೆ,ಆಗ ಬರೀ ಮೂರು ವೈದ್ಯರು ಸಂಪೂರ್ಣ ಆಸ್ಪತ್ರೆಯಲ್ಲಿ ಇದ್ದುಕೊಂಡು ಸಾರ್ವಜನಿಕರಿಗೆ ಉತ್ತಮ ಚಿಕಿತ್ಸೆ ಕೊಡುತ್ತಿದ್ದೆವು.

ನಾನು ಆಸ್ಪತ್ರೆಯ ಆಡಳಿತಾಧಿಕಾರಿ ಜವಾಬ್ದಾರಿ ತೆಗೆದುಕೊಂಡ ಮೇಲೆ ಆರೋಗ್ಯ ಮಿತ್ರ ಪ್ರಶಸ್ತಿ,ಲಕ್ಷ ಪ್ರಮಾಣಪತ್ರ, ಹಾಗೂ ಮೂರು ಬಾರಿ ಕಾಯಕಲ್ಪ ಆವಾರ್ಡ್ ಚಿಂಚೋಳಿ ಆಸ್ಪತ್ರೆ ದೊರಕಿದೆ. ಟಿಹೆಚ್ಓ ಡಾ.ಮಹ್ಮುದ್ ಗಫಾರ ಆಸ್ಪತ್ರೆಯ ಎಎಂಓ ಪ್ರಭಾರ ವಹಿಸಿಕೊಂಡರು. ಡಿವೈಎಸ್ಪಿ ಸಂಗಮನಾಥ ಹಿರೇಮಠ,ಡಾ. ಶಿವರಾಜ ಪಾಟೀಲ ಸಜ್ಜನಶೆಟ್ಟಿ,ಡಾ.ಬಾಲಾಜೀ,ಕೆಎಂ ಬಾರಿ,ಲಕ್ಷ್ಮಣ ಆವುಂಟಿ,ಶಾಮರಾವ ಓಂಕಾರ,ಗುರುಬಸಮ್ಮ ಮಾತನಾಡಿದರು. ಈ ಸಂದರ್ಭದಲ್ಲಿ ಸಿಪಿಐ ಕಪಿಲದೇವ, ಡಾ.ಅಜೀಜ್, ಅಬ್ದುಲ್ ಬಾಷೀದ್, ಭೀಮಶೆಟ್ಟಿ ಮುರುಡಾ, ನರಸಮ್ಮ ಆವುಂಟಿ, ಪವನಕುಮಾರ, ಡಾ.ರಾಜೇಶ, ಮಧುಕರ ಸೇರಿದಂತೆ ಅನೇಕರಿದ್ದರು.


ಉದಯವಾಹಿನಿ ಚಿತ್ರ

> ನಮ್ಮ ತಂದೆಯವರು ಹೇಳುತ್ತಿದ್ದರೂ ಯಾರಿಗೂ ಕೆಟ್ಟದ್ದನ್ನು ಮಾಡಬಾರದು ಆಗ ನಮಗೆ ಒಳ್ಳೆಯದು ಆಗುತ್ತದೆ ಎಂದು ಹೇಳುತ್ತಿದರೂ ನನಗೆ ಒಳ್ಳೆಯದೆ ಆಗಿದೆ,ಕೋವೀಡ್-19ನಲ್ಲಿ ಬಹಳಷ್ಟು ಶ್ರಮಪಟ್ಟು ಕೆಲಸ ಮಾಡಿದ್ದೇವೆ ಸಿಬ್ಬಂದಿ ವರ್ಗದವರ ವೈದ್ಯರ ಬೆಂಬಲ ಕೂಡ ಚನ್ನಾಗಿ ಇರುವುದರಿಂದ ಉತ್ತಮವಾಗಿ ಸೇವೆ ಸಲ್ಲಿಸಲು ಅನುಕೂಲವಾಗಿದೆ. -ಡಾ.ಸಂತೋಷ ಪಾಟೀಲ

---

## ರಾಜ್ಯದ ಸಿಎಂ ಯಾರು?: ರಾಮುಲು ಪ್ರಶ್ನೆ

• ಉದಯವಾಹಿನಿ, ಬಳ್ಳಾರಿ

ರಾಜ್ಯದಲ್ಲಿ ನಡೆಯುತ್ತಿರುವ ಕಾಂಗ್ರೆಸ್ ಪಕ್ಷದ ರಾಜಕೀಯ ಬೆಳವಣಿಗೆಗಳನ್ನು ಗಮನಿಸಿದರೆ. ಇಲ್ಲಿನ ಮುಖ್ಯ ಮಂತ್ರಿ ಯಾರು ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಪ್ರಶ್ನಿಸಿದ್ದಾರೆ.

ನಗರದ ತಮ್ಮ ನಿವಾಸದಲ್ಲಿ ಇಂದು ಮಾಧ್ಯಮ ಗೋಷ್ಟಿ ನಡೆಸಿದ ಅವರು. ಈಗ ಸಿದ್ದರಾಮಯ್ಯ ಅವರು ಹೈಕಮಾಂಡಿನ ಕೈ ಗೊಂಬೆಯಾಗಿದ್ದಾರೆ. ಅಧಿಕಾರಕ್ಕಾಗಿ ಈ ಮುಂಚಿನಂತೆ ಗಟ್ಟಿ ಧ್ವನಿ ಇಲ್ಲದಂತಾಗಿದೆ.

ಸುರ್ಜಿವಾಲ ಅವರು ದೆಹಲಿಯಿಂದ ಬಂದು ರಾಜ್ಯದ ಸರ್ವಾಧಿಕಾರಿಯಂತೆ ಶಾಸಕರ, ಸಚಿವರ ಸಭೆ ನಡೆಸುತ್ತಿದ್ದಾರೆ. ಇವರ ಉದ್ದೇಶ ಏನು. ಸಿಎಂ ಬದಲಾವಣೆಗೆ ಶಾಸಕರ, ಸಚಿವರ ಮನಸ್ಥಿತಿಯನ್ನು ಅರಿಯಲು ಬಂದಂತಾಗಿದೆ. ಸರ್ಕಾರ ಅಭಿವೃದ್ಧಿ, ಜನರ ಸಮಸ್ಯೆ ನಿವಾರಣೆ ಬಗ್ಗೆ ಯೋಚನೆ ಮಾಡದೆ ಸರ್ಕಾರ ಕೋಮ ಸ್ಥಿತಿಯಲ್ಲಿ ಇದ್ದಂತೆ ಇದೆ.

ಸಿದ್ದರಾಮಯ್ಯ ಅವರು ಐಸಿಯುನಲ್ಲಿ ಇದ್ದಂತೆ ಇದ್ದಾರೆ. ಒಟ್ಟಾರೆ ರಾಜ್ಯದ ಪರಿಸ್ಥಿತಿಯನ್ನು ರೋಗಗ್ರಸ್ಥ ವ್ಯಕ್ತಿಗೆ ಹೋಲಿಸಿದ ಶ್ರೀ ರಾಮುಲು ಸಿದ್ದರಾಮಯ್ಯ ಅವರ ಸಿಎಂ ಆಯುಷ್ಯವನ್ನು ಏನು ಮಾಡಬೇಕು ಎಂಬುದನ್ನು ಹೈಕಮಾಂಡ್ ಚಿಂತಿಸಿದಂತೆ ಇದೆ. ಅದಕ್ಕಾ ಸಿದ್ದರಾಮಯ್ಯ ಅವರು ಹೈಕಮಾಂಡಿಗೆ ತಮ್ಮ ಶಕ್ತಿ ಪ್ರದರ್ಶಿಸಲು ಮೈಸೂರಿನಲ್ಲಿ ಸಮಾವೇಶ ಹಮ್ಮಿಕೊಂಡಿದ್ದಾರೆ ಎಂದರು. ಬೆಂಗಳೂರಿನಲ್ಲಿ ಓಬಿಸಿ ರಾಷ್ಟ್ರೀಯ ಸಮಿತಿ ಸಭೆ ನಡೆಸಿದ್ದು ಬಿಹಾರ್ ಚುನಾವಣೆಯನ್ನು ದೃಷ್ಟಿಯಲ್ಲಿರಿಸಿಕೊಂಡು ಹೊರತು. ಬೇರೇನು ಅಲ್ಲ. ಬಿಹಾರ ಚುನಾವಣೆ ಫಲಿತಾಂಶದ ನಂತರ ಈ ಓಬಿಸಿ ಇಲ್ಲದಂತಾಗುತ್ತದೆಂದು ಎಂದರು.


ಉದಯವಾಹಿನಿ ಚಿತ್ರ

**ಬಳ್ಳಾರಿಯಲ್ಲಿ ಡ್ರಗ್ಸ್ ಮಾಫಿಯಾ**

ಗಾಂಜಾ, ಕೊಕೇನ್ ಸೇರಿದಂತೆ ಬಳ್ಳಾರಿ ನಗರ ಮತ್ತು ಜಿಲ್ಲೆಯಲ್ಲಿ ಕಾಲೇಜುಗಳ ಬಳಿ ಡ್ರಗ್ಸ್ ಮಾರಾಟದ ಮಾಫಿಯಾ ಹೆಚ್ಚಿದೆ. ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿ ಇಲ್ಲ. ಸಚಿವ ಸಣ್ಣ ಖರ್ಗೆಯವರ ಶಿಷ್ಯ ಲಿಂಗರಾಜ್ ಡ್ರಗ್ಸ್ ಮಾರಾಟದಲ್ಲಿ ಸಿಕ್ಕಿಕೊಂಡಿದ್ದಾರೆ. ಇಸ್ಪೀಟ್ ಜೂಜಾಟ ಹೆಚ್ಚಿದೆ. ಪೊಲೀಸ್ ವ್ಯವಸ್ಥೆ ಪೂರ್ಣ ವಿಫಲವಾಗಿದೆ ಎಂದರು. ಬಳ್ಳಾರಿ ನಗರದಲ್ಲಿ ನಿರ್ಮಾಣಗೊಂಡ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭವಾಗುತ್ತಿಲ್ಲ. ಇದಕ್ಕೆ ಇನ್ನೂ 40 ಕೋಟಿ ರೂ ಬೇಕಿದೆ. ಬಿಎಂ ಆರ್ ಸಿ ಯಲ್ಲಿ ಕ್ಯಾನ್ಸ ರ್ ವಿಭಾಗದಲ್ಲಿ ರೇಡಿಯೋ ಥೆರಫಿ ಯಂತ್ರ ಇದೆ ಉಪಯೋಗವಿಲ್ಲದಂತಾಗಿದೆ ಎಂದು ಹೇಳಿದರು.

---

## ಜೂಜಾಟ: ಐವರ ಬಂಧನ

• ಉದಯವಾಹಿನಿ ಕಲಬುರಗಿ

ಇಲ್ಲಿನ ಕಮಲ ನಗರದ ಇಟ್ಟಂಗಿ ಭಟ್ಟಿ ಹತ್ತಿರ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಬ್-ಅರ್ಬನ್ ಪೊಲೀಸ್ ಠಾಣೆ ಪಿಎಸ್‌ಐ ಶಶಿಕಲಾ ಮತ್ತು ಸಿಬ್ಬಂದಿ ದಾಳಿ ನಡೆಸಿ ಐವರನ್ನು ಬಂಧಿಸಿದ್ದಾರೆ.

ಮಲ್ಲೇಶ ಬರಮನೂರ, ಗಣಪತಿ ಮಾನೆ, ಶಂಕರ ವಾಡಿ, ಸಂಜೀವ ಗಾಯದನಕರ ಮತ್ತು ಪುಲು ಪವಾರ ಎಂಬುವವರನ್ನು ಬಂಧಿಸಿ 6630 ರೂ.ನಗದು ಹಣ ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಂಗನಕೋಟ ಐತಿಹಾಸಿಕ ಸಿದ್ಧೇಶ್ವರ ದೇವಸ್ಥಾನ ಅಭಿವೃದ್ಧಿಪಡಿಸುವಂತೆ ಮನವಿ

• ಉದಯವಾಹಿನಿ, ಬೀದರ

ತಾಲ್ಲೂಕಿನ ಕಂಗನಕೋಟ್ ಗ್ರಾಮದ ಪುರಾತನ ಹಾಗೂ ಐತಿಹಾಸಿಕ ಶ್ರೀ ಸಿದ್ದೇಶ್ವರ ದೇವಸ್ಥಾನವಾಗಿದ್ದು, ಇದು ಸುಮಾರು ವರ್ಷಗಳ ಇತಿಹಾಸವಿದ್ದು, ಶ್ರೀ ಸಿದ್ದೇಶ್ವರ ದೇವರು ತಪ್ಪಸ್ಸು ಮಾಡಿರುವ ಪುರಾವೆಗಳಿವೆ. ಹೀಗಾಗಿ ಇದರ ಜೀರ್ಣೋದ್ಧಾರದ ಅವಶ್ಯಕತೆ ಇರುತ್ತದೆ. ಅಲ್ಲದೇ ಸದರಿ ದೇವಸ್ಥಾನದ ಪರಿಸರದಲ್ಲಿ ಒಂದು ಕೊಳ ಮತ್ತು ಗವಿ ಇರುತ್ತದೆ. ಅಲ್ಲದೇ ದೇವಸ್ಥಾನದ ಸುತ್ತ-ಮುತ್ತ ಸುಂದರವಾದ ಪರಿಸರ ಕೂಡ ಹೊಂದಿರುತ್ತದೆ. ಜಿಲ್ಲಾಧಿಕಾರಿಗಳು ದೇವಸ್ಥಾನಕ್ಕೆ ಖುದ್ದಾಗಿ ಭೇಟಿ ನೀಡಿ ದೇವಸ್ಥಾನದ ಪರಿಶೀಲನೆ ಮಾಡಿ ಇದರ ಜೀರ್ಣೋದ್ಧಾರಕ್ಕಾಗಿ (ಅಭಿವೃದ್ಧಿಗಾಗಿ) ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿಪಡಿಸಬೇಕೆಂದು ಗ್ರಾಮದ ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದ್ದಾರೆ.

## ಅಕ್ರಮ ಮಣ್ಣುಲೂಟಿ: ಗ್ರಾಮಸ್ಥರ ಆಕ್ರೋಶ

• ಉದಯವಾಹಿನಿ, ಲಕ್ಷ್ಮೇಶ್ವರ

ಜಿಲ್ಲೆಯ ಲಕ್ಷ್ಮೇಶ್ವರ ತಾಲ್ಲೂಕಿನ ಶೆಟ್ಟಿಕೇರಿ ಅಕ್ಕಿಗುಂದ ಮಧ್ಯದಲ್ಲಿ ಮಾಲ್ಕಿ ಜಮೀನಿನಲ್ಲಿ ಹಗಲು ರಾತ್ರಿ ಎನ್ನದೆ ಗುತ್ತಿಗೆದಾರರು ಅಕ್ರಮವಾಗಿ ಮಣ್ಣು ಸಾಗಿಸುತ್ತಿದ್ದು ಅಧಿಕ ಭಾರಕ್ಕೆ ರಸ್ತೆಗಳು ಹಾಳಾಗುತ್ತಿದೆ ಎಂದು ಅಕ್ಕಿಗುಂದ ಗ್ರಾಮಸ್ಥರು ಟ್ರಕ್ಕ ಲಾರಿಗಳನ್ನು ತಡೆದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಶೆಟ್ಟಿಕೇರಿ ಅಕಿ ಗುಂದ ಮಧ್ಯದ ಅಕ್ಕಿಗುಂದ ಬೆಟ್ಟದ ಮಾಲ್ಕಿ ಜಮೀನಿನಲ್ಲಿ ಹಗಲು ರಾತ್ರಿ ಎನ್ನದೆ ಹಿಟಾಚಿ ಯಂತ್ರಗಳ ಮೂಲಕ ನಿರಂತರವಾಗಿ ಮಣ್ಣನ್ನು ಲೂಟಿ ಮಾಡಲಾಗುತ್ತಿದ್ದು ನಿತ್ಯ ನೂರಾರು ಲಾರಿಗಳು ಶೆಟ್ಟಿಕೇರಿಯಿಂದ ಅಕ್ಕಿಗುಂದ ಮಾರ್ಗವಾಗಿ ಗದುಗಿನ ರಸ್ತೆಗೆ ಗುತ್ತಿಗೆದಾರರು ಮಣ್ಣನ್ನು ಸಾಗಿಸುತ್ತಿದ್ದಾರೆ ಅಧಿಕ ಭಾರಕ್ಕೆ ರಸ್ತೆಗಳು ಹಾಳಾಗುತ್ತಿದ್ದು ಅನೇಕ ಕಡೆ ಗುಂಡಿಗಳು ಬಿದ್ದು ವಾಹನ ಸಂಚಾರಕ್ಕೆ ಅಡಚಣೆಯಾಗಿದೆ. ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು. ಶೆಟ್ಟಿಕೇರಿಯ ಅಕ್ಕಿಗುಂದ ಮಧ್ಯ ಭಾಗದಲ್ಲಿ ಹಗಲು ರಾತ್ರಿ ಎನ್ನದೆ ಮಣ್ಣನ್ನು ಲೂಟಿ ಮಾಡುತ್ತಿದ್ದರು ಕಂದಾಯ ಇಲಾಖೆಯವರು ಯಾವುದೇ ಕ್ರಮ ಕೈಗೊಂಡಿಲ್ಲ ನಮ್ಮ ಊರಿನ ರಸ್ತೆಯ ಮೇಲೆ ನಮಗೆ ಓಡಾಡಲು ಆಗುತ್ತಿಲ್ಲ ಅಷ್ಟೊಂದು ದೊಡ್ಡ ದೊಡ್ಡ ಗುಂಡಿಗಳು ಬಿದ್ದಿದೆ. ಇನ್ನಾದರು ಸಂಬಂಧಿಸಿದ ಅಧಿಕಾರಿಗಳು ಅಕ್ರಮವಾಗಿ ಮಣ್ಣು ಲೂಟಿ ಮಾಡುತ್ತಿರುವ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

---

## ಕಾಡು ಹಂದಿಗಳ ಹವಾಳಿ: ಕಬ್ಬು ಬೆಳೆಗೆ ಹಾನಿ
## ಅರಣ್ಯ ಇಲಾಖೆ ಅಧಿಕಾರಿಗಳ ತಂಡ ಪರಿಶೀಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಶಾಧಿಪೂರ ಗ್ರಾಮದ ಜಮೀನುಗಳಲ್ಲಿ ಕಾಡು ಹಂದಿಗಳ ಹವಾಳಿಯಿಂದ ರೈತರು ಬೆಳೆದ ಕಬ್ಬು ಬೆಳೆ ಸಂಪೂರ್ಣವಾಗಿ ಹಾನಿ ಮಾಡಿರುವುದರಿಂದ ರೈತರು ಪರಿಹಾರ ನೀಡುವಂತೆ ಅರಣ್ಯ ಇಲಾಖೆ ಸಚಿವರಿಗೆ ಮತ್ತು ಅರಣ್ಯಾಧೀಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು. ಮನವಿಗೆ ಸ್ವಂದಿಸಿ ಸಚಿವರ ಆದೇಶದ ಮೇರೆಗೆ ಜಿಲ್ಲಾ ಅರಣ್ಯ ಇಲಾಖೆಯ ತಂಡ ಹಾಗೂ ತಾಲ್ಲೂಕಾ ಅಧಿಕಾರಿಗಳ ತಂಡ ಶಾಧಿಪೂರ ಗ್ರಾಮದ ರೈತರ ಜಮೀನುಗಳಿಗೆ ತೆರಳಿ ಕಾಡು ಹಂದಿಗಳು ಹಾನಿ ಮಾಡಿದ ಕಬ್ಬು ಬೆಳೆಯು ಪರಿಶೀಲಿಸಿದರು.

ಕಾಡು ಹಂದಿಗಳ ಹಾವಳಿಯಿಂದ ನಾಶವಾಗಿರುವ ಕಬ್ಬು ಬೆಳೆಯನ್ನು ಅಧಿಕಾರಿಗಳು ಪರಿಶೀಲಿಸಿ ರೈತರಿಗೆ ಶೀಘ್ರದಲ್ಲೇ ಸೂಕ್ತ ಪರಿಹಾರ ಸರ್ಕಾರದಿಂದ ನೀಡುವಂತೆ ವರದಿ ಮಾಡುತ್ತೇವೆಂದು ಭರವಸೆ ನೀಡಿದರು. ಬಸವರಾಜ ಬಾಗೋಡಿ, ರಾಮಚಂದ್ರಪ್ಪ, ರಾಮಚಂದ್ರ ಕಾರ್ಬಾರಿ, ಖೂಬಾಸಿಂಗ್ ರಾಠೋಡ್, ದಶರಥ ಕಾವಲ್, ಪತ್ತಿನಾರಾಯಣ, ಜೀತೂ ರಾಠೋಡ್, ಪಾಂಡು ಪವ್ವಾರ, ವೀರಪ್ಪ ತಳವಾರ, ವಸಂತ ರಾಠೋಡ, ಶರಣಪ್ಪ ಬಗರಿ, ರವಿ ಚವ್ವಾಣ, ಪ್ರೇಮ್ ರಾಠೋಡ್, ರಮೇಶ್ ಪವ್ವಾರ, ರಮೇಶ್ ಚವ್ವಾಣ, ತಪ್ಸಿರಾಮ್ ರಾಠೋಡ್ ಅನೇಕರಿದ್ದರು.

> ಗ್ರಾಮದಲ್ಲಿ ಸುಮಾರು 120 ಎಕರೆ ಪ್ರದೇಶದಲ್ಲಿ ಬೆಳೆದಿರುವ ಕಬ್ಬು ಬೆಳೆಯನ್ನು ಕಾಡು ಹಂದಿಗಳು ತೋಟಗಳಿಗೆ ನುಗ್ಗಿ ಸಂಪೂರ್ಣವಾಗಿ ನಾಶಪಡಿಸಿವೆ,ಹಾವಳಿಯಿಂದಾಗಿ ಬಡ ರೈತರಿಗೆ ಭಾರಿ ಆರ್ಥಿಕ ನಷ್ಟವುಂಟಾಗಿದೆ,ಈ ಕುರಿತು ಹಲವು ಸಚಿವರಿಗೆ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿದೇವೆ,ಅದರಂತೆ ಜುಲೈ 15ರಂದು ಸಲ್ಲಿಸಿದ ಮನವಿ ಸ್ವಂದಿಸಿದ ಅರಣ್ಯ ಇಲಾಖೆ ಡಿ.ಎಫ್.ಓ.ಸುಮಿತಕುಮಾರ,ತಾಲ್ಲೂಕಾ ಆರ್.ಎಫ್.ಓ.ಸಂಜುಕುಮಾರ ಚವಾಣ ಸೇರಿದಂತೆ ಇತರ ಅಧಿಕಾರಿಗಳು ಶಾದಿಪುರ ಗ್ರಾಮದ ನಮ್ಮ ಜಮೀನುಗಳಿಗೆ ಭೇಟಿ ನೀಡಿ ಕಾಡು ಹಂದಿಗಳಿಂದ ಹಾನಿಗೊಳಗಾದ ಕಬ್ಬು ಬೆಳೆಯನ್ನು ಸ್ಥಳದಲ್ಲೇ ಪರಿಶೀಲಿಸಿ ನಷ್ಟದ ಪ್ರಮಾಣವನ್ನು ಅಂದಾಜಿಸಿದ್ದಾರೆ.
> -ಲಿಂಬಾಜೀ ಚವ್ವಾಣ, ಕರವೇ ಸ್ವಾಭಿಮಾನ ಸಂಘಟನೆಯ ಅಧ್ಯಕ್ಷ

---


## ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆಗೆ ಆಗ್ರಹಿಸಿ ಧರಣಿ

• ಉದಯವಾಹಿನಿ, ಭಾಲ್ಕಿ

ಪಟ್ಟಣದಲ್ಲಿ ಕನ್ನಡ ಶಾಲೆಗಳ ರಕ್ಷಣೆ ಹಾಗೂ ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆಗೆ ಆಗ್ರಹಿಸಿ ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಸಂಘ, ಕನ್ನಡ ಸಂರಕ್ಷಣಾ ಸಮಿತಿ, ಕನ್ನಡ ಸಾಹಿತ್ಯ ಪರಿಷತ್, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಒಂದು ದಿನದ ಧರಣಿ ನಡೆಸಿದರು.

ನಂತರ ಮುಖ್ಯಮಂತ್ರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಕಚೇರಿ ಅಧಿಕಾರಿಗೆ ಸಲ್ಲಿಸಿ ಮಾತನಾಡಿದ ಪ್ರಮುಖರು, ಸರ್ಕಾರದ ಕಠಿಣ ನಿಯಮಗಳ ಪರಿಣಾಮದಿಂದ ಕಳೆದ ಒಂದು ದಶಕದಲ್ಲಿ ಸಾವಿರಾರು ಕನ್ನಡ ಶಾಲೆಗಳು ಮುಚ್ಚಿವೆ. ಕೆಲವು ಸೊರಗಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. 1995ರ ನಂತರ ಪ್ರಾರಂಭವಾದ ಅನುದಾನ ರಹಿತ ಖಾಸಗಿ ಶಾಲಾ, ಕಾಲೇಜುಗಳಿಗೆ ಅನುದಾನ ನೀಡಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡುವ ಪ್ರಕ್ರಿಯೆ ಸರಳಗೊಳಿಸಬೇಕು. ಬಡ ಮಕ್ಕಳ ದಾಖಲಾತಿಗಾಗಿ ಆರ್‌ಟಿಇ ಖಾಸಗಿ ಶಾಲೆಗಳಿಗೆ ಮರು ಚಾಲನೆ ನೀಡಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಮನವಿ ಪತ್ರದಲ್ಲಿ ಆಗ್ರಹಿಸಿದ್ದಾರೆ.

ಪ್ರಮುಖರಾದ ಸಂಜುಕುಮಾರ ಜ್ಯಾಂತೆ, ಪ್ರವೀಣ ಹಣಮಶೆಟ್ಟಿ, ಸಂತೋಷ ಖಂಡ್ರೆ, ವಿನೋದ ಜಗತಾಪ, ವಸಂತ ಪಾಟೀಲ, ಅಮರ್ ಹಲ್ಮಂಡಗೆ, ಸೈಯದ್ ಆಶ್ರತ್ ಅಲಿ, ರಾಜಕುಮಾರ್ ಕೆ. ಲಿಂಬಾಶೆಟ್ಟಿ, ಅಕ್ಷಯಕುಮಾರ ಮುದ್ದಾ, ಬಾಲಾಜಿ ಕಾಳೆ, ಸೇರಿದಂತೆ ಅನೇಕರು ಇದ್ದರು.


ಉದಯವಾಹಿನಿ ಚಿತ್ರ

---

## ಬೆಂ-ಮಂಗಳೂರು ರಾ. ಹೆದ್ದಾರಿಯಲ್ಲಿ ಭೂಕುಸಿತ: ಸಂಚಾರ ಬಂದ್

• ಉದಯವಾಹಿನಿ, ಮಂಗಳೂರು

ಭಾರೀ ಮಳೆಯ ಪರಿಣಾಮ ದಕ್ಷಿಣ ಕನ್ನಡದ ಕಡಬ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ-75 ರಲ್ಲಿ ಭಾರಿ ಭೂಕುಸಿತ ಸಂಭವಿಸಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ಮತ್ತು ಮಂಗಳೂರು ನಡುವಿನ ವಾಹನ ಸಂಚಾರ ತೀವ್ರವಾಗಿ ಅಸ್ತವ್ಯಸ್ತಗೊಂಡಿದೆ. ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಭೂಕುಸಿತ ಸಂಭವಿಸಿದ್ದು, ಸ್ಥಳದಲ್ಲಿ ಅಧಿಕಾರಿಗಳು ಮಣ್ಣು ತೆರವು ಕಾರ್ಯಾಚರಣೆಯನ್ನು ಆರಂಭಿಸಿದ್ದಾರೆ. ಭೂಕುಸಿತ ಪರಿಣಾಮ ಮಂಗಳೂರು-ಬೆಂಗಳೂರು, ಬೆಂಗಳೂರು-ಮಂಗಳೂರು ಸಾಗುವ ಲಾರಿ, ಬಸ್, ಟ್ರಕ್ ಗಳ ಸಂಚಾರ ಸಂಪೂರ್ಣ ಬಂದ್ ಆಗಿದ್ದು, ಕಾರು, ಬೈಕ್‌ಗಳು ಬದಲಿ ಮಾರ್ಗ ಬಳಸಲು ಎಸ್ಪಿ ಡಾ.ಅರುಣ್ ಮನವಿ ಮಾಡಿದ್ದಾರೆ. ರಾಷ್ಟ್ರೀಯ ಹೆದ್ದಾರಿ .75 ರ ಧರ್ಮಸ್ಥಳ ಕ್ರಾಸ್ ನಿಂದ ಸ್ವಲ್ಪ ಮುಂದೆ ಗುಡ್ಡ ಕುಸಿತ ಉಂಟಾಗಿದ್ದು, ಹೀಗಾಗಿ ಬೆಂಗಳೂರಿನಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯಕ್ಕೆ ಸಂಚಾರಕ್ಕೆ ಯಾವುದೇ ಅಡಚಣೆಗಳು ಎದುರಾಗಿಲ್ಲ. ಆದರೆ, ಮಂಗಳೂರಿನಿಂದ ಬೆಂಗಳೂರಿಗೆ ಹೋಗುವವರು ಬದಲಿ ಮಾರ್ಗ ಬಳಸಬೇಕಾಗಿದೆ.


ಉದಯವಾಹಿನಿ ಚಿತ್ರ

## ಕೀಳುಮಟ್ಟದ ರಾಜಕಾರಣ ನಮ್ಮದಲ್ಲ: ರೋಹಿಣಿ ಪಾಟೀಲ

• ಉದಯವಾಹಿನಿ, ಚನ್ನಮ್ಮನ ಕಿತ್ತೂರು

ಕಳೆದ ಎರಡು ವರ್ಷದಲ್ಲಿ ಕಿತ್ತೂರು ಕ್ಷೇತ್ರ ಅಭಿವೃದ್ಧಿ ಪಡಿಸುವುದರಲ್ಲಿ ಶಾಸಕ ಬಾಬಾಸಾಹೇಬ ಪಾಟೀಲರು ಹಗಲಿರುಳು ಶ್ರಮಿಸುತ್ತಿದ್ದಾರೆ. ಎಂದು ಮಾಜಿ ಜಿಪಂ ಹಾಗೂ ಕೆಪಿಸಿಸಿ ಸದಸ್ಯೆ ರೋಹಿಣಿ ಪಾಟೀಲ ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಇದನ್ನು ಸಹಿಲಾಗದ ಬಿಜೆಪಿ ಕಾರ್ಯಕರ್ತರು ನೆಮ್ಮದಿ ಕಳೆದುಕೊಂಡು ಕೀಳಮಟ್ಟದ ರಾಜಕಾರಣ ಮಾಡುತ್ತಿದ್ದಾರೆ ಇದು ಸರಿಯಲ್ಲವೆಂದರು. ಟೀಕೆಗಳಿಗೆ ನಮ್ಮ ಕಾರ್ಯಕರ್ತರು ಬಿಜೆಪಿಗರಿಗೆ ಉತ್ತರ ನೀಡದೇ ಶಾಂತಿಯುತವಾಗಿ ಜನಸೇವೆ ಮಾಡುವುದನ್ನು ಮುಂದುವರೆಸಬೇಕು. ನಾವು ಒಳ್ಳೆಯ ಮಾರ್ಗದಿಂದಲೇ ಸಮಾಜ ಸೇವೆಯಲ್ಲಿದ್ದೇವೆ. ಇನ್ನೊಬ್ಬರ ಹಾಗೇ ಕೀಳುಮಟ್ಟದ ರಾಜ ಕಾರಣ ನಮ್ಮದಲ್ಲ. ಅದು ನಮಗೆ ಸರಿ ಬರುವುದಿಲ್ಲವೆಂದರು. ಪ್ರಾಸ್ತಾವಿಕವಾಗಿ ಬ್ಲಾಕ್ ಅಧ್ಯಕ್ಷ ಸಂಗನಗೌಡ ಪಾಟೀಲ, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ರಾಜಾಸಲೀಂ ಕಾಶೀಮ್‌ನವರ, ಶಿವನಗೌಡ ಪಾಟೀಲ, ಮಾತನಾಡಿದರು.


ಉದಯವಾಹಿನಿ ಚಿತ್ರ

---

# ನವೆಂಬರ್ ಮೊದಲು ಸಿದ್ದು ರಾಜೀನಾಮೆ: ಜನಾರ್ದನ ರೆಡ್ಡಿ ಭವಿಷ್ಯ

### ಸಿದ್ದರಾಮಯ್ಯ ರಾಜೀನಾಮೆ ನೀಡದಿದ್ದಲ್ಲಿ, ಡಿಕೆಶಿ ಮುಖ್ಯಮಂತ್ರಿ ಕುರ್ಚಿಯನ್ನು ಬಲವಂತವಾಗಿ ಎಳೆದುಕೊಳ್ಳುತ್ತಾರೆ

• ಉದಯವಾಹಿನಿ, ಪುತ್ತೂರು

ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರಿಗಿಂತ ಒಂದು ದಿನವಾದರೂ ಹೆಚ್ಚು ಮುಖ್ಯಮಂತ್ರಿಯಾಗಿ ಆಡಳಿತ ನಡೆಸಬೇಕು ಎಂಬ ಜಿದ್ದಿಗೆ ಬಿದ್ದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ನವಂಬರ್ ಒಳಗಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುತ್ತಾರೆ. ಸಿದ್ದರಾಮಯ್ಯ ರಾಜೀನಾಮೆ ನೀಡದಿದ್ದಲ್ಲಿ ಡಿಕೆಶಿ, ಮುಖ್ಯಮಂತ್ರಿ ಕುರ್ಚಿಯನ್ನು ಬಲವಂತವಾಗಿ ಎಳೆದುಕೊಳ್ಳುತ್ತಾರೆ. ಈ ಬಗ್ಗೆ ಯಾವುದೇ ಅನುಮಾನ ಬೇಡ ಎಂದು ಮಾಜಿ ಸಚಿವ ಹಾಗೂ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಭವಿಷ್ಯ ನುಡಿದಿದ್ದಾರೆ. ಕಡಬ ತಾಲ್ಲೂಕಿನ ಸವಣೂರು ಗ್ರಾಮದ ಆರೆಲ್ತಡಿ ಉಳ್ಳಾಕ್ಲು, ಕೆಡೆಂಜೊಡಿತ್ತಾಯ ದೈವಸ್ಥಾನದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಸಭಾಭವನಕ್ಕೆ ಶಿಲಾನ್ಯಾಸ ನೆರವೇರಿಸಿ, ಬಳಿಕ ಮಾಜಿ ಸಂಸದ ನಳಿನ್‌ಕುಮಾರ್ ಕಟೀಲ್ ಅವರ ಪಾಲ್ತಾಡಿಯ ಕುಂಜಾಡಿಯಲ್ಲಿನ ಮನೆಯಲ್ಲಿ ಮಾತನಾಡಿದರು. ಸರ್ಕಾರದ ದುರಾಡಳಿತವನ್ನು ನೋಡಿರುವ ರಾಜ್ಯದ ಜನತೆ ಬಿಜೆಪಿಗೆ ಮತ ನೀಡಲು ತುದಿಗಾಲಲ್ಲಿ ನಿಂತಿದ್ದಾರೆ. ಮುಂದಿನ ಚುನಾವಣೆಯಲ್ಲಿ ಬಹುಮತದೊಂದಿಗೆ ನಾವು ಅಧಿಕಾರಕ್ಕೆ ಬರುವುದು ನಿಶ್ಚಿತ.

ಪಕ್ಷದ ನಿರ್ದೇಶನದಂತೆ ರಾಜ್ಯದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ ಎಂದು ಹೇಳಿದರು.

**ದೈವದ ನುಡಿ:** ಜೈಲಿನಿಂದ ಬಿಡುಗಡೆ ಅರೆಲ್ತಡಿ ಇರ್ವೆರ್ ಉಳ್ಳಾಕ್ಲು, ಕೆಡೆಂಜೋಡಿತ್ತಾಯಿ ಹಾಗೂ ಪರಿವಾರ ದೈವಸ್ಥಾನದ ಬ್ರಹ್ಮಕಲಶೋತ್ಸವ ಕಳೆದ ಮೇ 13ರಂದು ನಡೆದಿತ್ತು. ಈ ಬ್ರಹ್ಮಕಲಶೋತ್ಸವಕ್ಕೆ ಗಾಲಿ ಜನಾರ್ದನ ರೆಡ್ಡಿ ಆಗಮಿಸಬೇಕಿತ್ತು. ಆದರೆ ಆಂಧ್ರಪ್ರದೇಶದ ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಮೇ 6ರಂದು ಅವರು ಮತ್ತೊಮ್ಮೆ ಜೈಲುಪಾಲಾಗಿದ್ದರು. ಕಾನೂನಿನ ಸಮಸ್ಯೆಗೆ ಸಿಲುಕಿದ್ದ ಪರಿಣಾಮ ದೈವಸ್ಥಾನದ ಬ್ರಹ್ಮಕಲಶೋತ್ಸವಕ್ಕೆ ಅವರಿಗೆ ಆಗಮಿಸಲು ಸಾಧ್ಯವಾಗಿರಲಿಲ್ಲ.

> ಡಿಕೆಶಿ ಮತ್ತು ಸಿದ್ದರಾಮಯ್ಯ ಅವರು ಅಧಿಕಾರ 50-50 ಅಧಿಕಾರ ಹಂಚಿಕೆ ಮಾಡಿಕೊಂಡಿದ್ದಾರೆ ಎಂದು ನಾನು ಸಂಡೂರಿನಲ್ಲಿ ನಡೆದ ಉಪಚುನಾವಣೆಯ ಸಂದರ್ಭದಲ್ಲಿಯೇ ಹೇಳಿದ್ದೆ. ಅದೀಗ ನಿಜವಾಗುತ್ತಿದೆ. ಡಿಕೆಶಿ ಈಗಾಗಲೇ ಸಿಎಂ ಕುರ್ಚಿಗೆ ಬುನಾದಿ ಹಾಕಲು ಶುರು ಮಾಡಿದ್ದಾರೆ. ನನಗೆ ತಿಳಿದ ಮಾಹಿತಿ ಪ್ರಕಾರ ಅಧಿಕಾರ ಪಡೆಯಲೇಬೇಕು ಎನ್ನುವ ಆತುರದಲ್ಲಿ ಡಿಕೆಶಿ ಇದ್ದಾರೆ. ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುತ್ತಾರೆ , ರಾಜ್ಯ ಕಾಂಗ್ರೆಸ್ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡಿದೆ.
> -ಜನಾರ್ದನ ರೆಡ್ಡಿ


ಉದಯವಾಹಿನಿ ಚಿತ್ರ

**ಪ್ರತಿ ಪಕ್ಷದಲ್ಲೂ ಬಣ ರಾಜಕೀಯವಿದೆ**

ಬಣ ರಾಜಕೀಯ ಗೊಂದಲಗಳು ಪ್ರತಿಯೊಂದು ಪಕ್ಷದಲ್ಲೂ ಇದೆ. ಆದರೆ ಬಿಜೆಪಿ ಇನ್ನೂ ಶಿಸ್ತಿನ ಪಕ್ಷವಾಗಿ ಉಳಿದಿದೆ, ಶಿಸ್ತನ್ನು ಮೀರಿದವರ ಬಗ್ಗೆ ಏನು ಕ್ರಮ ಕೈಗೊಳ್ಳಬೇಕೋ ಅದನ್ನು ವರಿಷ್ಠರು ತೆಗೆದುಕೊಳ್ಳುತ್ತಿದ್ದಾರೆ. ಪಕ್ಷದೊಳಗಿನ ಅಸಮಾಧಾನಗಳನ್ನು ಪಕ್ಷದ ವರಿಷ್ಠರು ಪರಿಹರಿಸುತ್ತಾರೆ. ಪಕ್ಷದ ಸಂಘಟನೆ ವಿಚಾರದಲ್ಲಿ ರಾಷ್ಟ್ರೀಯ ನಾಯಕರು ಒಳ್ಳೆಯ ನಿರ್ಧಾರ ತೆಗೆದುಕೊಳ್ಳುತ್ತಾರೆ. ಅದಕ್ಕೆ ತಕ್ಕಂತೆ ನಾವೆಲ್ಲಾ ಕೆಲಸ ಮಾಡುತ್ತೇವೆ. ರಾಜ್ಯಾಧ್ಯಕ್ಷ ವಿಚಾರದಲ್ಲಿ ನಾನು ಏನೂ ಹೇಳುವುದಿಲ್ಲ ಎಂದರು.


**ಬಿಜೆಪಿ ಶಿಸ್ತಿನ ಪಕ್ಷ**

# ಇರಾಕ್‌ನ ಹೈಪರ್ ಮಾರ್ಕೆಟ್‌ನಲ್ಲಿ ಬೆಂಕಿ ದುರಂತ; 61 ಜನ ಸಾವು

**ಬಾಗ್ದಾದ್:** ಪೂರ್ವ ಇರಾಕ್‌ನಲ್ಲಿ ಸಂಭವಿಸಿದ ಭಾರೀ ಬೆಂಕಿ ಅವಘಡದಲ್ಲಿ ಕನಿಷ್ಠ 61 ಜನರು ಸಾವನ್ನಪ್ಪಿದ್ದಾರೆ. ಅಲ್ ಕುಟ್ ನಗರದ ಹೈಪರ್‌ಮಾರ್ಕೆಟ್‌ನಲ್ಲಿ ಈ ದುರ್ಘಟನೆ ಸಂಭವಿಸಿದೆ ಎಂದು ಈ ಪ್ರಾಂತ್ಯದ ಗವರ್ನರ್ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮಗಳಲ್ಲಿ ಈ ಘಟನೆಯ ವಿಡಿಯೋಗಳು ಹರಿದಾಡುತ್ತಿದ್ದು, ಬೆಚ್ಚಿ ಬೀಳಿಸುವಂತಿವೆ. ಅಲ್ - ಕುಟ್‌ನಲ್ಲಿರುವ ಈ ಐದು ಅಂತಸ್ತಿನ ಕಟ್ಟಡ ರಾತ್ರಿಯಿಡೀ ಬೆಂಕಿ ಉರಿಯುತ್ತಲೇ ಇತ್ತು. ಅಗ್ನಿಶಾಮಕ ದಳದವರು ಬೆಂಕಿಯನ್ನು ನಂದಿಸಲು ಭಾರೀ ಪ್ರಯತ್ನ ನಡೆಸಿ ಕೊನೆಗೂ ಯಶಸ್ವಿಯಾಗಿದ್ದಾರೆ.

ಘಟನೆಯಲ್ಲಿ ಭಾರೀ ಜನರು ಸಾವಿಗೀಡಾಗಿದ್ದು, ಬೆಂಕಿ ನಂದಿಸುವಲ್ಲಿ ಅಗ್ನಿ ಶಾಮಕ ದಳದವರು ಯಶಸ್ವಿಯಾಗಿದ್ದಾರೆ ಎಂದು ಗವರ್ನರ್ ಮೊಹಮ್ಮದ್ ಅಲ್ ಮಿಯಾಹಿ ನೀಡಿರುವ




ಹೇಳಿಯನ್ನು ಅಲ್ಲಿನ ಸರಕಾರಿ ಸುದ್ದಿ ಸಂಸ್ಥೆ (ಐಎನ್‌ಎ) ಗುರುವಾರ ವರದಿ ಮಾಡಿದೆ. ಘಟನೆಯ ವಿಡಿಯೋಗಳನ್ನು ಸ್ವತಂತ್ರವಾಗಿ ಪರಿಶೀಲಿಸಲು ಸಾಧ್ಯವಾಗಿಲ್ಲ ಎಂದು ರಾಯ್ಟರ್ಸ್ ಸುದ್ದಿ ಸಂಸ್ಥೆ ಹೇಳಿದೆ. ಬೆಂಕಿಗೆ ಕಾರಣ ಏನು ಎಂದು ತಕ್ಷಣವೇ ತಿಳಿದು ಬಂದಿಲ್ಲ.

**ಮೂರು ದಿನ ಶೋಕಾಚರಣೆ**

**ದುರಂತದ ಹಿನ್ನೆಲೆಯಲ್ಲಿ ಗವರ್ನರ್ ಮೊಹಮ್ಮದ್ ಅಲ್ ಮಿಯಾಹಿ ಮೂರು ದಿನಗಳ ಶೋಕಾಚರಣೆ ಘೋಷಿಸಿದ್ದಾರೆ. ಹಲವು ಜನರನ್ನು ಕಟ್ಟಡದಿಂದ ರಕ್ಷಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ಹೈಪರ್ ಮಾರ್ಕೆಟ್ ಕೇವಲ ಐದು ದಿನಗಳ ಹಿಂದೆಯಷ್ಟೇ ಆರಂಭವಾಗಿತ್ತು. ಅದೇ ಮಳಿಗೆ ಈಗ ಸುಟ್ಟು ಕರಕಲಾಗಿದೆ. ದುರಂತದ ಬೆಂಕಿಯಲ್ಲಿ 61 ಅಮಾಯಕ ನಾಗರಿಕರು ಸಾವನ್ನಪ್ಪಿದ್ದು, ಇವರಲ್ಲಿ ಹೆಚ್ಚಿನವರು ಸ್ನಾನಗೃಹಗಳಲ್ಲಿ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ. ಇದರಲ್ಲಿ ದೇಹಗಳು ಸುಟ್ಟು ಕರಕಲಾಗಿದ್ದು, 14 ದೇಹಗಳ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.**

ಆದರೆ ಪ್ರಾಥಮಿಕ ತನಿಖೆಯ ಫಲಿತಾಂಶಗಳನ್ನು 48 ಗಂಟೆಗಳ ಒಳಗೆ ಪ್ರಕಟಿಸಲಾಗುವುದು ಎಂದು ಗವರ್ನರ್ ಹೇಳಿರುವುದಾಗಿ ಐಎನ್‌ಎ ವರದಿ ಮಾಡಿದೆ. ಅಲ್ಲದೆ ಕಟ್ಟಡ ಮತ್ತು ಮಾಲ್‌ನ ಮಾಲೀಕರ ವಿರುದ್ಧ ಮೊಕದ್ದಮೆ ದಾಖಲಿಸಿದ್ದೇವೆ ಎಂದು ಅವರು ವಿವರ ನೀಡಿದ್ದಾರೆ. ನನ್ನ ಕುಟುಂಬದ ಐದು ಜನರು ಈ ದುರ್ಘಟನೆಯಲ್ಲಿ ಸಾವಿಗೀಡಾಗಿದ್ದಾರೆ ಎಂದು 50 ವರ್ಷದ ವೈದ್ಯ ನಾಸಿರ್ ಅಲ್ ಕುರೇಷಿ ಹೇಳಿದ್ದಾರೆ. ಮನೆಯಲ್ಲಿ ಕರೆಂಟ್ ಇಲ್ಲದೇ ಇದ್ದುದರಿಂದ ಊಟಕ್ಕಾಗಿ ಮಾಲ್‌ಗೆ ಬಂದಿದ್ದೆವು. ಈ ವೇಳೆ ಎರಡನೇ ಮಳಿಗೆಯಲ್ಲಿ ಎಸಿ ಸ್ಫೋಟಗೊಂಡಿತು. ಇದರಿಂದ ಕಟ್ಟಡಕ್ಕೆ ಬೆಂಕಿ ಹತ್ತಿಕೊಂಡಿತು ಎಂದು ಅವರು ವಿವರಿಸಿದ್ದಾರೆ.

## ಕನ್ಹಯ್ಯಾ ಹತ್ಯೆ : ತನಿಖೆ ವಿಳಂಬಕ್ಕೆ ಅಮಿತ್ ಶಾ ಸ್ಪಷ್ಟನೆ ನೀಡಲಿ; ಅಶೋಕ್ ಗೆಹಲೋತ್

**ಜೈಪುರ:** ನ್ಯಾಯಾಲಯದಲ್ಲಿ ಟೈಲರ್ ಕನ್ಹಯ್ಯಾ ಲಾಲ್ ಹತ್ಯೆ ಪ್ರಕರಣದ ವಿಚಾರಣೆ ವಿಳಂಬವಾಗುತ್ತಿರುವ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸ್ಪಷ್ಟಪಡಿಸಬೇಕು ಎಂದು ರಾಜಸ್ಥಾನದ ಮಾಜಿ ಸಿಎಂ ಅಶೋಕ್ ಗೆಹಲೋತ್ ಗುರುವಾರ ಹೇಳಿದ್ದಾರೆ. ಮೂರು ವರ್ಷಗಳಿಂದ ರಾಷ್ಟ್ರೀಯ ತನಿಖಾ ಸಂಸ್ಥೆ ತನಿಖೆ ನಡೆಸುತ್ತಿದ್ದು ಯಾವುದೇ ಪ್ರಗತಿ ಕಂಡುಬಂದಿಲ್ಲ, ಇದಕ್ಕೆ ಅಮಿತ್ ಶಾ ಉತ್ತರಿಸಬೇಕು ಎಂದು ಅವರು ಒತ್ತಾಯಿಸಿದರು. 2022ರ ಜೂನ್‌ನಲ್ಲಿ ಉದಯಪುರದಲ್ಲಿ ಕನ್ಹಯ್ಯಾ ಲಾಲ್ ಅವರನ್ನು ಇಬ್ಬರು ವ್ಯಕ್ತಿಗಳು ಚೂರಿಯಿಂದ ಬರ್ಬರವಾಗಿ ಹತ್ಯೆ ಮಾಡಿದ್ದರು. ಆ ಸಮಯದಲ್ಲಿ ಅಶೋಕ ಗೆಹಲೋತ್ ಮುಖ್ಯಮಂತ್ರಿಯಾಗಿದ್ದರು. ಘಟನೆ ನಡೆದ ನಾಲ್ಕು ಗಂಟೆಗಳ ಒಳಗೆ ರಾಜಸ್ಥಾನದ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದರು.

ಎನ್‌ಐಎ ರಾತ್ರಿಯೇ ಪ್ರಕರಣವನ್ನು ತನಿಖೆಗೆ ಕೈಗೆತ್ತಿಕೊಂಡಿತ್ತು. ಮೂರು ವರ್ಷಗಳು ಕಳೆದರೂ ಪ್ರಕರಣದ ಬಗ್ಗೆ ಯಾವುದೇ ಪ್ರಗತಿ ಸಾಧಿಸಲು ಎನ್‌ಐಎ ವಿಫಲವಾಗಿದೆ ಎಂದು ಅಶೋಕ್ ಗೆಹಲೋತ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. ಹಲವು ಪ್ರಕರಣಗಳಲ್ಲಿ ಕೆಲವೇ ತಿಂಗಳಲ್ಲಿ ನ್ಯಾಯಾಲಯಗಳು ತೀರ್ಪು ಪ್ರಕಟಿಸುತ್ತವೆ. ಆದರೆ ಈ ಪ್ರಕರಣ ಇನ್ನೂ ಬಾಕಿ ಇದೆ. ಸರ್ಕಾರದ ನಡೆಯ ಬಗ್ಗೆ ಜನರಲ್ಲಿ ಹಲವು ಪ್ರಶ್ನೆಗಳು ಹುಟ್ಟಿವೆ ಎಂದರು. ನಾವು ಕನ್ಹಯ್ಯಾ ಲಾಲ್ ಅವರ ಇಬ್ಬರು ಮಕ್ಕಳಿಗೆ ಸರ್ಕಾರಿ ನೌಕರಿ ಸೇರಿದಂತೆ 50 ಲಕ್ಷ ಮೊತ್ತದ ಪರಿಹಾರ ಪ್ಯಾಕೇಜ್ ನೀಡಿದ್ದೇವೆ. ಸ್ವಾತಂತ್ರ್ಯದ ನಂತರ ನೀಡಿದ ಅತಿದೊಡ್ಡ ಪರಿಹಾರ ಪ್ಯಾಕೇಜ್ ಇದಾಗಿದೆ ಎಂದರು.

## ಭಿಕ್ಷಾಟನೆ ಮಾಡುತ್ತಿರುವ ಮಕ್ಕಳ ಡಿಎನ್‌ಎ ಪರೀಕ್ಷೆಗೆ ಮುಂದಾದ ಪಂಜಾಬ್ ಸರ್ಕಾರ

**ಚಂಡೀಗಢ:** ವಯಸ್ಕರೊಂದಿಗೆ ಭಿಕ್ಷಾಟನೆ ಮಾಡುತ್ತಿರುವ ಮಕ್ಕಳ ಡಿಎನ್‌ಎ ಪರೀಕ್ಷೆ ನಡೆಸುವಂತೆ ಪಂಜಾಬ್ ಸರ್ಕಾರ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಿದೆ. ಆ ಮೂಲಕ ಮಕ್ಕಳ ಕಳ್ಳಸಾಗಣೆ ಮತ್ತು ಶೋಷಣೆ ವಿರುದ್ಧ ಕಠಿಣ ಕ್ರಮಕೈಗೊಳ್ಳಲು ಮುಂದಾಗಿದೆ. ಜೀವನ್‌ಜ್ಯೋತಿ-2 ಯೋಜನೆಯಡಿ ಸಾಮಾಜಿಕ ಭದ್ರತಾ ನಿರ್ದೇಶನಾಲಯ (ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ) ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈ ಸೂಚನೆ ನೀಡಿದೆ. ಡಿಎನ್‌ಎ ಪರೀಕ್ಷೆಯು ಮಕ್ಕಳು ಮತ್ತು ಅವರೊಂದಿಗೆ ಭಿಕ್ಷೆ ಬೇಡುತ್ತಿರುವ ವ್ಯಕ್ತಿಗಳ ನಡುವಿನ ಸಂಬಂಧವನ್ನು ಪತ್ತೆ ಮಾಡುವ ಉದ್ದೇಶವನ್ನು ಹೊಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಂದು ವೇಳೆ ಡಿಎನ್‌ಎ ಪರೀಕ್ಷೆಯಲ್ಲಿ ಭಿಕ್ಷಾಟನೆ ಮಾಡುತ್ತಿರುವ ಮಗು ಮತ್ತು ಮಗುವಿನ ಜೊತೆಯಿರುವ ವ್ಯಕ್ತಿಯ ನಡುವೆ ಯಾವುದೇ ಸಂಬಂಧವಿಲ್ಲ ಎಂದು ಕಂಡುಬಂದರೆ ಅಂತವರಿಗೆ ಕಠಿಣ ಶಿಕ್ಷೆ ನೀಡಲಾಗುವುದು ಎಂದೂ ಎಚ್ಚರಿಸಿದ್ದಾರೆ.

ಮಕ್ಕಳ ರಕ್ಷಣೆಗೆ ಸರ್ಕಾರ ಬದ್ಧವಾಗಿದ್ದು, ಮಕ್ಕಳ ಭಿಕ್ಷಾಟನೆ ತೊಡೆದುಹಾಕಲು ಕಠಿಣ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದ್ದಾರೆ.

# ಲೈವ್ ಬಿಟ್ಟು ಓಡಿದ ನಿರೂಪಕಿ


## ದಣಿವರಿಯದ ಇಸ್ರೇಲ್ ಸೇನಾ ಪಡೆಗಳಿಂದ ಸಿರಿಯಾ ಮೇಲೆ ದಾಳಿ

**ಡಮಾಸ್ಕಸ್:** ಇರಾನ್ ಜೊತೆ ಕಾದಾಡಿ ದಣಿಯದ ಇಸ್ರೇಲ್ ಇದೀಗ ಸಿರಿಯಾದತ್ತ ತನ್ನ ದೃಷ್ಟಿನೆಟ್ಟಿದೆ. ಇಸ್ರೇಲ್ ರಕ್ಷಣಾ ಪಡೆಗಳು ಸಿರಿಯಾ ರಾಜಧಾನಿ ಡಮಾಸ್ಕಸ್‌ನ ಹೃದಯಭಾಗದಲ್ಲಿರುವ ಪ್ರಮುಖ ಸಿರಿಯನ್ ಸೇನಾ ನೆಲೆಗಳ ಮೇಲೆ ವೈಮಾನಿಕ ದಾಳಿ ಮಾಡಿದೆ. ಸಿರಿಯಾದ ಅಧ್ಯಕ್ಷರ ಭವನ ಹಾಗೂ ಸೇನಾ ಪ್ರಧಾನ ಕಚೇರಿ ಮೇಲೂ ಇಸ್ರೇಲ್ ದಾಳಿ ನಡೆಸಿದೆ. ಸಿರಿಯಾದ ಗೋಲನ್ ಹೈಟ್ಸ್‌ನಲ್ಲಿ ವಾಸಿಸುವ ಡ್ರೂಜ್ ಸಮುದಾಯವನ್ನು ರಕ್ಷಿಸಲು, ಇಸ್ರೇಲ್ ಸಿರಿಯಾ ಮೇಲೆ ದಾಳಿ ಮಾಡಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಇಸ್ರೇಲ್ ಸೇನಾ ಪಡೆಗಳು ಗಾಜಾ ಪಟ್ಟಿಯಲ್ಲಿ ಹಮಾಸ್ ಜೊತೆಗೆ ನಿರಂತರವಾಗಿ ಕದಾಡುತ್ತಿದ್ದು, ಇತ್ತೀಚೆಗಷ್ಟೇ ಇರಾನ್ ಜೊತೆ 12 ದಿನಗಳ ಭೀಕರ ಸಮರದಲ್ಲಿ ಭಾಗಿಯಾಗಿದ್ದವು, ಅತ್ತ ಲೆಬನಾನ್‌ನಲ್ಲೂ ಹೌತಿ ಬಂಡುಕೋರರ ವಿರುದ್ಧ ಇಸ್ರೇಲ್ ಸೇನೆ ಕಾರ್ಯಾಚರಣೆ ನಡೆಸುತ್ತಿದೆ. ಸಿರಿಯಾ ಮೇಲಿನ ದಾಳಿಗಳ ಬಗ್ಗೆ ಖುದ್ದು ಮಾಹಿತಿ ನೀಡಿರುವ ಇಸ್ರೇಲ್ ಸೇನಾ ಪಡೆ, ಸಿರಿಯಾದ ಡಮಾಸ್ಕಸ್ ಪ್ರದೇಶದಲ್ಲಿರುವ ಸಿರಿಯನ್ ಆಡಳಿತದ ಮಿಲಿಟರಿ ಪ್ರಧಾನ ಕಚೇರಿಯ ಪ್ರವೇಶದ್ವಾರದ ಮೇಲೆ ಐಡಿಎಫ್ ದಾಳಿ ಮಾಡಿದೆ. ಅದೇ ರೀತಿ ಸಿರಿಯಾದ ಅಧ್ಯಕ್ಷರ ಭವನದ ಮೇಲೂ ದಾಳಿ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಿದೆ. ದಕ್ಷಿಣ ಸಿರಿಯಾದಲ್ಲಿ ಡ್ರೂಜ್ ನಾಗರಿಕರ ರಕ್ಷಣೆಗೆ ಕಟಿಬದ್ಧವಾಗಿರುವುದಾಗಿ ಐಡಿಎ ತಿಳಿಸಿದೆ. ರಾಜಕೀಯ ಶ್ರೇಣಿಯ ನಿರ್ದೇಶನಗಳಿಗೆ ಅನುಗುಣವಾಗಿ, ಐಡಿಎಫ್ ಈ ಪ್ರದೇಶದಲ್ಲಿ ದಾಳಿ ನಡೆಸುತ್ತಿದ್ದು, ಇಸ್ರೇಲ್ ದಾಳಿಗಳಿಗೆ ಸಿರಿಯಾ ಅಕ್ಷರಶಃ ನಿರುತ್ತರವಾಗಿದೆ.

**ಸಿರಿಯಾ ಮೇಲೆ ಮುಗಿಬಿದ್ದ ಐಡಿಎಫ್**

**ಲೈವ್ ಬಿಟ್ಟು ಓಡಿದ ನಿರೂಪಕಿ:** ಸಿರಿಯಾ ಮೇಲಿನ ತನ್ನ ವಾಯುದಾಳಿಯನ್ನು ಮತ್ತಷ್ಟು ಹೆಚ್ಚಿಸಿರುವ ಇಸ್ರೇಲ್ ವಾಯುಸೇನೆ, ಡಮಸ್ಕಸ್‌ನ ಪ್ರಮುಖ ಭಾಗಗಳಲ್ಲಿ ಭೀಕರ ದಾಳಿ ನಡೆಸುತ್ತಿದೆ. ಈ ವೇಳೆ ಸಿರಿಯಾದ ಮೇಲಿನ ಇಸ್ರೇಲ್ ದಾಳಿಯ ಕುರಿತು ವರದಿ ಬಿತ್ತರಿಸುತ್ತಿದ್ದ ದೃಶ್ಯ ಮಾಧ್ಯಮದ ನಿರೂಪಕಿಯೋರ್ವಳು, ತನ್ನ ಜೀವ ಉಳಿಸಿಕೊಳ್ಳಲು ಲೈವ್ ಕಾರ್ಯಕ್ರಮ ಬಿಟ್ಟು ಹೊರ ಓಡಿದ ಘಟನೆ ನಡೆದಿದೆ.

ಇಸ್ರೇಲ್ ದಾಳಿ ಸುದ್ದಿ ಪ್ರಸ್ತುತ ಪಡಿಸುತ್ತಿರುವಾಗಲೇ ಸ್ಫೋಟ ಸಂಭವಿಸಿದ್ದರಿಂದ ಕೂಡಲೇ ತಮ್ಮ ಕುರ್ಚಿಯಿಂದ ಮೇಲೆದ್ದು, ನಿರೂಪಕಿ ಓಡಿ ಹೋಗಿದ್ದಾರೆ. ಈ ದೃಶ್ಯಗಳು ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ವೈರಲ್ ಆಗಿದೆ. ಸುದ್ದಿ ಬಿತ್ತರಿಸುತ್ತಿದ್ದ ದೃಶ್ಯ ಮಾಧ್ಯಮದ ಎಲ್ಲಾ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.



**ಇಸ್ರೇಲ್-ಸಿರಿಯಾ ಸಂಘರ್ಷ**

**ಇಸ್ರೇಲ್ ದಕ್ಷಿಣ ಸಿರಿಯಾದಲ್ಲಿ ಸಿರಿಯನ್ ಭದ್ರತಾ ಪಡೆಗಳ ಮೇಲೆ ಸರಣಿ ವಾಯುದಾಳಿಗಳನ್ನು ನಡೆಸುತ್ತಿದೆ. ಸ್ವೀಡಾದ ಡ್ರೂಜ್ ಬಹುಸಂಖ್ಯಾತ ಪ್ರದೇಶದಲ್ಲಿ ಇಸ್ರೇಲಿ ಸೇನೆ ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸಿದೆ ಎಂದು ಸಿರಿಯಾದ ರಕ್ಷಣಾ ಸಚಿವಾಲಯ ಆರೋಪಿಸಿದೆ. ಆದರೆ ಸಿರಿಯನ್ ಪಡೆಗಳು ಡ್ರೂಜ್ ಸಮುದಾಯವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದು, ಡ್ರೂಜ್ ಸಮುದಾಯದ ರಕ್ಷಣೆಗಾಗಿ ಪ್ರತಿದಾಳಿ ಮಾಡಿರುವುದಾಗಿ ಇಸ್ರೇಲ್‌ನ ಐಡಿಎಫ್ ಹೇಳಿದೆ.**

**ಬಿಕ್ಕಟ್ಟು ಮತ್ತಷ್ಟು ಉಲ್ಬಣ**

**ಇರಾನ್ ಜೊತೆಗಿನ ಸಂಘರ್ಷ ಮುಗಿದ ಬೆನ್ನಲ್ಲೇ, ಇಸ್ರೇಲ್ ತನ್ನ ಗಮನವನ್ನು ಸಿರಿಯಾ ಕಡೆಗೆ ಹರಿಸಿದೆ. ರಾಜಧಾನಿ ಡಮಾಸ್ಕಸ್‌ನಲ್ಲಿರುವ ಅಧ್ಯಕ್ಷರ ಭವನ ಮತ್ತು ಸೇನಾ ಪ್ರಧಾನ ಕಚೇರಿ ಮೇಲೆ ವಾಯುದಾಳಿ ನಡೆಸಿದೆ. ಸಿರಿಯಾದಲ್ಲಿರುವ ಡ್ರೂಜ್ ಸಮುದಾಯದ ರಕ್ಷಣೆಗಾಗಿ ಈ ದಾಳಿ ನಡೆಸುತ್ತಿರುವುದಾಗಿ ಇಸ್ರೇಲ್ ಸ್ಪಷ್ಟಪಡಿಸಿದ್ದು, ಇದು ಮಧ್ಯಪ್ರಾಚ್ಯದಲ್ಲಿನ ಬಿಕ್ಕಟ್ಟನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ಈ ಮಧ್ಯೆ ಇಸ್ರೇಲ್ ದಾಳಿಯ ಬಗ್ಗೆ ವರದಿ ಬಿತ್ತರಿಸುತ್ತಿದ್ದ ಟಿವಿ ನಿರೂಪಕಿಯೋರ್ವಳು, ಮಾಧ್ಯಮ ಕಟ್ಟಡದ ಬಳಿ ಬಾಂಬ್ ಬಿದ್ದ ಪರಿಣಾಮ ಲೈವ್ ಕಾರ್ಯಕ್ರಮವನ್ನು ಬಿಟ್ಟು ಹೊರ ಓಡಿದ ಘಟನೆ ನಡೆದಿದೆ.**


ಈ ಕುರಿತು ಖುದ್ದು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಮಾಹಿತಿ ಪೋಸ್ಟ್ ಮಾಡಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಸಿರಿಯಾದ ಡ್ರೂಜ್ ಸಹೋದರರ ರಕ್ಷಣೆಗೆ ನಮ್ಮ ಐಡಿಎಫ್ ಕಟಿಬದ್ಧವಾಗಿದೆ. ಎಲ್ಲಾ ದಾಳಿಗಳನ್ನು ಎದುರಿಸಿ ನಾವು ಡ್ರೀಜ್‌ಸಮುದಾಯವನ್ನು ರಕ್ಷಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ.

ಒಟ್ಟಿನಲ್ಲಿ ಮಧ್ಯಪ್ರಾಚ್ಯದಲ್ಲಿ ಇಸ್ರೇಲ್ ನಿರಂತರವಾಗಿ ಕದನದಲ್ಲಿ ಮುಳುಗಿದ್ದು, ಸುತ್ತಲಿನ ಬಹುತೇಕ ರಾಷ್ಟ್ರಗಳೊಂದಿಗೆ ಮಿಲಿಟರಿ ಸಂಘರ್ಷದಲ್ಲಿ ನಿರತವಾಗಿದೆ. ಮಧ್ಯಪ್ರಾಚ್ಯದ ಬಿಕ್ಕಟ್ಟು ಜಾಗತಿಕ ಪರಿಣಾಮಗಳನ್ನು ಬೀರುತ್ತಿರುವುದು ಸ್ಪಷ್ಟವಾಗಿದೆ.

# ದೇಶದ ಸ್ವಚ್ಛ ನಗರ ಪ್ರಶಸ್ತಿ ಪಟ್ಟಿಯಲ್ಲಿ ಮೈಸೂರು

**ಹೊಸದಿಲ್ಲಿ:** ರಾಜಧಾನಿಯ ವಿಜ್ಞಾನ ಭವನದಲ್ಲಿ ಸ್ವಚ್ಛ ಸರ್ವೇಕ್ಷಣ್ 2024 - 25ನೇ ಸಾಲಿನ ಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ. ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ಕೊಡ ಮಾಡುವ ಪ್ರಶಸ್ತಿಯನ್ನು ಘೋಷಣೆ ಮಾಡಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

ಕಳೆದ ಆರ್ಥಿಕ ವರ್ಷದ ಪ್ರಶಸ್ತಿ ಇದಾಗಿದ್ದು, ಮಧ್ಯ ಪ್ರದೇಶದ ಇಂದೋರ್ ನಗರವು ದೇಶದ ಅತ್ಯಂತ ಸ್ವಚ್ಛ ನಗರಿ ಎನ್ನುವ ಹೆಮ್ಮೆಗೆ ಪಾತ್ರವಾಗಿದೆ. ಆ ಮೂಲಕ, ಸತತವಾಗಿ ಎಂಟನೇ ಬಾರಿಗೆ ಮೊದಲ ಸ್ಥಾನವನ್ನು ಉಳಿಸಿಕೊಂಡಿದೆ. ಎರಡನೇ ಮತ್ತು ಮೂರನೇ ಸ್ಥಾನವನ್ನು ಗುಜರಾತಿನ ಸೂರತ್, ಮಹಾರಾಷ್ಟ್ರದ ನವಿ ಮುಂಬಯಿ ನಗರ ಪಡೆದುಕೊಂಡಿದೆ. ಮೂರರಿಂದ ಹತ್ತು ಲಕ್ಷ ಜನಸಂಖ್ಯೆಯ ವಿಭಾಗದಲ್ಲಿ ಉತ್ತರ ಪ್ರದೇಶದ ನೋಯ್ಡಾ ಮೊದಲ ಸ್ಥಾನವನ್ನು ಪಡೆದಿದೆ. ಈ ಪಟ್ಟಿಯಲ್ಲಿ ಎರಡನೇ ಸ್ಥಾನ ಚಂಡೀಗಢ ಮತ್ತು ಮೂರನೇ ಸ್ಥಾನವನ್ನು ಕರ್ನಾಟಕದ ಮೈಸೂರು ನಗರ ಪಡೆದುಕೊಂಡಿದೆ.



ಹತ್ತು ಲಕ್ಷಕ್ಕಿಂತ ಮೇಲಿನ ಜನಸಂಖ್ಯೆಯ ನಗರದಲ್ಲಿ ಗುಜರಾತಿನ ಅಹಮದಾಬಾದ್ ಮೊದಲ ಸ್ಥಾನದಲ್ಲಿದೆ. ದೇಶದ ಪಟ್ಟಣಗಳು, ನಗರಗಳನ್ನು ಉತ್ತಮ ವಾಸಸ್ಥಾನಗಳನ್ನಾಗಿ ಮಾಡುವ ಉದ್ದೇಶದಿಂದ ಈ ಪ್ರಶಸ್ತಿಯನ್ನು ಆರಂಭಿಸಲಾಗಿತ್ತು. MoHUA ಇಲಾಖೆಯ ಮಾನದಂಡದ ಪ್ರಕಾರ, ಈ ಪಟ್ಟಿಯನ್ನು ಸಿದ್ದ ಪಡಿಸಲಾಗುತ್ತದೆ. 'ಸ್ವಚ್ಛ ಸರ್ವೇಕ್ಷಣ್' ಅಭಿಯಾನದ ಮೂಲ ಗುರಿ ದೊಡ್ಡ ಪ್ರಮಾಣದಲ್ಲಿ ಇದರಲ್ಲಿ ಸಾರ್ವಜನಿಕರನ್ನು ಭಾಗವಹಿಸಲು ಉತ್ತೇಜಿಸುವುದು. ಸ್ವಚ್ಛತೆ ಎಷ್ಟು ಮುಖ್ಯ ಎನ್ನುವುದನ್ನು ಸಮಾಜದ ಎಲ್ಲಾ ವರ್ಗದಲ್ಲಿ ಜಾಗೃತಿ ಮೂಡಿಸುವ ಉದ್ದೇಶವನ್ನು ಈ ಅಭಿಯಾನ ಹೊಂದಿದೆ. ಈ ಅಭಿಯಾನವನ್ನು ದೇಶದ ವಿವಿಧ ಸುಮಾರು 4,500 ನಗರ, ಪಟ್ಟಣಗಳಲ್ಲಿ ನಡೆಸಲಾಗುತ್ತದೆ. ಒಂಬತ್ತು ವರ್ಷಗಳ ಹಿಂದೆ ಪ್ರಶಸ್ತಿ ನೀಡುವ ಪದ್ದತಿಯನ್ನು ಆರಂಭಿಸಲಾಗಿದ್ದು, ಅದರಲ್ಲಿ ಎಂಟು ಬಾರಿ ಇಂದೋರ್ ಮೊದಲ ಸ್ಥಾನವನ್ನು ಪಡೆದಿದೆ. ಈ ಬಾರಿ ಸೂಪರ್ ಸ್ವಚ್ಛ ಲೀಗ್ ಮತ್ತು ಮೂರು ಸ್ವಚ್ಛ ನಗರ ಪ್ರಶಸ್ತಿಯನ್ನು ನೀಡಲಾಗಿತ್ತು. ಸ್ವಚ್ಛ ನಗರ ಯಾವುದು ಎನ್ನುವುದನ್ನು ಹತ್ತು ಮಾನದಂಡಗಳು, 54 ವಿವಿಧ ಸೂಚಕಗಳ ಮೂಲಕ ನಿರ್ಧಾರ ಮಾಡಲಾಗುತ್ತದೆ.

**ಮೂರನೇ ಸ್ಥಾನ ಮೈಸೂರು**

ಇದರಲ್ಲಿ, ನೈರ್ಮಲ್ಯ, ತ್ಯಾಜ್ಯ ನಿರ್ವಹಣೆ, ಒಳಚರಂಡಿ ವ್ಯವಸ್ಥೆ ಮುಂತಾದ ಮಾನದಂಡಗಳೂ ಪ್ರಮುಖವಾಗಿದೆ. ಒಟ್ಟಾರೆಯಾಗಿ ತಮ್ಮತಮ್ಮ ನಗರ ಪ್ರದೇಶಗಳನ್ನು ಸ್ವಚ್ಛವಾಗಿಡಲು ಸ್ಪರ್ಧೆಯಿರಲಿ, ಆ ಮೂಲಕ ದೇಶದ ಎಲ್ಲಾ ಭಾಗವು ಸ್ವಚ್ಛವಾಗಿರಲಿ ಎನ್ನುವುದು ಈ ಪ್ರಶಸ್ತಿ ನೀಡುವ ಪದ್ದತಿ ಆರಂಭವಾಗಲು ಮೂಲ ಕಾರಣ. ಒಟ್ಟಾರೆಯಾಗಿ ಸ್ವಚ್ಛ ಸರ್ವೇಕ್ಷಣ ಮುಖ್ಯ ಗುರಿ ಎಂದು ಇಲಾಖೆಯ ಅಧಿಕಾರಿಗಳು ವಿವರಿಸಿದ್ದಾರೆ.

## ಕೆಟ್ಟ ಹವಾಮಾನದಿಂದಾಗಿ ಅಮರನಾಥ ಯಾತ್ರೆ ಸ್ಥಗಿತ

**ಜಮ್ಮು:** 36 ಗಂಟೆಗಳಿಂದ ಕಣಿವೆಯಲ್ಲಿ ಮಳೆಯಾಗುತ್ತಿರುವುದರಿಂದ ಗುರುವಾರ ಅಮರನಾಥ ಯಾತ್ರೆ ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಕೆಲವು ಭಾಗಗಳಲ್ಲಿ ಹೆಚ್ಚಿನ ಮಳೆಯಾಗುವ ಬಗ್ಗೆ ಹವಾಮಾನ ಮುನ್ಸೂಚನೆ ನೀಡಲಾಗಿದೆ. ಗಂದೇರ್ಬಾಲ್ ಜಿಲ್ಲೆಯ ಯಾತ್ರೆಯ ಬಾಲ್ಟಲ್ ಮಾರ್ಗದಲ್ಲಿ ಭೂಕುಸಿತ ಸಂಭವಿಸಿ ಮಹಿಳಾ ಯಾತ್ರಿಕರೊಬ್ಬರು ಸಾವನ್ನಪ್ಪಿ, ಮೂವರು ಗಾಯಗೊಂಡಿದ್ದರು.

ಶ್ರೀ ಅಮರನಾಥಜಿ ಯಾತ್ರೆಯನ್ನು ಪಹಲ್ಗಾಮ್, ಬಾಲ್ಟಲ್ ಮೂಲ ಶಿಬಿರಗಳಿಂದ 17.07.2025ಕ್ಕೆ ಸ್ಥಗಿತಗೊಳಿಸಲಾಗಿದೆ. ಕಳೆದ ಎರಡು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ



ಎರಡೂ ಮಾರ್ಗಗಳಲ್ಲಿ ಹಳಿಗಳ ಪುನಃಸ್ಥಾಪನೆ ಕಾರ್ಯವನ್ನು ಕೈಗೊಳ್ಳುವ ಅವಶ್ಯಕತೆಯಿದೆ ಎಂದು ಕಾಶ್ಮೀರ ವಿಭಾಗೀಯ ಆಯುಕ್ತ ವಿಜಯ್ ಕುಮಾರ್ ಬಿದುರಿ ಹೇಳಿದರು.

ಆದಾಗ್ಯೂ, ನಿನ್ನೆ ರಾತ್ರಿ ಪಂಜಾಮಿ ಶಿಬಿರದಲ್ಲಿ ತಂಗಿದ್ದ ಯಾತ್ರಿಕರಿಗೆ ಬಿಆರ್‌ಒ ಮತ್ತು ಪರ್ವತ ರಕ್ಷಣಾ ತಂಡಗಳ ಸಮರ್ಪಕ ನಿಯೋಜನೆಯೊಂದಿಗೆ ಬಾಲ್ಟಲ್‌ಗೆ ಇಳಿಯಲು ಅವಕಾಶ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಬಾಲ್ಟಾಲ್, ಪಹಲ್ಗಾಮ್ ಮೂಲ ಶಿಬಿರಗಳಿಂದ ಯಾತ್ರೆಯನ್ನು ಪುನರಾರಂಭಿಸಲು ಗಡಿ ರಸ್ತೆಗಳ ಸಂಸ್ಥೆ ಹಳಿಗಳ ಮೇಲೆ ಭಾರೀ ಸಂಖ್ಯೆಯಲ್ಲಿ ಪುರುಷರು, ಯಂತ್ರೋಪಕರಣಗಳನ್ನು ನಿಯೋಜಿಸಿದೆ ಎಂದು ಭಿದೂರಿ ಹೇಳಿದರು. ಯಾತ್ರೆಗಾಗಿ ಇಲ್ಲಿಯವರೆಗೆ 4 ಲಕ್ಷಕ್ಕೂ ಹೆಚ್ಚು ಜನರು ಆನ್ ಲೈನ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಕಳೆದ ವರ್ಷ, ನೈಸರ್ಗಿಕವಾಗಿ ರೂಪುಗೊಂಡ ಹಿಮಲಿಂಗವನ್ನು ಹೊಂದಿರುವ ಗುಹಾ ದೇವಾಲಯದಲ್ಲಿ 5.10 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಪೂಜೆ ಸಲ್ಲಿಸಿದರು. 38 ದಿನಗಳ ತೀರ್ಥಯಾತ್ರೆ ಆ. 9ರಂದು ಕೊನೆಗೊಳ್ಳಲಿದೆ.

## ಅಮೆರಿಕದ ಅಲಾಸ್ಕಾದಲ್ಲಿ ಭೂಕಂಪ, ಸುನಾಮಿ ಎಚ್ಚರಿಕೆ

**ವಾಷಿಂಗ್ಟನ್:** ಅಮೆರಿಕದ ಕರಾವಳಿ ತೀರ ಅಲಾಸ್ಕಾದಲ್ಲಿ ಕಳೆದ ರಾತ್ರಿ 7.3 ತೀವ್ರತೆಯ ಭೂಕಂಪ ಸಂಭವಿಸಿದ್ದು, ಸುನಾಮಿ ಎಚ್ಚರಿಕೆ ನೀಡಲಾಗಿದೆ. ಸಮುದ್ರದ 36 ಕಿ.ಮೀ ಆಳದಲ್ಲಿ ಭೂಕಂಪ ಸಂಭವಿಸಿದೆ. ಅಲಾಸ್ಕಾ ಪರ್ಯಾಯ ದ್ವೀಪದ ಸ್ಯಾಂಡ್ ಪಾಯಿಂಟ್‌ನಿಂದ 87 ಕಿ.ಮೀ ದೂರದಲ್ಲಿ ಇದರ ಕೇಂದ್ರ ಬಿಂದು ಇತ್ತು ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ತಿಳಿಸಿದೆ. ಸಮುದ್ರದ ಕಡಿಮೆ ಆಳದಲ್ಲಿ ಸಂಭವಿಸಿದ ಭೂಕಂಪ ಇದಾಗಿದ್ದು, ಇದು ಹೆಚ್ಚು ಅಪಾಯಕಾರಿಯಾಗಿರುತ್ತವೆ.

ಈ ಹಿನ್ನೆಲೆ ಕರಾವಳಿಯ ಜನರು ಎತ್ತರದ ಪ್ರದೇಶಗಳಿಗೆ ಅಥವಾ ಒಳನಾಡಿಗೆ ಸ್ಥಳಾಂತರಗೊಳ್ಳಬೇಕು. ಕಡಲತೀರದಿಂದ ದೂರವಿರಬೇಕು ಎಂದು ಅಮೆರಿಕ ರಾಷ್ಟ್ರೀಯ ಹವಾಮಾನ ಸೇವಾ ಕೇಂದ್ರ ಎಚ್ಚರಿಕೆ ನೀಡಿದೆ. ಮಿಚಿಗನ್ ತಾಂತ್ರಿಕ ವಿಶ್ವವಿದ್ಯಾಲಯವು ಗಂಭೀರ ಹಾನಿಯನ್ನುಂಟುಮಾಡುವ ಸಾಮರ್ಥ್ಯವಿರುವ ಭೂಕಂಪ ಎಂದು ಹೇಳಿದೆ ಅದನ್ನು ರಿಕ್ಟರ್ ಮಾಪನದಲ್ಲಿ 7.0 ಮತ್ತು 7.9 ನಡುವೆ ತೀವ್ರತೆ ಎಂದು ಪರಿಗಣಿಸಲಾಗಿದೆ.




ಇಲ್ಲಿಯವರೆಗೆ, ಪ್ರತಿ ವರ್ಷ ಸುಮಾರು 10 ರಿಂದ 15 ಭೂಕಂಪಗಳು ವರದಿಯಾಗಿವೆ. ಸುಮಾರು 4,100 ಜನರು ವಾಸಿಸುವ ಮೀನುಗಾರಿಕಾ ಪಟ್ಟಣವಾದ ಉನಾಲಸ್ಕಾದಲ್ಲಿ, ಸ್ಥಳೀಯ ಅಧಿಕಾರಿಗಳು ನಿವಾಸಿಗಳು ಸಮುದ್ರ ಇಳಿಯದಂತೆ ಎಚ್ಚರಿಸಲಾಗಿದೆ. ಇದೇ ರೀತಿ ಕರಾವಳಿ ಭಾಗದ ಜನತೆಗೆ ಎಚ್ಚರಿಕೆ ಕರೆ ನೀಡಲಾಗಿದೆ, ಭೂಕಂಪನದಿಂದ ಅಹವಡೆ ಸಣ್ಣ ಮನೆ ಉರುಳಿದೆ ಆದರೆ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.

# ಪಾಕಿಸ್ತಾನದಿಂದ ಸ್ವಾತಂತ್ರ್ಯ ಪಡೆಯಲು ಬಲೂಚ್ ಸೇನೆ ಹೋರಾಟ

## ಪಾಕ್ ಸೇನೆ ಗುರಿಯಾಗಿಸಿಕೊಂಡು ಬಲೂಚ್ ವಿಮೋಚನಾ ಸೇನೆಯ ದಾಳಿ; 29 ಪಾಕ್ ಸೈನಿಕರ ಹತ್ಯೆ

**ಕ್ವೆಟ್ಟಾ:** ಪ್ರತ್ಯೇಕ ದೇಶಕ್ಕಾಗಿ ಬೇಡಿಕೆ ಇಟ್ಟು ಹೋರಾಟ ನಡೆಸುತ್ತಿರುವ ಬಲೂಚಿಸ್ತಾನದ ಬಲೂಚ್ ವಿಮೋಚನಾ ಸೇನೆ ಕಲತ್, ಕ್ವೆಟ್ಟಾ ಪ್ರದೇಶಗಳಲ್ಲಿ ಪಾಕಿಸ್ತಾನಿ ಸೇನೆಯನ್ನು ಗುರಿಯಾಗಿಸಿಕೊಂಡು ಎರಡು ಪ್ರತ್ಯೇಕ ಕಾರ್ಯಾಚರಣೆಗಳನ್ನು ನಡೆಸಿ, 29 ಪಾಕಿಸ್ತಾನಿ ಸೇನಾ ಸಿಬ್ಬಂದಿಯನ್ನು ಹತ್ಯೆ ಮಾಡಿದೆ. ಬಲೂಚ್ ವಿಮೋಚನಾ ಪಡೆ ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ಕಲತ್‌ನಲ್ಲಿ ಒಂದು ವ್ಯಾಪಕ ಕಾರ್ಯಾಚರಣೆಯನ್ನು ನಡೆಸಲಾಗಿದ್ದು, ಪಾಕಿಸ್ತಾನಿ ಸೇನೆಗೆ ಭಾರಿ ನಷ್ಟವಾಗಿದೆ. ಇನ್ನೊಂದೆಡೆ, ಕ್ವೆಟ್ಟಾದಲ್ಲಿ ಐಇಡಿ (ಸುಧಾರಿತ ಸ್ಫೋಟಕ ಸಾಧನ) ದಾಳಿ ನಡೆಸಲಾಗಿದೆ ಎಂದು ಹೇಳಿಕೊಂಡಿದೆ. ಪಾಕಿಸ್ತಾನದಿಂದ ಸ್ವಾತಂತ್ರ್ಯ ಪಡೆಯಲು ಬಲೂಚ್ ಸೇನೆ ಹೋರಾಡುತ್ತಿದೆ.

**ಕಲತ್‌ನಲ್ಲಿ ಪಾಕ್ ಸೇನೆಗೆ ಭಾರಿ ನಷ್ಟ:** ಬಲೂಚ್ ವಿಮೋಚನಾ ಪಡೆಯ ವಿಶೇಷ ಘಟಕವಾದ ಫತೇಹ್ ಸ್ಕ್ವಾಡ್ ಕಲತ್‌ನ ನಿಮ್ರಾಗ್ ಕ್ರಾಸಿಂಗ್‌ನಲ್ಲಿ ಪಾಕಿಸ್ತಾನಿ ಸೇನಾ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ಬಸ್ ಅನ್ನು ಗುರಿಯಾಗಿಸಿಕೊಂಡು ಸಶಸ್ತ್ರ ದಾಳಿ ನಡೆಸಿದೆ. ಈ ದಾಳಿಯಲ್ಲಿ 29 ಸೇನಾ ಸಿಬ್ಬಂದಿ ಸ್ಥಳದಲ್ಲೇ ಹತರಾಗಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬಲೂಚ್ ವಿಮೋಚನಾ ಪಡೆಯ ಗುಪ್ತಚರ ವಿಭಾಗವಾದ 'ಜಿರಾಬ್' ಒದಗಿಸಿದ ಮಾಹಿತಿಯ ಆಧಾರದ ಮೇಲೆ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಬಿಎಲ್‌ಎ ತಿಳಿಸಿದೆ. ಜಿರಾಬ್ ಕರಾಚಿಯಿಂದ



ಕ್ವೆಟ್ಟಾಕ್ಕೆ ತೆರಳುತ್ತಿದ್ದ ಈ ಬಸ್ ಅನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿತ್ತು. ಈ ಬಸ್‌ನಲ್ಲಿ ಖವಾಲಿ ಕಲಾವಿದರೂ ಇದ್ದರು ಎಂದು ಬಿಎಲ್‌ಎ ಸ್ಪಷ್ಟಪಡಿಸಿದೆ. ಈ ಕಲಾವಿದರು ನಮ್ಮ ಗುರಿಯಾಗಿರಲಿಲ್ಲ, ಆದರೆ ಅವರು ಆಕ್ರಮಿಸಿಕೊಂಡಿರುವ ಸೇನಾ ಸಿಬ್ಬಂದಿಯೊಂದಿಗೆ ಪ್ರಯಾಣಿಸುತ್ತಿದ್ದರು. ಈ ಸಂಬಂಧ ನಾವು ಈಗಾಗಲೇ ಸ್ಪಷ್ಟಪಡಿಸಿದ್ದೇವೆ, ಯಾವುದೇ ಹಾನಿಯನ್ನು ತಪ್ಪಿಸಲು ಆಕ್ರಮಿಸಿಕೊಂಡಿರುವ ಸೇನೆಯಿಂದ ಸುರಕ್ಷಿತ ದೂರವನ್ನು ಕಾಯ್ದುಕೊಳ್ಳಬೇಕು. ಒಂದು ವೇಳೆ ನಾಗರಿಕರು ಹತರಾದರೆ ನಾವು ಕಾರಣರಲ್ಲ. ನಮ್ಮ ಗುರಿ ಪಾಕಿಸ್ತಾನ ಸೇನೆಯೇ ನಮ್ಮ ಗುರಿಯಾಗಿದೆ ಬಲೂಚ್ ಸೇನೆ ಎಚ್ಚರಿಕೆ ನೀಡಿದೆ.

**ಪಾಕಿಸ್ತಾನ ಸೇನೆಯೇ ನಮ್ಮ ಗುರಿ**

**ಕ್ವೆಟ್ಟಾದಲ್ಲಿ ಭಾರೀ ಸ್ಫೋಟ:** ಇದೇ ವೇಳೆ, ಬಲೂಚ್ ವಿಮೋಚನಾ ಸೇನೆಯ ಸ್ವಾತಂತ್ರ್ಯ ಹೋರಾಟಗಾರರು ಕ್ವೆಟ್ಟಾದ ಹಜಾರ್ ಗಂಜಿ ಪ್ರದೇಶದಲ್ಲಿ ಪಾಕಿಸ್ತಾನಿ ಸೇನಾ ವಾಹನವನ್ನು ರಿಮೋಟ್ ನಿಯಂತ್ರಿತ ಐಇಡಿ ದಾಳಿಯ ಮೂಲಕ ಗುರಿಯಾಗಿಸಿದ್ದಾರೆ. ಈ ದಾಳಿಯಲ್ಲಿ ಇಬ್ಬರು ಸೇನಾ ಸಿಬ್ಬಂದಿ ಸ್ಥಳದಲ್ಲೇ ಹತರಾಗಿದ್ದು, ಏಳು ಮಂದಿ ಗಾಯಗೊಂಡಿದ್ದಾರೆ.

**ಬಲೂಚ್ ಸೇನೆ ದಾಳಿ ಮಾಡುತ್ತಿರುವುದೇಕೆ?:** ಬಲೂಚಿಸ್ತಾನದ ವಿಮೋಚನೆಗಾಗಿ ನಡೆಯುತ್ತಿರುವ ನಮ್ಮ ಸಶಸ್ತ್ರ ಹೋರಾಟದ ಮುಂದುವರಿಕೆಯಾಗಿದೆ ಎಂದು ಬಲೂಚ್ ವಿಮೋಚನಾ ಸೇನೆ ಹೇಳಿಕೊಂಡಿದೆ. ನಾವು ಮತ್ತೊಮ್ಮೆ ಬಲೂಚ್ ಜನರಿಗೆ ಮನವಿ ಮಾಡುತ್ತೇವೆ, ಆಕ್ರಮಿಸಿಕೊಂಡಿರುವ ಸೇನೆ, ಅದರ ಕೇಂದ್ರಗಳು, ಸ್ಥಾಪನೆಗಳಿಂದ ಸುರಕ್ಷಿತ ದೂರವನ್ನು ಕಾಯ್ದುಕೊಳ್ಳಿ, ಇದರಿಂದ ಯಾವುದೇ ಸಂಬಂಧವಿಲ್ಲದ ವ್ಯಕ್ತಿಗಳಿಗೆ ಹಾನಿಯಾಗುವುದಿಲ್ಲ. ನಮ್ಮ ಮಾತೃಭೂಮಿಯ ಆಕ್ರಮಣ ಮುಂದುವರಿದಿರುವವರೆಗೂ ನಾವು ನಮ್ಮ ದಾಳಿಯನ್ನು ಮುಂದುವರಿಸುತ್ತೇವೆ, ಪ್ರತಿಯೊಂದು ಹಂತದಲ್ಲೂ ಶತ್ರುಗಳನ್ನು ಅವರ ಅಪರಾಧಗಳಿಗೆ ಹೊಣೆಗಾರರನ್ನಾಗಿ ಮಾಡುತ್ತೇವೆ ಎಂದು ನಾವು ಪುನರುಚ್ಚರಿಸುತ್ತೇವೆ ಎಂದು ಬಲೂಚ್ ವಿಮೋಚನಾ ಪಡೆ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

- **ಬಲೂಚ್ ವಿಮೋಚನಾ ಸೇನೆ (ಬಿಎಲ್‌ಎ) ಕಲತ್ ಮತ್ತು ಕ್ವೆಟ್ಟಾ ಪ್ರದೇಶಗಳಲ್ಲಿ ನಡೆಸಿದ ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ 29 ಪಾಕಿಸ್ತಾನಿ ಸೇನಾ ಸಿಬ್ಬಂದಿಯನ್ನು ಹತ್ಯೆ ಮಾಡಿದೆ.**
- **ಬಲೂಚ್ ವಿಮೋಚನಾ ಸೇನೆಯ ವಿಶೇಷ ಘಟಕ 'ಫತೇಹ್ ಸ್ಕ್ವಾಡ್' ನೇತೃತ್ವದಲ್ಲಿ ಕಲತ್‌ನಲ್ಲಿ ಪಾಕಿಸ್ತಾನಿ ಸೇನೆ ಇದ್ದ ಬಸ್ ಅನ್ನು ಗುರಿಯಾಗಿಸಿಕೊಂಡು ನಡೆಸಿದೆ. ಈ ಬಸ್‌ನಲ್ಲಿ ಕಲಾವಿದರು ಕೂಡ ಪ್ರಯಾಣಿಸಿದ್ದರು.**
- **ಬಲೂಚ್ ವಿಮೋಚನಾ ಸೇನೆ, ತಮ್ಮ ಹೋರಾಟವನ್ನು ಮುಂದುವರಿಸುತ್ತಿರುವುದಾಗಿ ತಿಳಿಸಲು, ಪಾಕಿಸ್ತಾನಿ ಸೇನೆಯ ವಿರುದ್ಧ ತಮ್ಮ ದಾಳಿಗಳನ್ನು ಮುಂದುವರಿಸುತ್ತೇವೆ ಎಂದು ಸ್ಪಷ್ಟಪಡಿಸಿದೆ.**

**ಬಲೂಚ್ ಸೇನೆ ಎಚ್ಚರಿಕೆ**

**ಬಲೂಚಿಸ್ತಾನದಲ್ಲಿ ಪ್ರತ್ಯೇಕ ದೇಶಕ್ಕಾಗಿ ಹೋರಾಡುತ್ತಿರುವ ಬಲೂಚ್ ವಿಮೋಚನಾ ಸೇನೆ, ಕಲತ್ ಮತ್ತು ಕ್ವೆಟ್ಟಾ ಪ್ರದೇಶಗಳಲ್ಲಿ ಪಾಕಿಸ್ತಾನಿ ಸೇನೆಯ ಮೇಲೆ ದಾಳಿ ನಡೆಸಿದೆ. ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ 29 ಪಾಕಿಸ್ತಾನಿ ಸೇನಾ ಸಿಬ್ಬಂದಿಯನ್ನು ಹತ್ಯೆ ಮಾಡಲಾಗಿದೆ. ಕಲತ್‌ನಲ್ಲಿ ಸೇನಾ ಸಿಬ್ಬಂದಿ ಇದ್ದ ಬಸ್ ಮೇಲೆ ದಾಳಿ ಮಾಡಲಾಗಿದೆ. ಕ್ವೆಟ್ಟಾದಲ್ಲಿ ಸುಧಾರಿತ ಸ್ಫೋಟಕ ಸಾಧನದಿಂದ ವಾಹನವನ್ನು ಗುರಿಯಾಗಿಸಿ ಸ್ಫೋಟಿಸಲಾಗಿದೆ. ಬಲೂಚ್ ವಿಮೋಚನಾ ಸೇನೆ ಈ ದಾಳಿಯ ಹೊಣೆ ಹೊತ್ತುಕೊಂಡಿದೆ. ಪಾಕ್ ಸೇನೆ ಬಲೂಚಿಸ್ತಾನದಿಂದ ಹಿಂದೆ ಸರಿಯುವವರೆಗೂ ದಾಳಿಯನ್ನು ಮುಂದುವರಿಸುವುದಾಗಿ ಬಲೂಚ್ ಸೇನೆ ಎಚ್ಚರಿಕೆ ನೀಡಿದೆ.**

# ಮಿನಿ ನ್ಯೂಸ್

## ಹೈಟೆಕ್ ಸಾಧನಗಳನ್ನು ಬಳಸಿ ಸರ್ಕಾರಿ ನೇಮಕಾತಿ ಪರೀಕ್ಷೆಯಲ್ಲಿ ನಕಲು

**ಛತ್ತೀಸ್‌ಗಡ:** ಲೋಕೋಪಯೋಗಿ ಇಲಾಖೆಯ ಸಬ್ ಎಂಜಿನಿಯರ್ ನೇಮಕಾತಿ ಪರೀಕ್ಷೆಯಲ್ಲಿ ಹೈಟೆಕ್ ನಕಲು ಬಯಲಾಗಿದೆ. ಬಿಲಾಸ್ಪುರದ ರಾಮದುಲಾರೆ ಸರ್ಕಾರಿ ಸ್ವಾಮಿ ಆತಾನಂದ ಶಾಲೆಯಲ್ಲಿ ಇತ್ತೀಚೆಗೆ ನಡೆದ ಪರೀಕ್ಷೆಗೆ ಹಾಜರಾಗಿದ್ದ ಅಭ್ಯರ್ಥಿಗೆ ಹೊರಗೆ ಆಟೋದಲ್ಲಿ ಬುರ್ಖಾತೊಟ್ಟು ಕೂತಿದ್ದ ಯುವತಿ ಲ್ಯಾಪ್‌ಟಾಪ್, ಎಲೆಕ್ಟ್ರಾನಿಕ್ ಸಾಧನ ಮೂಲಕ ಉತ್ತರಗಳನ್ನು ಹೇಳುತ್ತಿರುವುದು ಬಹಿರಂಗಗೊಂಡಿದೆ.

ರಾಜ್ಯದ ಹಲವು ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಈ ನೇಮಕಾತಿ ಪರೀಕ್ಷೆಯಲ್ಲಿ ಇಬ್ಬರು ಯುವತಿಯರು ನಕಲು ಮಾಡುತ್ತಿದ್ದಾಗ ಸಿಕ್ಕಿಬಿದ್ದಿದ್ದಾರೆ. ಒಬ್ಬರಿಗೆ ಆಟೋದಲ್ಲಿ ವಾಯ್ಸ್ ಕಾಲ್ ಮೂಲಕ ಉತ್ತರ ಕಳುಹಿಸಿದರೆ ಮತ್ತೊಬ್ಬರಿಗೆ ಎಲೆಕ್ಟ್ರಾನಿಕ್ ಸಾಧನ ಮೂಲಕ ವಾಕಿಟಾಕಿ ಬಳಸಿಕೊಂಡು ಉತ್ತರಗಳನ್ನು ಕಳುಹಿಸುತ್ತಿದ್ದದ್ದು ಗೊತ್ತಾಗಿದೆ. ಸ್ಥಳೀಯ ಎನ್‌ಎಸ್‌ಯುಐ ವಿದ್ಯಾರ್ಥಿ ಸಂಘಟನೆ ಈ ಅಕ್ರಮವನ್ನು ಬೆಳಕಿಗೆ ತಂದಿದ್ದು, ಪ್ರಸ್ತುತ ಅಕ್ರಮಕ್ಕೆ ಬಳಸಿದ್ದ ಎಲೆಕ್ಟ್ರಾನಿಕ್ ವಸ್ತುಗಳು, ಹೈಟೆಕ್ ಗ್ಯಾಜೆಟ್‌ಗಳನ್ನು ವಶಪಡಿಸಿಕೊಂಡು ವಿಚಾರಣೆ ನಡೆಸಲಾಗುತ್ತಿದೆ. ಛತ್ತೀಸ್‌ಗಡದ ಸಿಎಂ ವಿಷ್ಣುದೇವ್ ಸಾಯಿ ಅವರ ತವರು ಜಿಲ್ಲೆಯಲ್ಲಿ ಈ ಅಕ್ರಮ ಬಯಲಿಗೆ ಬಂದಿದ್ದು ಭಾರಿ ಸಂಚಲನ ಮೂಡಿಸಿದೆ.

## ಸೆಪ್ಟೆಂಬರ್‌ನಲ್ಲಿ ಪಾಕಿಸ್ತಾನಕ್ಕೆ ಅಮೆರಿಕ ಅಧ್ಯಕ್ಷ ಟ್ರಂಪ್ ಭೇಟಿ ಸಾಧ್ಯತೆ

**ಇಸ್ಲಾಮಾಬಾದ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸೆಪ್ಟೆಂಬರ್‌ನಲ್ಲಿ ಪಾಕಿಸ್ತಾನಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ ಎಂದು ಇಲ್ಲಿನ ಸ್ಥಳೀಯ ಸುದ್ದಿ ವಾಹಿನಿಗಳು ಗುರುವಾರ ವರದಿ ಮಾಡಿವೆ. ಒಂದು ವೇಳೆ ಅವರ ಭೇಟಿ ಖಚಿತವಾದರೆ, ಸುಮಾರು ಎರಡು ದಶಕಗಳ ನಂತರ ಅಮೆರಿಕದ ಅಧ್ಯಕ್ಷರೊಬ್ಬರು ಭೇಟಿ ನೀಡುತ್ತಿರುವುದು ಇದೇ ಮೊದಲು. ಟ್ರಂಪ್ ಭೇಟಿಯ ಬಗ್ಗೆ ತಿಳಿದಿಲ್ಲ ಎಂದು ಪಾಕಿಸ್ತಾನದ ವಿದೇಶಾಂಗ ಕಚೇರಿಯ ವಕ್ತಾರರು ಹೇಳಿದ್ದಾರೆ. ಸೆಪ್ಟೆಂಬರ್‌ನಲ್ಲಿ ಇಸ್ಲಾಮಾಬಾದ್‌ಗೆ ಭೇಟಿ ನೀಡಲಿರುವ ಟ್ರಂಪ್, ಬಳಿಕ ಭಾರತಕ್ಕೂ ಭೇಟಿ ನೀಡಲಿದ್ದಾರೆ ಎಂದು ಅಲ್ಲಿನ ಸುದ್ದಿ ವಾಹಿನಿಗಳು ವರದಿ ಮಾಡಿವೆ.

## ಮಲೇಷ್ಯಾದಲ್ಲಿ ಗೇ ಪಾರ್ಟಿ ಮೇಲೆ ದಾಳಿ: ಹತ್ತಾರು ಪುರುಷರ ಬಂಧನ

**ಕ್ವಾಲಾಲಂಪುರ:** ಮಲೇಷ್ಯಾದ ಈಶಾನ್ಯ ರಾಜ್ಯವಾದ ಕೆಲಂಟಾನ್ ನಗರದಲ್ಲಿ ಆಯೋಜನೆಗೊಂಡಿದ್ದ 'ಗೇ ಪಾರ್ಟಿ' ಮೇಲೆ ದಾಳಿ ನಡೆಸಿರುವ ಪೊಲೀಸರು ಹತ್ತಾರು ಪುರುಷರನ್ನು ಗುರುವಾರ ಬಂಧಿಸಿದ್ದಾರೆ. ಮುಸ್ಲಿಂ ಪ್ರಾಬಲ್ಯವಿರುವ ಮಲೇಷ್ಯಾದಲ್ಲಿ ಸಲಿಂಗಕಾಮ ಅಪರಾಧ ಎಂದೇ ಪರಿಗಣಿಸಲಾಗುತ್ತದೆ. ಲೆಸ್ಬಿಯನ್, ಗೇ, ಬೈಸೆಕ್ಸುಯಲ್ ಮತ್ತು ಲಿಂಗತ್ವ ಅಲ್ಪಸಂಖ್ಯಾತರತ್ತ ಹೆಚ್ಚುತ್ತಿರುವ ಅಸಿಹಿಷ್ಣುತೆ ಕುರಿತು ಬಲಪಂಥೀಯರು ಸರ್ಕಾರವನ್ನು ಎಚ್ಚರಿಸಿದ್ದರು. ಇದರ ಬೆನ್ನಲ್ಲೇ ನಡೆದ ಈ ದಾಳಿಯಲ್ಲಿ 20ಕ್ಕೂ ಹೆಚ್ಚು ಪುರುಷರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಸ್ಥಳವನ್ನು ಬಾಡಿಗೆ ಪಡೆದಿದ್ದ ಗೇ ಗುಂಪು, ಅಲ್ಲಿ ಪಾರ್ಟಿ ಆಯೋಜಿಸಿದ್ದರು. ಸ್ಥಳದಲ್ಲಿ ಕಾಂಡೋಮ್‌ಗಳು, ಎಚ್‌ಐವಿ ಔಷಧಗಳು ಪತ್ತೆಯಾಗಿವೆ. ಆದರೆ ಲೈಂಗಿಕ ಕ್ರಿಯೆ ನಡೆದ ಕುರಿತು ಯಾವುದೇ ಪುರಾವೆಗಳು ಲಭ್ಯವಾಗಿಲ್ಲ. ಬಂಧಿತರಲ್ಲಿ ಕೆಲವರ ಮೊಬೈಲ್‌ಗಳಲ್ಲಿ ಸಲಿಂಗಕಾಮಕ್ಕೆ ಸಂಬಂಧಿಸಿದಂತೆ ಅಶ್ಲೀಲ ದೃಶ್ಯಗಳು ದೊರೆತಿವೆ ಎಂದು ಪೊಲೀಸರು ಹೇಳಿದ್ದಾರೆ.

ಇಂಥ ವರ್ತನೆಗಳು ಆತಂಕ ಮೂಡಿಸಿವೆ. ಗೇ ಸಮುದಾಯದ ಚಲನವಲನಗಳ ಕುರಿತು ನಿರಂತರ ನಿಗಾ ವಹಿಸಲಾಗುವುದು ಎಂದು ಪೊಲೀಸರು ಹೇಳಿದ್ದಾರೆ. ಎಲ್‌ಜಿಬಿಟಿಕ್ಯೂ ಸಮುದಾಯದ ಮೇಲಿನ ದಾಳಿ ಮಲೇಷ್ಯಾದಲ್ಲಿ ಹೆಚ್ಚಿಸಲಾಗಿದೆ. ಇಸ್ಲಾಮ್‌ನ ಷರಿಯಾ ಕಾನೂನಿನಲ್ಲಿ ಸಲಿಂಗಕಾಮ ಮತ್ತು ಪುರುಷರು ಮಹಿಳೆಯರಂತೆ ಹಾಗೂ ಮಹಿಳೆಯರು ಪುರುಷರಂತೆ ಉಡುಪು ಧರಿಸುವುದನ್ನು ನಿಷೇಧಿಸಲಾಗಿದೆ. 2023ರಲ್ಲಿ ಆಯೋಜನೆಗೊಂಡಿದ್ದ ಸಂಗೀತ ಕಾರ್ಯಕ್ರಮದಲ್ಲಿ 'ದಿ 1975' ಬ್ರಿಟಿಷ್ ಪಾಪ್ ಗಾಯಕ ತನ್ನ ತಂಡದ ಸದಸ್ಯನನ್ನು ವೇದಿಕೆಯಲ್ಲೇ ಚುಂಬಿಸಿದ್ದರು. ಜತೆಗೆ ಮಲೇಷ್ಯಾದ ಎಲ್‌ಜಿಬಿಟಿಕ್ಯೂ ವಿರೋಧಿ ಕಾನೂನನ್ನು ಖಂಡಿಸಿದ್ದರು. 2018ರಲ್ಲಿ ಲೆಸ್ಬಿಯನ್‌ಗಳು ನ್ಯಾಯಾಲಯದಲ್ಲೇ ಬಹಿರಂಗವಾಗಿ ಪ್ರಣಯಕೇಳಿ ನಡೆಸಿದ್ದರು. ಇದಕ್ಕಾಗಿ ಇವರಿಗೆ ಶಿಕ್ಷೆ ವಿಧಿಸಲಾಗಿತ್ತು.

## ನಿಮಿಷಗೆ ಗಲ್ಲು: ಯೆಮನ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿರುವುದಾಗಿ ತಿಳಿಸಿದ ಭಾರತ

**ನವದೆಹಲಿ:** ನಿಮಿಷ ಪ್ರಿಯಾ ಪ್ರಕರಣಕ್ಕೆ ಸಂಬಂಧಿಸಿದಂತೆ ಯೆಮನ್‌ನಲ್ಲಿರುವ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿರುವುದಾಗಿ ಭಾರತದ ವಿದೇಶಾಂಗ ಸಚಿವಾಲಯ ಗುರುವಾರ ತಿಳಿಸಿದೆ. ಇದೊಂದು ಸೂಕ್ಷ್ಮ ವಿಷಯವಾಗಿದ್ದು, ಈ ಪ್ರಕರಣದಲ್ಲಿ ಸಾಧ್ಯವಿರುವ ಎಲ್ಲಾ ಸಹಕಾರವನ್ನು ಕೇಂದ್ರ ಸರ್ಕಾರ ನೀಡುತ್ತಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ಕಾನೂನು ನೆರವು ನೀಡುವುದರ ಜೊತೆಗೆ ನಿಮಿಷ ಕುಟುಂಬಕ್ಕೆ ಸಹಾಯ ಮಾಡಲು ವಕೀಲರನ್ನು ನೇಮಿಸಿದ್ದೇವೆ. ಗಲ್ಲು ಶಿಕ್ಷೆಯಿಂದ ಪಾರು ಮಾಡಲು ಯೆಮನ್‌ನ ಸ್ಥಳೀಯ ಅಧಿಕಾರಿಗಳು ಮತ್ತು ನಿಮಿಷ ಕುಟುಂಬದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ ಎಂದು ತಿಳಿಸಿದ್ದಾರೆ. ಈ ಪ್ರಕರಣವನ್ನು ಸೂಕ್ಷ್ಮವಾಗಿ ಅವಲೋಕಿಸುತ್ತಿದ್ದು, ಸಾಧ್ಯವಿರುವ ಎಲ್ಲಾ ಸಹಾಯವನ್ನು ನೀಡುತ್ತಿದ್ದೇವೆ. ಕೆಲವು ಸ್ನೇಹಪರ ಸರ್ಕಾರಗಳೊಂದಿಗೂ ಸಂಪರ್ಕದಲ್ಲಿದ್ದೇವೆ ಎಂದು ಮಾಹಿತಿ ನೀಡಿದ್ದಾರೆ. ಯೆಮನ್ ಪ್ರಜೆಯನ್ನು ಕೊಲೆ ಮಾಡಿದ ಆರೋಪದ ಮೇಲೆ 2020ರಲ್ಲಿ ಅಲ್ಲಿನ ವಿಚಾರಣಾ ನ್ಯಾಯಾಲಯ ಕೇರಳ ಮೂಲದ ನರ್ಸ್ ನಿಮಿಷಾಗೆ ಗಲ್ಲು ಶಿಕ್ಷೆ ವಿಧಿಸಿತ್ತು. 2023ರಲ್ಲಿ ಯೆಮನ್ ಸುಪ್ರೀಂ ಕೋರ್ಟ್ ಈ ಶಿಕ್ಷೆಯನ್ನು ಎತ್ತಿ ಹಿಡಿದಿತ್ತು. ಇದೇ ಜುಲೈ 16ರಂದು ನಿಮಿಷಳನ್ನು ಗಲ್ಲಿಗೇರಿಸಲು ನಿರ್ಧರಿಸಲಾಗಿತ್ತು. ಮುಸ್ಲಿಂ ಮುಖಂಡರ ಮಧ್ಯ ಪ್ರವೇಶದಿಂದ ಕೊನೆ ಕ್ಷಣದ ಮಾತುಕತೆ ಫಲಪ್ರದವಾಗಿದ್ದು ಸದ್ಯ ಗಲ್ಲು ಶಿಕ್ಷೆ ಮುಂದೂಡಲ್ಪಟ್ಟಿದೆ.

## ಪತ್ರಕರ್ತ ಅಜಿತ್ ಮೇಲೆ ಎಫ್‌ಐಆರ್

**ನವದೆಹಲಿ:** ಬಿಹಾರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಬಗ್ಗೆ ವರದಿ ಮಾಡಿದ ಪತ್ರಕರ್ತ ಅಜಿತ್ ಅಂಜುಮ್ ವಿರುದ್ಧ ಎಫ್‌ಐಆರ್ ದಾಖಲಿಸಿದ ಕ್ರಮವನ್ನು ಭಾರತ ಎಡಿಟರ್ಸ್ ಗಿಲ್ಡ್ ಖಂಡಿಸಿದೆ. ಇದೊಂದು 'ಅತಿಯಾದ ಕ್ರಮ ಎಂದು ಹೇಳಿದೆ. ಬಿಹಾರದಲ್ಲಿ ವರದಿ ಮಾಡುತ್ತಿದ್ದ ಅಂಜುಮ್ ಮೇಲೆ ಎಫ್ ಐಆರ್ ದಾಖಲಿಸಿದ್ದು ತೀವ್ರ ತೊಂದರೆಗೀಡು ಮಾಡಿದೆ ಎಂದು ಗಿಲ್ಡ್ ಪ್ರಕಟಣೆಯಲ್ಲಿ ತಿಳಿಸಿದೆ. ಅಂಜುಮ್ ಅವರ ವರದಿಯ ವಸ್ತುವನ್ನು ನಾವು ಸಮರ್ಥಿಸಿಕೊಳ್ಳುತ್ತಿಲ್ಲ. ಆದರೆ ಕಾನೂನುಬದ್ಧ ಪತ್ರಿಕೋದ್ಯಮ ಎಂದು ತೋರುವ ಕೃತ್ಯದ ಬಗ್ಗೆ ಎಫ್‌ಐಆರ್ ದಾಖಲಿಸಿರುವುದು ಅತಿಯಾದ ಕ್ರಮ ಎಂದು ಗಿಲ್ಡ್ ಹೇಳಿದೆ.






# ಕಿರಣ್ ರಾಜ್‌ಗೆ ನಾಯಕಿಯಾದ ಉಡಾಳ ಹುಡುಗಿ

ಕಿರಣ್ ರಾಜ್ ನಾಯಕನಾಗಿ ನಟಿಸುತ್ತಿರುವ ಜಾಕಿ-42 ಚಿತ್ರಕ್ಕೆ ಹೃತಿಕಾ ಶ್ರೀನಿವಾಸ್ ನಾಯಕಿಯಾಗಿ ಆಯ್ಕೆ ಯಾಗಿದ್ದಾರೆ. ಮಾಡರ್ನ್ ಹಾಗೂ ಹೋಮ್ಲಿ ಎರಡು ಶೇಡ್ ಇರುವ ಪಾತ್ರ ಇದಾಗಿದೆ. ಹೃತಿಕ ಶ್ರೀನಿವಾಸ್, ಯೋಗರಾಜ್ ಭಟ್ ಸಿನಿಮಾಸ್ ಹಾಗೂ ರವಿ ಶಾಮನೂರು ನಿರ್ಮಾಣದ ಉಡಾಳ ಚಿತ್ರದಲ್ಲಿ ನಾಯಕಿಯಾಗಿ ಅಭಿನಯಿಸಿದ್ದಾರೆ.

ಸದ್ಯ ತೆಲುಗು ಚಿತ್ರವೊಂದರ ಚಿತ್ರೀಕರಣದಲ್ಲಿ ಬ್ಯುಸಿ ಆಗಿರುವ ಅವರು ಸದ್ಯದಲ್ಲೇ ಜಾಕಿ-42 ಚಿತ್ರ ತಂಡ ಸೇರಿಕೊಳ್ಳಲಿದ್ದಾರೆ. ಜಾಕಿ-42 ಹಾರ್ಸ್ ರೇಸ್ ಹಿನ್ನೆಲೆಯಲ್ಲಿ ಕಥೆ ಸಾಗುತ್ತದೆ. ಗೋಲ್ಡನ್ ಗೇಟ್ ಸ್ಟುಡಿಯೋಸ್ ಬ್ಯಾನರ್‌ನಲ್ಲಿ ಭಾರತಿ ಸತ್ಯನಾರಾಯಣ ಈ ಚಿತ್ರ ನಿರ್ಮಿಸುತ್ತಿದ್ದಾರೆ. ತೆಲುಗು ಹಾಗೂ ತಮಿಳಿನ ಜನಪ್ರಿಯ ಚಿತ್ರಗಳಿಗೆ ಸಂಗೀತ ನೀಡಿರುವ ಖ್ಯಾತ ಸಂಗೀತ ನಿರ್ದೇಶಕ ವಿನೋದ್ ಯಜಮಾನಿ ಜಾಕಿ-42ಗೆ ಸಂಗೀತ ನೀಡುತ್ತಿದ್ದಾರೆ. ತಂತ್ರಜ್ಞರ ತಂಡದಲ್ಲಿ ರಾಘವೇಂದ್ರ ಬಿ ಕೋಲಾರ್, ಉಮೇಶ್ ಆರ್ ಬಿ, ಸತೀಶ್ ಪೆರ್ಡೂರು ಕೆಲಸ ಮಾಡುತ್ತಿದ್ದಾರೆ. ಕನ್ನಡ, ತಮಿಳು ಹಾಗೂ ತೆಲುಗಿನ ಹೆಸರಾಂತ ಕಲಾವಿದರು ತಾರಾಗಣದಲ್ಲಿದ್ದಾರೆ. ಈಗಾಗಲೇ ಹಾರ್ಸ್ ರೇಸ್ ಭಾಗದ ಚಿತ್ರೀಕರಣ ಬೆಂಗಳೂರಿನಲ್ಲಿ ನೆಡೆಯುತ್ತಿದೆ. ಸದ್ಯದಲ್ಲೇ ಚಿತ್ರದ ಟೀಸರ್ ಬಿಡುಗಡೆಯಾಗಲಿದೆ ಎಂದು ನಿರ್ದೇಶಕ ಗುರುತೇಜ್ ಶೆಟ್ಟಿ ತಿಳಿಸಿದ್ದಾರೆ.

ಸಿನಿ ವಾಹಿನಿ



# ಕಾರಣ ತಿಳಿಸಿದ ಪ್ರಭಾಸ್


## ಹೊಂಬಾಳೆ ಜೊತೆಗೆ 3 ಸಿನಿಮಾಕ್ಕೆ ಒಪ್ಪಂದ

ಪ್ರಭಾಸ್ ಜೊತೆಗೆ ಸಿನಿಮಾ ಮಾಡಲು ದೊಡ್ಡ-ದೊಡ್ಡ ನಿರ್ಮಾಪಕರು ಚೆಕ್ ಬುಕ್ ಹಿಡಿದುಕೊಂಡು ಸಾಲುಗಟ್ಟಿ ನಿಂತಿದ್ದಾರೆ. ಆದರೆ ಪ್ರಭಾಸ್ ಯಾರಿಗೂ ಸಹ ಅಷ್ಟು ಸುಲಭಕ್ಕೆ ಡೇಟ್ಸ್ ನೀಡುವುದಿಲ್ಲ. ತೆಲುಗಿನ ಹಳೆಯ ನಿರ್ಮಾಪಕರಿಗೇ ಸೊಪ್ಪು ಹಾಕದ ನಟ ಪ್ರಭಾಸ್, ಕರ್ನಾಟಕದ ನಿರ್ಮಾಣ ಸಂಸ್ಥೆ ಹೊಂಬಾಳೆ ಜೊತೆಗೆ ಮೂರು ಸಿನಿಮಾಗಳಿಗೆ ಒಟ್ಟಿಗೆ ಒಪ್ಪಂದ ಮಾಡಿಕೊಂಡಿದ್ದಾರೆ. ಅದೇಕೆಂದು ಅವರೇ ಹೇಳಿದ್ದಾರೆ. ನಟ ಪ್ರಭಾಸ್ ಜೊತೆ ಸಿನಿಮಾ ಮಾಡಲು ದೊಡ್ಡ ದೊಡ್ಡ ಸಿನಿಮಾ ನಿರ್ಮಾಪಕರು ಕಾತರರಾಗಿ ಕಾಯುತ್ತಿದ್ದಾರೆ. ಪ್ರಭಾಸ್ ಕೇಳಿದಷ್ಟು ಹಣವನ್ನು ಸಂಭಾವನೆಯಾಗಿ ಕೊಡಲು ಬಾಲಿವುಡ್ ನಿರ್ಮಾಪಕರೇ ಸಾಲುಗಟ್ಟಿದ್ದಾರೆ. ಆದರೆ ಪ್ರಭಾಸ್ ಸಿಕ್ಕ ಸಿಕ್ಕವರಿಗೆಲ್ಲ ಡೇಟ್ಸ್ ಕೊಡುವುದಿಲ್ಲ. ಪ್ರಭಾಸ್‌ಗೆ ಸಿನಿಮಾದ ಕತೆ, ತಮ್ಮ ಪಾತ್ರದ ಜೊತೆಗೆ ಯಾವ ಬ್ಯಾನರ್‌ಗಾಗಿ ಕೆಲಸ ಮಾಡುತ್ತಿದ್ದೀನಿ ಎಂಬುದು ಸಹ ಅಷ್ಟೆ ಮುಖ್ಯ. ಅಳೆದು ತೂಗಿ ನಿರ್ಮಾಪಕರನ್ನು ಆಯ್ಕೆ ಮಾಡುವ ಪ್ರಭಾಸ್, ಹೊಂಬಾಳೆ ಜೊತೆಗೆ ಒಂದೇ ಬಾರಿಗೆ ಮೂರು ಸಿನಿಮಾಕ್ಕೆ ಒಪ್ಪಂದ ಮಾಡಿಕೊಂಡಿದ್ದಾರೆ! ಹೌದು, ನಟ ಪ್ರಭಾಸ್, ಹೊಂಬಾಳೆ ಫಿಲಮ್ಸ್ ನಿರ್ಮಾಣ ಸಂಸ್ಥೆಯೊಟ್ಟಿಗೆ ಬರೋಬ್ಬರಿ ಮೂರು ಸಿನಿಮಾಕ್ಕೆ ಸಹಿ ಹಾಕಿದ್ದಾರೆ. ಅದೂ ಸಿನಿಮಾದ ಕತೆ, ನಿರ್ದೇಶಕ ಯಾವುದರ ಬಗ್ಗೆಯೂ ಯೋಚನೆ ಮಾಡದೆ ಒಂದೇ ಬಾರಿಗೆ ಮೂರು ಸಿನಿಮಾಕ್ಕೆ ಸಹಿ ಹಾಕಿದ್ದಾರೆ. ಈ ಮೂರು ಸಿನಿಮಾ ಮುಂದಿನ ಮೂರು ಅಥವಾ ನಾಲ್ಕು ವರ್ಷಗಳಲ್ಲಿ ಬಿಡುಗಡೆ ಆಗಲಿದೆ. ತಾವು ಏಕೆ ಹೊಂಬಾಳೆ ಜೊತೆಗೆ ಮೂರು ಸಿನಿಮಾ ಒಟ್ಟಿಗೆ ಸಹಿ ಮಾಡಿದೆ ಎಂದು ಸ್ವತಃ ಪ್ರಭಾಸ್ ಹೇಳಿಕೊಂಡಿದ್ದಾರೆ.

ಪ್ರಭಾಸ್ ಹೊಂಬಾಳೆ ಜೊತೆಗೆ ಒಟ್ಟಿಗೆ ಮೂರು ಸಿನಿಮಾ ಸಹಿ ಮಾಡಲು ನಿರ್ಮಾಪಕ ವಿಜಯ್ ಕಿರಗಂದೂರು ಅವರೇ ಕಾರಣ ಅಂತೆ. 'ವಿಜಯ್ ಕಿರಗಂದೂರು, ತಮ್ಮ ಸಿನಿಮಾಕ್ಕೆ ಕೆಲಸ ಮಾಡುವ ಜನರನ್ನು ನೋಡಿಕೊಳ್ಳುವ ರೀತಿ, ಕೇರ್ ಮಾಡುವ ರೀತಿಗೆ ನಾನು ಮಾರು ಹೋದೆ. ಅವರೂ ಸಹ ನನ್ನಂತೆಯೇ. ತಮ್ಮ ಬಾಲ್ಯದ ಗೆಳೆಯರನ್ನು ಸದಾ ಹತ್ತಿರ ಇಟ್ಟುಕೊಂಡಿರುತ್ತಾರೆ. ಹೆಚ್ಚಿನ ಸಮಯ ಮನೆಯಲ್ಲೇ ಇರುತ್ತಾರೆ. ಹೊರಗೆ ಹೋಗುವುದು ಇಷ್ಟಪಡುವುದಿಲ್ಲ' ಎಂದಿದ್ದಾರೆ ಪ್ರಭಾಸ್. ಇದೆಲ್ಲದರ ಜೊತೆಗೆ ವಿಜಯ್ ಕಿರಗಂದೂರು ಬಹಳ ಸರಳವಾದ ವ್ಯಕ್ತಿ, ವಿನಯವಂತ ವ್ಯಕ್ತಿ, ಅತಿಯಾಸೆ ಇಲ್ಲದ ವ್ಯಕ್ತಿ, 'ಸಲಾರ್' ಸಿನಿಮಾದ ಬಳಿಕ ವಿಜಯ್ ಕಿರಗಂದೂರು ನಮ್ಮ ಕುಟುಂಬದವರಂತೆ ಆಗಿಬಿಟ್ಟಿದ್ದಾರೆ.

# ಜೆನಿಲಿಯಾಗೆ ಸ್ವಾಗತ ಕೋರಿದ ರಾಜಮೌಳಿ


ಜೆನಿಲಿಯಾ ಡಿಸೋಜಾ ಪ್ಯಾನ್ ಇಂಡಿಯಾ ಸಿನಿಮಾಗಳು ಶುರುವಾಗುವ ಮುಂಚೆಯೇ ಪ್ಯಾನ್ ಇಂಡಿಯಾ ನಟಿ ಆಗಿದ್ದವರು. ಅದರಲ್ಲೂ ತೆಲುಗು ಚಿತ್ರರಂಗದಲ್ಲಂತೂ ಬಹಳ ಬೇಡಿಕೆಯ ನಟಿ. ತೆಲುಗು ಪ್ರೇಕ್ಷಕರು ಜೆನಿಲಿಯಾ ಅನ್ನು ತಮ್ಮವರೇ ಎಂದುಕೊಂಡಿದ್ದರು. ಇದೀಗ 13 ವರ್ಷಗಳ ಬಳಿಕ ದಕ್ಷಿಣ ಭಾರತ ಚಿತ್ರರಂಗಕ್ಕೆ ಜೆನಿಲಿಯಾ ಮರಳುತ್ತಿದ್ದು, ರಾಜಮೌಳಿ, ನಟಿಯನ್ನು ಸ್ವಾಗತಿಸಿದ್ದಾರೆ. ಜೆನಿಲಿಯಾ ಡಿಸೋಜಾ ಪ್ಯಾನ್ ಇಂಡಿಯಾ ಸಿನಿಮಾಗಳ ಜಮಾನಕ್ಕೆ ಮುಂಚೆಯೇ ಪ್ಯಾನ್ ಇಂಡಿಯಾ ನಟಿ. ಕನ್ನಡ, ಹಿಂದಿ, ತಮಿಳು, ಮಲಯಾಳಂ ಸಿನಿಮಾಗಳಲ್ಲಿ ನಟಿಸಿದ್ದು ಮಾತ್ರವೇ ಅಲ್ಲದೆ, ತೆಲುಗು, ತಮಿಳು ಮತ್ತು ಹಿಂದಿ ಸಿನಿಮಾಗಳಲ್ಲಿ ಬಲು ಬೇಡಿಕೆಯ ನಟಿ ಸಹ ಆಗಿದ್ದರು. ಅದರಲ್ಲೂ ತೆಲುಗು ಸಿನಿಮಾ ಪ್ರೇಮಿಗಳ ಬಲು ಮೆಚ್ಚಿನ ನಾಯಕಿ ಸಹ ಆಗಿದ್ದರು ಜೆನಿಲಿಯಾ ಡಿಸೋಜಾ. ಆದರೆ ನಟ ರಿತೇಶ್ ದೇಶ್‌ಮುಖ್ ಜೊತೆ ವಿವಾಹದ ಬಳಿಕ ದಕ್ಷಿಣ ಭಾರತ ಚಿತ್ರರಂಗದಲ್ಲಿ ನಟಿಸುವುದು ಬಿಟ್ಟು ಬಿಟ್ಟರು. ಈಗ ಬರೋಬ್ಬರಿ 13 ವರ್ಷದ ಬಳಿಕ ದಕ್ಷಿಣ ಭಾರತ ಸಿನಿಮಾನಲ್ಲಿ ಮತ್ತೆ ನಟಿಸಿದ್ದಾರೆ. 2012 ರಲ್ಲಿ ಜೆನಿಲಿಯಾ ಡಿಸೋಜಾ, ನಟ ರಿತೇಶ್ ದೇಶ್ ಮುಖ್ ಜೊತೆ ವಿವಾಹವಾದರು. ಅದೇ ವರ್ಷವೇ ಅವರು 'ನಾ ಇಷ್ಟಂ' ಹೆಸರಿನ ತೆಲುಗು ಸಿನಿಮಾನಲ್ಲಿ ನಟಿಸಿದ್ದು, ಅದೇ ಅವರ ಕೊನೆಯ ದಕ್ಷಿಣ ಭಾರತ ಸಿನಿಮಾ ಆಗಿದೆ. ಆದರೆ ಈಗ 13 ವರ್ಷಗಳ ಬಳಿಕ ಜೆನಿಲಿಯಾ ಡಿಸೋಜಾ ಮತ್ತೆ ದಕ್ಷಿಣ ಭಾರತ ಚಿತ್ರರಂಗಕ್ಕೆ ಬಂದಿದ್ದಾರೆ. ಕನ್ನಡ ಮತ್ತು ತೆಲುಗಿನಲ್ಲಿ ಏಕಕಾಲಕ್ಕೆ ಬಿಡುಗಡೆ ಆಗುತ್ತಿರುವ 'ಜೂನಿಯರ್' ಸಿನಿಮಾ ಮೂಲಕ ಅವರು ಮರಳಿದ್ದು, ಖ್ಯಾತ ನಿರ್ದೇಶಕ ಎಸ್‌ಎಸ್ ರಾಜಮೌಳಿ, ಜೆನಿಲಿಯಾಗೆ ಸ್ವಾಗತ ಕೋರಿದ್ದಾರೆ.



# ರನ್ಯಾ ರಾವ್‌ಗೆ ಒಂದು ವರ್ಷ ಜೈಲೇ ಗತಿ

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟಿ ರನ್ಯಾ ರಾವ್ ಅವರಿಗೆ ಒಂದು ವರ್ಷ ಜಾಮೀನು ಸಿಗುವುದಿಲ್ಲ ಎನ್ನಲಾಗಿದೆ. ಕಠಿಣ ಕಾಯ್ದೆಯಾದ COFEPOSA ಅಡಿಯಲ್ಲಿ ದಾಖಲಾಗಿರುವ ಪ್ರಕರಣದಿಂದಾಗಿ ಅವರು ಒಂದು ವರ್ಷ ಜೈಲಿನಲ್ಲಿಯೇ ಇರಬೇಕಾಗಿದೆ. ಅವರು ವಿದೇಶದಿಂದ ಚಿನ್ನವನ್ನು ಸಾಗಾಟ ಮಾಡುತ್ತಿದ್ದರು ಮತ್ತು ಪೊಲೀಸ್ ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ ಎಂಬ ಆರೋಪಗಳಿವೆ. ಚಿನ್ನ ಕಳ್ಳ ಸಾಗಣೆ ಪ್ರಕರಣದಲ್ಲಿ ಮಾರ್ಚ್ 3ರಂದು ನಟಿ ರನ್ಯಾ ರಾವ್ ಅವರ ಬಂಧನ ಆಯಿತು. ಕಳೆದ ನಾಲ್ಕು ತಿಂಗಳಿಂದ ಅವರು ಜೈಲಿನಲ್ಲೇ ಇದ್ದಾರೆ. ಒಟ್ಟೂ ಒಂದು ವರ್ಷ ಅವರು ಜೈಲಿನಲ್ಲೇ ಇರಬೇಕಾದ ಪರಿಸ್ಥಿತಿ ಇದೆ. ಹೇಗಾದರೂ ಮಾಡಿ ಜಾಮೀನು ಪಡೆದು ಹೊರಬರಬೇಕು ಎಂದುಕೊಂಡಿದ್ದ ಅವರಿಗೆ ಈ ವಿಚಾರ ತಿಳಿದು ಮತ್ತಷ್ಟು ಚಿಂತೆ ಉಂಟಾಗಿದೆ. ಹಾಗಾದರೆ ಅವರಿಗೆ ಜಾಮೀನು ಸಿಗದೇ ಇರಲು ಕಾರಣ ಎಂಬುದರ ವಿವರ ಇಲ್ಲಿದೆ. ರನ್ಯಾ ರಾವ್ ಅವರು ವಿದೇಶದಿಂದ ಗೋಲ್ಡ್ ಸ್ಮಗ್ಲಿಂಗ್ ಮಾಡುತ್ತಿದ್ದರು. ಈ ರೀತಿಯಲ್ಲಿ ಅವರು ಈಗಾಗಲೇ ಸಾಕಷ್ಟು ವಂಚನೆ ಮಾಡಿದ್ದಾರೆ.






# ಟೆಕ್ಕಿ ಜೊತೆ ಆ.28ಕ್ಕೆ ಅನುಶ್ರೀ ಮದುವೆ!

## ಅದ್ದೂರಿ ಆರತಕ್ಷತೆಗೆ ಸ್ಥಳ ನಿಗದಿ

ಕನ್ನಡದ ಖ್ಯಾತ ನಿರೂಪಕಿ/ನಟಿ ಅನುಶ್ರೀ ಮದುವೆಯ ವದಂತಿ ಕಳೆದ ಕೆಲ ತಿಂಗಳಿಂದ ಜೋರಾಗಿತ್ತು. ಇದೀಗ ಮದುವೆಗೆ ದಿನಾಂಕ ಫಿಕ್ಸ್ ಆಗಿದೆ ಅನ್ನೋ ಮಾಹಿತಿ ಬಹುತೇಕ ಖಚಿತವಾಗಿದ್ದು ಆಗಸ್ಟ್ 28ಕ್ಕೆ ಎಂಬ ಪ್ರಾಥಮಿಕ ಮಾಹಿತಿ ಲಭ್ಯವಾಗಿದೆ. ಕುಟುಂಬಸ್ಥರು ನೋಡಿದ ಹುಡುಗನ ಜೊತೆಯೇ ಅನುಶ್ರೀ ಮದುವೆಯಾಗುತ್ತಿದ್ದು ಮಂಗಳೂರು ಮೂಲದ ಬೆಂಗಳೂರಿನಲ್ಲಿ ನೆಲೆಸಿರುವ ಟೆಕ್ಕಿ ಜೊತೆ ಅನುಶ್ರೀ ಕಲ್ಯಾಣ ಎನ್ನಲಾಗುತ್ತಿದೆ. ಮದುವೆ ನಿಶ್ಚಯವಾಗಿರುವ ಹುಡುಗ ಹಾಗೂ ಇನ್ನಿತರ ಮಾಹಿತಿಯನ್ನು ಅನುಶ್ರೀ ಗೌಪ್ಯವಾಗಿರಿಸಿದ್ದಾರೆ. ಆಗಸ್ಟ್ 28ರಂದು ಬೆಂಗಳೂರಿನಲ್ಲೇ ಅದ್ದೂರಿ ಆರತಕ್ಷತೆಗೆ ಸ್ಥಳ ನಿಗದಿಯಾಗಿರುವ ಸುದ್ದಿ ಬಂದಿದೆ. ಅನುಶ್ರೀ ಮದುವೆ ವಿಚಾರವಾಗಿ ಹಲವು ತಮಾಷೆಯ ಸಂಭಾಷಣೆಗಳು ನಡೆಯುತ್ತಲೇ ಇತ್ತು. ಮದುವೆ ಸುದ್ದಿ ಕೇಳ್ದಾಗೆಲ್ಲಾ ಈ ವರ್ಷವೇ ಮದುವೆ ಎಂದಿದ್ದರು ಅನುಶ್ರೀ. ಇದೀಗ ಮದುವೆಗೆ ಕಾಲ ಕೂಡಿಬಂದಿದ್ದು ಆಗಸ್ಟ್ 28ಕ್ಕೆ ಕಲ್ಯಾಣ ಎನ್ನಲಾಗುತ್ತಿದೆ. ಸರಳ ಶಾಸ್ತ್ರೋಕ್ತವಾಗಿ ಮದುವೆಯಾಗಿ ಬಳಿಕ ಆಗಸ್ಟ್ 28ಕ್ಕೆ ಸಿನಿಮಾ ಇಂಡಿಸ್ಟ್ರಿಯವರನ್ನ ಆಮಂತ್ರಿಸಿ ಅದ್ದೂರಿಯಾಗಿ ಆರತಕ್ಷತೆ ಮಾಡಿಕೊಳ್ಳುವ ಸಾಧ್ಯತೆ ಇದೆ.

# ಜಸ್ಪ್ರೀತ್ ಬುಮ್ರಾ ವಿರುದ್ಧ ಗವಾಸ್ಕರ್ ಗರಂ



ಭಾರತ ಮತ್ತು ಇಂಗ್ಲೆಂಡ್ ನಡುವಣ ನಾಲ್ಕನೇ ಟೆಸ್ಟ್ ಪಂದ್ಯವು ಜುಲೈ 23 ರಿಂದ ಶುರುವಾಗಲಿದೆ. ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫೋರ್ಡ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯವು ಟೀಮ್ ಇಂಡಿಯಾ ಪಾಲಿಗೆ ನಿರ್ಣಾಯಕ.

ಏಕೆಂದರೆ 5 ಪಂದ್ಯಗಳ ಸರಣಿಯಲ್ಲಿ ಇಂಗ್ಲೆಂಡ್ 2-1 ಅಂತರದಿಂದ ಮುನ್ನಡೆ ಹೊಂದಿದ್ದು, ಹೀಗಾಗಿ ಮ್ಯಾಚೆಂಸ್ಟರ್‌ನಲ್ಲಿ ಭಾರತ ತಂಡ ಗೆಲ್ಲುವುದು ಅಥವಾ ಡ್ರಾ ಸಾಧಿಸುವುದು ಅನಿವಾರ್ಯ. ಭಾರತ ಮತ್ತು ಇಂಗ್ಲೆಂಡ್ ನಡುವಣ 4ನೇ ಟೆಸ್ಟ್ ಪಂದ್ಯದಲ್ಲಿ ಜಸ್‌ಪ್ರೀತ್ ಬುಮ್ರಾ ಕಣಕ್ಕಿಳಿಯಲಿದ್ದಾರಾ ಈ ಪ್ರಶ್ನೆಗೆ ಇನ್ನೂ ಸಹ ಸ್ಪಷ್ಟ ಉತ್ತರವಿಲ್ಲ. ಏಕೆಂದರೆ ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ಬುಮ್ರಾ ಕೇವಲ 3 ಪಂದ್ಯಗಳಲ್ಲಿ ಮಾತ್ರ ಕಣಕ್ಕಿಳಿಯಲಿದ್ದಾರೆ ಎಂದು ಈಗಾಗಲೇ ಬಿಸಿಸಿಐ ಸ್ಪಷ್ಟಪಡಿಸಿದೆ. ಇದೇ ಕಾರಣದಿಂದಾಗಿ ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯದಿಂದ ಬುಮ್ರಾ ಹೊರಗುಳಿದಿದ್ದರು. ಇದೀಗ ಮ್ಯಾಚೆಂಸ್ಟರ್ ವಿರುದ್ಧದ ಪಂದ್ಯದ ವೇಳೆಯೂ ಟೀಮ್ ಇಂಡಿಯಾ ವೇಗಿ ವಿಶ್ರಾಂತಿ ತೆಗೆದುಕೊಳ್ಳಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿದೆ. ಇಂತಹದೊಂದು ಸುದ್ದಿ ಹುಟ್ಟಿಕೊಳ್ಳುತ್ತಿದ್ದಂತೆ ಟೀಮ್ ಇಂಡಿಯಾದ ಮಾಜಿ ಆಟಗಾರ ಸುನಿಲ್ ಗವಾಸ್ಕರ್, ಜಸ್‌ಪ್ರೀತ್ ಬುಮ್ರಾ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

**ಸುನಿಲ್ ಗವಾಸ್ಕರ್ ಗರಂ:** ಸೋನಿ ಸ್ಪೋರ್ಟ್ಸ್ ಚಾನೆಲ್‌ನಲ್ಲಿ ಮಾತನಾಡಿದ ಸುನಿಲ್ ಗವಾಸ್ಕರ್, ಭಾರತ ತಂಡದಲ್ಲಿರುವ ಯಾವುದೇ ಸೂಪರ್‌ಸ್ಟಾರ್ ವಿರಾಮ ತೆಗೆದುಕೊಳ್ಳಬಾರದು. ಏಕೆಂದರೆ ಅವರು ಇಲ್ಲಿಗೆ ರಜಾ ದಿನಗಳನ್ನು ಕಳೆಯಲು ಬಂದಿಲ್ಲ. ಪ್ರಮುಖ ಆಟಗಾರರು ಎಲ್ಲಾ ಪಂದ್ಯಗಳನ್ನು ಆಡಲೇಬೇಕು. ಹೀಗಾಗಿ ನಾಲ್ಕನೇ ಟೆಸ್ಟ್ ಪಂದ್ಯದ ವೇಳೆ ಯಾರಿಗೂ ವಿಶ್ರಾಂತಿ ನೀಡಬಾರದು ಎಂದು ಸುನಿಲ್ ಗವಾಸ್ಕರ್ ಆಗ್ರಹಿಸಿದ್ದಾರೆ. ಇಲ್ಲಿ ಸುನಿಲ್ ಗವಾಸ್ಕರ್ ಸೂಪರ್ ಸ್ಟಾರ್ ಎಂದಿರುವುದು ಜಸ್‌ಪ್ರೀತ್ ಬುಮ್ರಾ ಅವರನ್ನು. ಭಾರತ ತಂಡದ ಪ್ರಮುಖ ವೇಗಿಯಾಗಿರುವ ಬುಮ್ರಾ ಅವರಿಗೆ ಪದೇ ಪದೇ ವಿಶ್ರಾಂತಿ ನೀಡುತ್ತಿರುವುದಕ್ಕೆ ಗವಾಸ್ಕರ್ ಅಸಮಾಧಾನ ಹೊರಹಾಕಿದ್ದಾರೆ. ಪ್ರಮುಖ ಸರಣಿಗಳ ಪಂದ್ಯಗಳ ವೇಳೆ ವಿಶ್ರಾಂತಿ ನೀಡುತ್ತಿರುವುದರಿಂದ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ. ಅದರಲ್ಲೂ ವಾರಗಳ ಕಾಲ ವಿಶ್ರಾಂತಿ ಸಿಕ್ಕ ಮೇಲೂ ಜಸ್‌ಪ್ರೀತ್ ಬುಮ್ರಾ ಅವರನ್ನು ಪಂದ್ಯದ ವೇಳೆ ವಿಶ್ರಾಂತಿಯ ಕಾರಣ ಹೊರಗಿಡುತ್ತಿರುವುದನ್ನು ಟೀಮ್ ಇಂಡಿಯಾ ಕೋಚ್ ರವಿ ಶಾಸ್ತ್ರಿ ಕೂಡ ಪ್ರಶ್ನಿಸಿದ್ದಾರೆ. ಇದೀಗ ಗವಾಸ್ಕರ್ ಕೂಡ ಸೂಪರ್ ಸ್ಟಾರ್‌ಗಳಿಗೆ ವಿಶ್ರಾಂತಿ ನೀಡಲೇಬಾರದು ಎಂದು ಪುನರುಚ್ಚರಿಸಿದ್ದಾರೆ.

**ಜಸ್‌ಪ್ರೀತ್ ಬುಮ್ರಾಗೆ ವಿಶ್ರಾಂತಿ ಏಕೆ:** ಜಸ್‌ಪ್ರೀತ್ ಬುಮ್ರಾ ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಕೊನೆಯ ಪಂದ್ಯದ ವೇಳೆ ಬೆನ್ನು ನೋವಿನ ಸಮಸ್ಯೆಗೆ ಒಳಗಾಗಿದ್ದರು. ಈ ಸಮಸ್ಯೆಯ ಕಾರಣ ಅವರು ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿದಿರಲಿಲ್ಲ. ಇತ್ತ ಬುಮ್ರಾ ಅವರ ಅನುಪಸ್ಥಿತಿಯ ನಡುವೆಯೂ ಟೀಮ್ ಇಂಡಿಯಾ ಚಾಂಪಿಯನ್ಸ್ ಟ್ರೋಫಿ ಗೆಲ್ಲುವಲ್ಲಿ ಯಶಸ್ವಿಯಾಗಿತ್ತು. ಇದಾದ ಬಳಿಕ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಸಂಪೂರ್ಣ ಫಿಟ್‌ನೆಸ್‌ನೊಂದಿಗೆ ಕಾಣಿಸಿಕೊಂಡಿದ್ದ ಬುಮ್ರಾ ಅವರನ್ನು ಇಂಗ್ಲೆಂಡ್ ಸರಣಿಗೆ ಆಯ್ಕೆ ಮಾಡಲಾಗಿದೆ. ಆದರೆ ಅವರ ಮೇಲಿರುವ ಒತ್ತಡವನ್ನು ಕಡಿಮೆ ಮಾಡುವ ಸಲುವಾಗಿ ಇಂಗ್ಲೆಂಡ್ ವಿರುದ್ಧದ ಸರಣಿ ನಡುವೆ ಬುಮ್ರಾಗೆ ವಿಶ್ರಾಂತಿ ನೀಡಲು ಬಿಸಿಸಿಐ ನಿರ್ಧರಿಸಿದೆ. ಒಂದು ವೇಳೆ ಬುಮ್ರಾ ಅವರನ್ನು ಎಲ್ಲಾ ಪಂದ್ಯಗಳಲ್ಲಿ ಕಣಕ್ಕಿಳಿಸಿದರೆ ಅವರು ಮತ್ತೆ ನೋವಿನ ಸಮಸ್ಯೆಗೆ ಸಿಲುಕಬಹುದು.

# ವೆಸ್ಟ್ ಇಂಡೀಸ್‌ಗೆ ಪಾಕಿಸ್ತಾನ್ ಬೆದರಿಕೆ



## ಆಗಸ್ಟ್ 1 ರಿಂದ ಶುರು

ವೆಸ್ಟ್ ಇಂಡೀಸ್ ತಂಡವು ಇತ್ತೀಚಿನ ದಿನಗಳಲ್ಲಿ ಯಾವುದೇ ಏಕದಿನ ಪಂದ್ಯಗಳನ್ನು ಆಡಿಲ್ಲ. ಅದರಲ್ಲೂ, 2023ರ ಏಕದಿನ ವಿಶ್ವಕಪ್‌ಗೆ ಅರ್ಹತೆ ಪಡೆಯಲು ಸಾಧ್ಯವಾಗದ ಕಾರಣ ವಿಂಡೀಸ್ ಪಡೆ ಇದೀಗ 50 ಓವರ್‌ಗಳ ಪಂದ್ಯಗಳತ್ತ ಹೆಚ್ಚು ಗಮನ ಹರಿಸುತ್ತಿದೆ. ಆದರೆ ಪಾಕಿಸ್ತಾನ ಮುಂದಿನ ವರ್ಷ ನಡೆಯಲಿರುವ ಟಿ20 ವಿಶ್ವಕಪ್ ಅನ್ನು ಗಮನದಲ್ಲಿಟ್ಟುಕೊಂಡು ಹೆಚ್ಚಿನ ಟಿ20 ಪಂದ್ಯಗಳನ್ನು ಆಡಲು ಬಯಸುತ್ತಿದೆ. ಹೀಗಾಗಿಯೇ ಇದೀಗ ಏಕದಿನ ಸರಣಿಯನ್ನು ರದ್ದಗೊಳಿಸುವಂತೆ ಪಿಸಿಬಿ ಆಗ್ರಹಿಸಿದೆ. ಪಾಕಿಸ್ತಾನ್-ವೆಸ್ಟ್ ಇಂಡೀಸ್ ನಡುವಣ ಸರಣಿಯು ಆಗಸ್ಟ್ 1 ರಿಂದ ಶುರುವಾಗಲಿದೆ.

ಕೆರಿಬಿಯನ್ ದ್ವೀಪದಲ್ಲಿ ನಡೆಯಲಿರುವ ಈ ಸರಣಿಯಲ್ಲಿ ಉಭಯ ತಂಡಗಳು ಟಿ20 ಏಕದಿನ ಪಂದ್ಯಗಳನ್ನಾಡಬೇಕಿದೆ. ಆದರೆ ಈ ಮಧ್ಯೆ, ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಏಕದಿನ ಸರಣಿಯನ್ನು ಕೈ ಬಿಡುವಂತೆ ಆಗ್ರಹಿಸಿದೆ. ವೆಸ್ಟ್ ಇಂಡೀಸ್ ವಿರುದ್ಧ ಪಾಕಿಸ್ತಾನ್ ಕೇವಲ ಟಿ20 ಸರಣಿಯನ್ನು ಮಾತ್ರ ಆಡಲು ಬಯಸಿದ್ದು, ಹೀಗಾಗಿ ಏಕದಿನ ಸರಣಿಯನ್ನು ಕೈ ಬಿಡಲು ಈಗಾಗಲೇ ಪಿಸಿಬಿ ವೆಸ್ಟ್ ಇಂಡೀಸ್ ಕ್ರಿಕೆಟ್ ಬೋರ್ಡ್‌ಗೆ ತಿಳಿಸಿದೆ. ಇದಾಗ್ಯೂ, ವಿಂಡೀಸ್ ಕ್ರಿಕೆಟ್ ಮಂಡಳಿಯಿಂದ ಸೂಕ್ತ ಉತ್ತರ ದೊರೆತಿಲ್ಲ. ಹೀಗಾಗಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಸರಣಿಯನ್ನು ರದ್ದುಗೊಳಿಸುವುದಾಗಿ ಬೆದರಿಕೆ ಹಾಕಿದೆ. ಪಾಕಿಸ್ತಾನ್ ತಂಡವು ಆಗಸ್ಟ್ 1 ರಿಂದ 12 ರವರೆಗೆ ಅಮೆರಿಕ ಮತ್ತು ಕೆರಿಬಿಯನ್ ದ್ವೀಪಗಳಿಗೆ ಪ್ರವಾಸ ಮಾಡಲಿದೆ. ಈ ಸಮಯದಲ್ಲಿ ಮೂರು ಟಿ20 ಮತ್ತು ಮೂರು ಏಕದಿನ ಪಂದ್ಯಗಳ ಸರಣಿಯನ್ನು ಆಡಬೇಕಿದೆ, ಆದರೆ ಈಗ ಪಾಕಿಸ್ತಾನವು ಟಿ20 ಸರಣಿ ಮಾತ್ರ ಆಡಲು ತಯಾರಿದ್ದೇವೆ ಎಂದು ತಿಳಿಸಿದ್ದಾರೆ. ಅಲ್ಲದೆ ಏಕದಿನ ಪಂದ್ಯಗಳನ್ನು ಆಡಲು ನಿರಾಕರಿಸಿದೆ. ಒಂದು ವೇಳೆ ವೆಸ್ಟ್ ಇಂಡೀಸ್ ಕ್ರಿಕೆಟ್ ಮಂಡಳಿ ಏಕದಿನ ಸರಣಿಯನ್ನು ಆಡಬೇಕೆಂದು ಪಟ್ಟು ಹಿಡಿಯುವುದಾದರೆ, ಇಡೀ ಸರಣಿಯನ್ನು ರದ್ದುಗೊಳಿಸುವುದಾಗಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ತಿಳಿಸಿದೆ ಎಂದು ಕ್ರಿಕ್‌ಬಝ್ ವರದಿ ಮಾಡಿದೆ.

**6 ಪಂದ್ಯಗಳಿಗೆ ರೆಡಿ:** ವೆಸ್ಟ್ ಇಂಡೀಸ್ ಕ್ರಿಕೆಟ್ ಮಂಡಳಿ 6 ಪಂದ್ಯಗಳ ಸರಣಿ ಆಯೋಜಿಸಲೇಬೇಕು ಎಂದಿದ್ದರೆ, 6 ಟಿ20 ಪಂದ್ಯಗಳನ್ನಾಡಲು ಪಾಕಿಸ್ತಾನ್ ತಂಡ ರೆಡಿ ಎಂದು ಪಿಸಿಬಿ ತಿಳಿಸಿದೆ. ಇದರ ಹೊರತಾಗಿ 3 ಟಿ20 ಹಾಗೂ 3 ಏಕದಿನ ಪಂದ್ಯಗಳನ್ನು ಆಯೋಜಿಸುವುದು ಸೂಕ್ತವಲ್ಲ. ಬದಲಾಗಿ ಈಗಿರುವ ವೇಳಾಪಟ್ಟಿಯಂತೆ 3 ಏಕದಿನ ಪಂದ್ಯಗಳ ಬದಲಿಗೆ 3 ಟಿ20 ಪಂದ್ಯಗಳನ್ನು ಹೆಚ್ಚುವರಿಯಾಗಿ ನಡೆಸುವಂತೆ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಆಗ್ರಹಿಸಿದೆ. ಇದಾಗ್ಯೂ ಕ್ರಿಕೆಟ್ ವೆಸ್ಟ್ ಇಂಡೀಸ್ ಈ ಬಗ್ಗೆ ಚರ್ಚೆ ನಡೆಸಿದ್ದು, ಪ್ರಸ್ತುತ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ವೆಸ್ಟ್ ಇಂಡೀಸ್ ಕ್ರಿಕೆಟ್ ಮಂಡಳಿ 3 ಟಿ20 ಹಾಗೂ 3 ಏಕದಿನ ಪಂದ್ಯಗಳನ್ನು ಆಯೋಜಿಸಲಿದ್ದೇವೆ ಎಂದು ಕ್ರಿಸ್ ಡೆಹ್ರಿಂಗ್ ಹೇಳಿದ್ದಾರೆ.



# ಅಗ್ರ ಹತ್ತರ ಐವರು ಬೌಲರ್‌ಗಳು

ಐಸಿಸಿ ಟೆಸ್ಟ್ ಬೌಲರ್‌ಗಳ ನೂತನ ಶ್ರೇಯಾಂಕ ಪಟ್ಟಿಯಲ್ಲಿ ಆಸ್ಟ್ರೇಲಿಯಾದ ಐವರು ಬೌಲರ್‌ಗಳು ಸ್ಥಾನ ಪಡೆದಿದ್ದಾರೆ. ಇದೇ ವೇಳೆ ಅಗ್ರ ಹತ್ತರಲ್ಲಿ ಕಾಣಿಸಿಕೊಂಡಿರುವುದು ಟೀಮ್ ಇಂಡಿಯಾದ ಏಕೈಕ ವೇಗಿ ಮಾತ್ರ. ಅಲ್ಲದೆ ಅಗ್ರ ಇಪ್ಪತ್ತರಲ್ಲೂ ಸ್ಥಾನ ಪಡೆಯುವಲ್ಲಿ ಭಾರತದ ಇತರೆ ವೇಗದ ಬೌಲರ್‌ಗಳಿಗೆ ಸಾಧ್ಯವಾಗಿಲ್ಲ. ಐಸಿಸಿ ಟೆಸ್ಟ್ ಬೌಲರ್‌ಗಳ ನೂತನ ರ್‍ಯಾಂಕಿಂಗ್ ಪಟ್ಟಿಯನ್ನು ಪ್ರಕಟಿಸಿದೆ. ಹೊಸ ಶ್ರೇಯಾಂಕ ಪಟ್ಟಿಯಲ್ಲಿ ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ಅಗ್ರಸ್ಥಾನ ಅಲಂಕರಿಸಿದರೆ, ಸೌತ್ ಆಫ್ರಿಕಾದ ಕಗಿಸೊ ರಬಾಡ ದ್ವಿತೀಯ ಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ. ಇನ್ನು ಟಾಪ್-10 ಪಟ್ಟಿಯಲ್ಲಿ ಆಸ್ಟ್ರೇಲಿಯಾದ ಐವರು ಬೌಲರ್‌ಗಳು ಕಾಣಿಸಿಕೊಂಡಿರುವುದು ವಿಶೇಷ. ಆ ಬೌಲರ್‌ಗಳೆಂದರೆ.

ಪ್ಯಾಟ್ ಕಮಿನ್ಸ್: ವೆಸ್ಟ್ ಇಂಡೀಸ್ ವಿರುದ್ಧದ ಮೂರು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಅತ್ಯುತ್ತಮ ಬೌಲಿಂಗ್ ಪ್ರದರ್ಶನ ನೀಡಿದ್ದ ಆಸ್ಟ್ರೇಲಿಯಾ ತಂಡದ ನಾಯಕ ಪ್ಯಾಟ್ ಕಮಿನ್ಸ್ ಟೆಸ್ಟ್ ಬೌಲರ್‌ಗಳ ನೂತನ ರ್‍ಯಾಂಕಿಂಗ್ ಪಟ್ಟಿಯಲ್ಲಿ ಒಟ್ಟು 838 ಅಂಕಗಳನ್ನು ಕಲೆಹಾಕಿದ್ದಾರೆ. ಈ ಮೂಲಕ ಮೂರನೇ ರ್‍ಯಾಂಕ್ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

**ಜೋಶ್ ಹೇಝಲ್‌ವುಡ್:** ಆಸ್ಟ್ರೇಲಿಯಾ ತಂಡದ ಬೌಲಿಂಗ್ ಬಲವಾಗಿ ಗುರುತಿಸಿಕೊಂಡಿರುವ ಜೋಶ್ ಹೇಝಲ್ ವುಡ್ ವಿಂಡೀಸ್ ವಿರುದ್ಧದ ಟೆಸ್ಟ್ ಪಂದ್ಯಗಳಲ್ಲಿ ಉತ್ತಮ ದಾಳಿ ಸಂಘಟಿಸಿದ್ದರು. ಈ ಮೂಲಕ 815 ಅಂಕಗಳೊಂದಿಗೆ ಟೆಸ್ಟ್ ಬೌಲರ್‌ಗಳ ಶ್ರೇಯಾಂಕದಲ್ಲಿ ನಾಲ್ಕನೇ ಸ್ಥಾನ ಅಲಂಕರಿಸಿದ್ದಾರೆ.

**ಸ್ಕಾಟ್ ಬೋಲ್ಯಾಂಡ್:** ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಸರಣಿಯ ಮೂರನೇ ಪಂದ್ಯದಲ್ಲಿ ಹ್ಯಾಟ್ರಿಕ್ ವಿಕೆಟ್ ಕಬಳಿಸಿ ಇತಿಹಾಸ ನಿರ್ಮಿಸಿದ್ದ ಸ್ಕಾಟ್ ಬೋಲ್ಯಾಂಡ್ 6 ಸ್ಥಾನ ಮೇಲೇರಿದ್ದು, ಈ ಮೂಲಕ ನೂತನ ಶ್ರೇಯಾಂಕ ಪಟ್ಟಿಯಲ್ಲಿ 784 ಅಂಕಗಳೊಂದಿಗೆ ಆರನೇ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.



# ಇತಿಹಾಸ ನಿರ್ಮಿಸಿದ ಬಾಂಗ್ಲಾದೇಶ್

## ಲಂಕಾ ಪಡೆ ವಿರುದ್ಧ ಸರಣಿ ಗೆಲುವು

ಬಾಂಗ್ಲಾದೇಶ್ ವಿರುದ್ಧದ ಮೂರು ಪಂದ್ಯಗಳ ಟಿ20 ಸರಣಿಯ ಮೊದಲ ಮ್ಯಾಚ್‌ನಲ್ಲಿ ಶ್ರೀಲಂಕಾ ತಂಡವು 7 ವಿಕೆಟ್‌ಗಳ ಜಯ ಸಾಧಿಸಿತ್ತು. ಇನ್ನು ದ್ವಿತೀಯ ಟಿ20 ಪಂದ್ಯದಲ್ಲಿ ಬಾಂಗ್ಲಾದೇಶ್ ತಂಡವು 83 ರನ್‌ಗಳ ಭರ್ಜರಿ ಗೆಲುವು ದಾಖಲಿಸಿತ್ತು. ಇದೀಗ ಮೂರನೇ ಟಿ20 ಪಂದ್ಯದಲ್ಲೂ 8 ವಿಕೆಟ್‌ಗಳ ಜಯ ಸಾಧಿಸಿ ಬಾಂಗ್ಲಾ ಪಡೆ ಸರಣಿ ಗೆದ್ದುಕೊಂಡಿದೆ. ಕೊಲಂಬೊದಲ್ಲಿ ನಡೆದ ಶ್ರೀಲಂಕಾ ವಿರುದ್ಧದ ಮೂರನೇ ಟಿ20 ಪಂದ್ಯದಲ್ಲಿ ಬಾಂಗ್ಲಾದೇಶ್ ತಂಡ ಜಯಭೇರಿ ಬಾರಿಸಿದೆ. ಈ ಗೆಲುವಿನೊಂದಿಗೆ ಇದೇ ಮೊದಲ ಬಾರಿಗೆ ಬಾಂಗ್ಲಾ ಪಡೆ ಲಂಕಾ ವಿರುದ್ಧ ಟಿ20 ಸರಣಿ ಗೆದ್ದು ಇತಿಹಾಸ ನಿರ್ಮಿಸಿದೆ. ಆರ್ ಪ್ರೇಮದಾಸ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಶ್ರೀಲಂಕಾ ತಂಡದ ನಾಯಕ ಚರಿತ್ ಅಸಲಂಕಾ ಬ್ಯಾಟಿಂಗ್ ಆಯ್ದುಕೊಂಡಿದ್ದರು.

ಅದರಂತೆ ಮೊದಲು ಬ್ಯಾಟ್ ಮಾಡಿದ ಲಂಕಾ ತಂಡವು ನಿರೀಕ್ಷಿತ ಆರಂಭ ಪಡೆಯಲು ಸಾಧ್ಯವಾಗಿರಲಿಲ್ಲ.

ಕೇವಲ 66 ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ ತಂಡಕ್ಕೆ ಕೊನೆಯ ಹಂತದಲ್ಲಿ ದಸುನ್ ಶಾನಕ ಆಸರೆಯಾಗಿ ನಿಂತರು.



ಏಳನೇ ಕ್ರಮಾಂಕದಲ್ಲಿ ಶಾನಕ ಕಲೆಹಾಕಿದ 35 ರನ್‌ಗಳ ನೆರವಿನೊಂದಿಗೆ ಶ್ರೀಲಂಕಾ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 132 ರನ್ ಕಲೆಹಾಕಿತು. ಈ ಸುಲಭ ಗುರಿಯನ್ನು ಬೆನ್ನತ್ತಿದ ಬಾಂಗ್ಲಾದೇಶ್ ಪರ ತಂಝೀಮ್ ಹಸನ್ ತಮೀಮ್ 47 ಎಸೆತಗಳಲ್ಲಿ 6 ಸಿಕ್ಸ್ ಹಾಗೂ 1 ಫೋರ್‌ನೊಂದಿಗೆ ಅಜೇಯ 73 ರನ್ ಬಾರಿಸಿದರು. ಇನ್ನು ನಾಯಕ ಲಿಟ್ಟನ್ ದಾಸ್ 32 ರನ್ ಕಲೆಹಾಕಿದರು. ಇನ್ನು ತೌಹಿದ್ ಹೃದೋಯ್ 27 ರನ್‌ಗಳ ಕೊಡುಗೆ ನೀಡಿದರು. ಈ ಮೂಲಕ ಬಾಂಗ್ಲಾದೇಶ್ ತಂಡವು 16.3 ಓವರ್‌ಗಳಲ್ಲಿ 133 ರನ್ ಬಾರಿಸಿ, 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು. ಈ ಭರ್ಜರಿ ಗೆಲುವಿನೊಂದಿಗೆ ಬಾಂಗ್ಲಾದೇಶ್ ತಂಡವು ಶ್ರೀಲಂಕಾ ವಿರುದ್ಧ ಟಿ20 ಸರಣಿ ಗೆದ್ದುಕೊಂಡಿದೆ.

ಅದು ಕೂಡ ಇದೇ ಮೊದಲ ಬಾರಿಗೆ. ಅಂದರೆ ಬಾಂಗ್ಲಾದೇಶ್ ತಂಡವು ಈವರೆಗೆ ಶ್ರೀಲಂಕಾ ವಿರುದ್ಧ ಟಿ20 ಸರಣಿ ಗೆದ್ದಿಲ್ಲ. ಈ ಬಾರಿ ಲಂಕಾ ಪಡೆ ವಿರುದ್ಧ 2-1 ಅಂತರದಿಂದ ಸರಣಿ ಗೆಲ್ಲುವ ಮೂಲಕ ಬಾಂಗ್ಲಾದೇಶ್ ತಂಡವು ಹೊಸ ಇತಿಹಾಸ ನಿರ್ಮಿಸುವಲ್ಲಿ ಯಶಸ್ವಿಯಾಗಿದೆ.

ಶ್ರೀಲಂಕಾ ಪ್ಲೇಯಿಂಗ್ 11: ಪಾತುಮ್ ನಿಸ್ಸಾಂಕ , ಕುಸಾಲ್ ಮೆಂಡಿಸ್ (ವಿಕೆಟ್ ಕೀಪರ್) , ಕುಸಲ್ ಪೆರೇರಾ , ದಿನೇಶ್ ಚಂಡಿಮಾಲ್ , ಕಮಿಂದು ಮೆಂಡಿಸ್ , ಚರಿತ್ ಅಸಲಂಕ (ನಾಯಕ) , ದಸುನ್ ಶಾನಕ , ಮಹೀಶ್ ತೀಕ್ಷಣ , ಜೆಫ್ರಿ ವಾಂಡರ್ಸೆ , ಬಿನೂರ ಫೆರ್ನಾಂಡೋ , ನುವಾನ್ ತುಷಾರ.

ಬಾಂಗ್ಲಾದೇಶ್ ಪ್ಲೇಯಿಂಗ್ 11: ತಂಝಿದ್ ಹಸನ್ ತಮೀಮ್ ಪರ್ವೇಜ್ ಹೊಸೈನ್ ಎಮೋನ್ , ಲಿಟ್ಟನ್ ದಾಸ್ (ನಾಯಕ) , ತೌಹಿದ್ ಹೃದೋಯ್ , ಜೇಕರ್ ಅಲಿ , ಶಮೀಮ್ ಹೊಸೈನ್ , ಮಹೇದಿ ಹಸನ್ , ರಿಶಾದ್ ಹೊಸೈನ್ , ತಂಝಿಮ್ ಹಸನ್ ಸಾಕಿಬ್ , ಶೋರಿಫುಲ್ ಇಸ್ಲಾಂ , ಮುಸ್ತಾಫಿಝುರ್ ರೆಹಮಾನ್.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966